22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 208 | ನವದೆಹಲಿ | ಬೆಲೆ ₹ 10 | ಜನವರಿ 28, 2025 ಮಂಗಳವಾರ

## ಒಳಪುಟಗಳಲ್ಲಿ

ರೋಹಿಂಗ್ಯಾ ನಿರಾಶ್ರಿತ ಮಕ್ಕಳು ಶಿಕ್ಷಣ ಪಡೆಯಲು ಅರ್ಹರು: ಸುಪ್ರೀಂ - ಪು.4

ಅಧಿಕೃತ ಆದೇಶ ಬರುವವರೆಗೂ ನೋಂದಣಿ ಮಾಡಬೇಡಿ: ಇ.ಡಿ - ಪು.5

ಕರ್ನಾಟಕ ವಿಶ್ವವಿದ್ಯಾಲಯದಿಂದ ಪಥ್ಯ ಹಿಂದಕ್ಕೆ - ಪು.6

ಜಾತಿಜನಗಣತಿ ವರದಿಯನ್ನು ಬಿಡುಗೊಳಿಸುವಂತೆ ಒತ್ತಾಯಿಸಿ ಪ್ರತಿಭಟನೆ - ಪು.7

## ದೆಹಲಿ ವಿಧಾನಸಭೆ ಚುನಾವಣೆಗೆ ಕೇಜ್ರಿವಾಲ್ 15 ಗ್ಯಾರಂಟಿ

**ನವದೆಹಲಿ, ಜ.27: ವಿಧಾನಸಭೆ ಚುನಾವಣೆ ಹಿನ್ನಲೆ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ 15 ಗ್ಯಾರಂಟಿಗಳನ್ನು ಘೋಷಿಸಿದ್ದಾರೆ. ಪಕ್ಷ ಅಧಿಕಾರಕ್ಕೆ ಬಂದಲ್ಲಿ ಮಹಿಳೆಯರಿಗೆ ಮಾಸಿಕ 2100 ನೀಡಲಾಗುವುದು, ನೀರಿನ ಬಿಲ್ ಮನ್ನಾ ಮಾಡಲಾಗುವುದು ಹಾಗೂ ವಿದ್ಯಾರ್ಥಿಗಳಿಗೆ ಬಸ್‌ನಲ್ಲಿ ಉಚಿತ, ಮೆಟ್ರೋದಲ್ಲಿ 50% ರಿಯಾಯತಿ ದರದಲ್ಲಿ ಪ್ರಯಾಣ ಸೌಲಭ್ಯ ಒದಗಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.**



ಪಕ್ಷದಲ್ಲಿ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಗ್ಯಾರಂಟಿ ಎನ್ನುವ ಕಲ್ಪನೆಯನ್ನು ಮೊದಲು ಜಾರಿ ಮಾಡಿದ್ದು ನಾವು ಇಂದು ಅದನ್ನು ಇತರೆ ಪಕ್ಷಗಳು ಅತಿಕ್ರಮಣ ಮಾಡಿಕೊಂಡಿವೆ. ಪ್ರತಿ ಚುನಾವಣೆಗೆ ಒಂದೊಂದು ಹೆಸರಿನಲ್ಲಿ ಪಕ್ಷಗಳು ಭರವಸೆ ನೀಡುತ್ತವೆ, ನಾವು ಕೊಟ್ಟ ಗ್ಯಾರಂಟಿಗಳನ್ನು ಈಡೇರಿಸಿದ್ದೇವೆ ಎಂದರು.

ಪಕ್ಷದ ಅಧಿಕಾರಕ್ಕೆ ಬಂದಲ್ಲಿ ನಿರುದ್ಯೋಗದ ವಿರುದ್ಧ ಸಮರ ಸಾರಲಿದೆ, ನಮ್ಮ ಬಳಿ ವಿದ್ಯಾವಂತರ ತಂಡವಿದೆ ಅದನ್ನು ಬಳಸಿಕೊಂಡು ಎಲ್ಲರಿಗೂ ಉದ್ಯೋಗ ನೀಡುವ ಕೆಲಸ ಮಾಡುತ್ತೇವೆ ಎಂದರು. ದೇಶದಲ್ಲೂ ನಿರುದ್ಯೋಗ ಸಮಸ್ಯೆ 6% ಇದ್ದರೆ ದೆಹಲಿಯಲ್ಲಿ 2% ಇದೆ ಅದನ್ನೂ ನಾವು 0% ತರಲಿದ್ದೇವೆ ಶಿಕ್ಷಣ ಮುಗಿಸಿದ ಯಾವ ಯುವಕನೂ ಹಾಗೇ ಕೂರಲು ಬಿಡುವುದಿಲ್ಲ ಎಂದರು.

ಮಹಿಳೆಯರಿಗೆ ಮಹಿಳಾ ಸಮ್ಮಾನ್ ಯೋಜನೆಯಡಿ ಮಾಸಿಕ 2100 ಸಹಾಯ ಧನ ನೀಡಲಾಗುವುದು, 60 ವರ್ಷ ಮೇಲ್ಪಟ್ಟ ವೃದ್ಧರಿಗೆ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳಲ್ಲಿ ಸರ್ಕಾರ ಉಚಿತ ಚಿಕಿತ್ಸೆ ನೀಡಲಿದೆ. ದಿನದ 24 ಗಂಟೆ ಸ್ವಚ್ಛ ನೀರಿನ ವ್ಯವಸ್ಥೆ ಮಾಡಲಾಗುವುದು, ಈವರೆಗೂ ಬಂದಿರುವ ನೀರಿನ ಬಿಲ್ ಮನ್ನಾ ಮಾಡಲಾಗುವುದು ಎಂದರು.

ವಿದೇಶಗಳಲ್ಲಿ ವ್ಯಾಸಂಗ ಮಾಡುವ ದಲಿತ ವಿದ್ಯಾರ್ಥಿಗಳಿಗೆ ಅಂಬೇಡ್ಕರ್ ಅವರ ಹೆಸರಿನಲ್ಲಿ ಸ್ಕಾಲರ್ಶಿಪ್ ನೀಡಲಾಗುವುದು, ದೆಹಲಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪ್ರಯಾಣಕ್ಕೆ ಅವಕಾಶ ನೀಡಲಾಗುತ್ತದೆ, ದೆಹಲಿ ಮೆಟ್ರೋಗಳಲ್ಲಿ 50% ರಿಯಾಯತಿ ದರದಲ್ಲಿ ಪ್ರಯಾಣಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

ದೆಹಲಿಯಲ್ಲಿ ಯುರೋಪ್ ದೇಶಗಳ ರೀತಿಯಲ್ಲಿ ರಸ್ತೆಗಳನ್ನು ನಿರ್ಮಿಸಲಾಗುವುದು, ಒಳ ಚರಂಡಿ ವ್ಯವಸ್ಥೆಯನ್ನು ಸುಧಾರಿಸಲಾಗುವುದು, ದೇವಸ್ಥಾನ ಮತ್ತು ಗುರುದ್ವಾರಗಳಲ್ಲಿರುವ ಅರ್ಚಕರು ಮತ್ತು ಗ್ರಂಥಿಗಳಿಗೆ ಮಾಸಿಕ ?18000 ನೀಡಲಾಗುವುದು, ರೇಷನ್ ಕಾರ್ಡ್ ನೊಂದಣಿಗೆ ಚಾಲನೆ ನೀಡಲಾಗುವುದು ಮತ್ತು ರೆಷಿಡೆಂಟ್ ಅಸೋಷಿಯನ್ ಗಳ ಸೆಕ್ಯೂರಿಟಿ ಗಾರ್ಡ್ ಗಳಿಗೆ ಸರ್ಕಾರದಿಂದ ವೇತನ ನೀಡಕಾಗುವುದು ಎಂದು ಹೇಳಿದರು.

2020 ರಲ್ಲಿ ನಾವು ಯಮುನಾ ನದಿಯ ಸ್ವಚ್ಛ ಮಾಡುವ ಭರವಸೆ ನೀಡಿದ್ದೆವು, ಅದನ್ನು ನಾವು ಮುಂದುವರಿಸುತ್ತೇವೆ. ಯಮುನಾ ನದಿ ಸ್ವಚ್ಛ ಮಾಡಲು ಬೇಕಿರುವ ಅಗತ್ಯ ಪ್ಲ್ಯಾನ್ ಜೊತೆಗೆ ಹಣ ಕೂಡಾ ಸರ್ಕಾರದ ಬಳಿ ಇದ್ದು ನಾವು ನದಿಯ ಸ್ವಚ್ಛತೆಯನ್ನು ಮುಂದುವರಿಸುತ್ತೇವೆ ಎಂದು ಕೇಜ್ರಿವಾಲ್ ಭರವಸೆ ನೀಡಿದ್ದಾರೆ. ದೆಹಲಿಯ 70 ಕ್ಷೇತ್ರಗಳಿಗೆ ಫೆಬ್ರುವರಿ 5 ರಂದು ಚುನಾವಣೆ ನಡೆಯಲಿದ್ದು 10 ರಂದು ಫಲಿತಾಂಶ ಪ್ರಕಟವಾಗಲಿದೆ.

## ಕನ್ನಡಪರ ಹೋರಾಟಗಾರರ ಎಲ್ಲಾ ಕೇಸ್ ವಾಪಸ್

- ತಾಯಿ ಭುವನೇಶ್ವರಿಯ ಪುತ್ಥಳಿ ವಿಧಾನಸೌಧದಲ್ಲಿ ಸ್ಥಾಪಿಸಿದ್ದು ಸಮಸ್ತ ಕನ್ನಡಿಗರ ಹೆಮ್ಮೆಯ ದಿನ: ಸಿ.ಎಂ.ಸಿದ್ದರಾಮಯ್ಯ
- ನಾವು ಎಲ್ಲಾ ಭಾಷೆಗಳನ್ನು ಪ್ರೀತಿಸಬೇಕು. ಕನ್ನಡವನ್ನು ಮಾತ್ರ ಬಳಸಬೇಕು, ಬೆಳೆಸಬೇಕು, ಬೆಳಗಬೇಕು: ಸಿ.ಎಂ ಸಿದ್ದರಾಮಯ್ಯ ಕರೆ



**ಬೆಂಗಳೂರು, ಜ.27:** ನಾವು ಎಲ್ಲಾ ಭಾಷೆಗಳನ್ನು ಪ್ರೀತಿಸಬೇಕು. ಕನ್ನಡವನ್ನು ಮಾತ್ರ ಬಳಸಬೇಕು, ಬೆಳೆಸಬೇಕು, ಬೆಳಗಬೇಕು ಎಂದು ಸಿ.ಎಂ ಸಿದ್ದರಾಮಯ್ಯ ಅವರು ಕರೆ ನೀಡಿದರು.

ವಿಧಾನಸೌಧದ ಆವರಣದಲ್ಲಿ ತಾಯಿ ಭುವನೇಶ್ವರಿಯ ವೈಭವದ ಪುತ್ಥಳಿಯನ್ನು ಅನಾವರಣಗೊಳಿಸಿ ಮಾತನಾಡಿದರು.

ದೇವರಾಜ ಅರಸರು ಮುಖ್ಯಮಂತ್ರಿಯಾಗಿದ್ದಾಗ ಕರ್ನಾಟಕ ಎಂದು ನಾಮಕರಣ ಮಾಡಿದರು. 2023ಕ್ಕೆ ಈ ನಾಮಕರಣ ಆಗಿ 50 ವರ್ಷ ತುಂಬಿದರೂ ಆಗಿನ ಬಿಜೆಪಿ ಸರ್ಕಾರ ಈ ಸುವರ್ಣೋತ್ಸವವನ್ನು ಬೇಕಂತಲೇ ಕೈಬಿಟ್ಟರು. ಆದರೆ ನಾವು ಅಧಿಕಾರಕ್ಕೆ ಬಂದು ಒಂದು ವರ್ಷ ಲೇಟಾದರೂ ಕರ್ನಾಟಕದ ಸುವರ್ಣೋತ್ಸವವನ್ನು ಆರಂಭಿಸಿ ಇಡೀ ವರ್ಷ ಆಚರಿಸಲು ನಿರ್ಧರಿಸಿದೆವು. ಕನ್ನಡ ಭಾಷೆ, ಸಂಸ್ಕೃತಿ ವಿಚಾರದಲ್ಲಿ ಇದು ನಮ್ಮ ಬದ್ಧತೆ ಎಂದು ಸ್ಪಷ್ಟಪಡಿಸಿದರು.

ಕನ್ನಡ ಭಾಷೆ, ಸಂಸ್ಕೃತಿ, ಕಲೆಯನ್ನು ರಾಜ್ಯದ ಪ್ರತಿಯೊಬ್ಬರೂ ಅಭಿಮಾನ ಬೆಳೆಸಿಕೊಳ್ಳಬೇಕು. ಹೆಸರಾಯಿತು ಕರ್ನಾಟಕ–ಉಸಿರಾಗಲಿ ಕರ್ನಾಟಕ ಎನ್ನುವುದು ನಮ್ಮ ನಿಮ್ಮೆಲ್ಲರ ಅಭಿಮಾನವಾಗವಾಗಬೇಕು. ಆಗ ಮಾತ್ರ ಕನ್ನಡ ಸಾರ್ವಭೌಮಭಾಷೆಯಾಗುತ್ತದೆ ಎಂದರು.

ನಾವು ಎಲ್ಲಾ ಭಾಷೆಗಳನ್ನು ಪ್ರೀತಿಸಬೇಕು. ಕನ್ನಡವನ್ನು ಬಳಸಬೇಕು, ಬೆಳೆಸಬೇಕು, ಬೆಳಗಬೇಕು. ನಾವು ನಮ್ಮ ಸಹೋದರ ಮತ್ತು ಇತರೆ ಭಾಷಿಕರ ಜೊತೆ ಕನ್ನಡದಲ್ಲಿ ಮಾತನಡುವ, ವ್ಯವಹರಿಸುವ ಸಂಸ್ಕೃತಿಯನ್ನು ಪಾಲಿಸಬೇಕು ಎಂದು ಕರೆ ನೀಡಿದರು.

ಇತರೆ ಭಾಷೆಯಲ್ಲಿ ತಪ್ಪು ತಪ್ಪಾಗಿ ಮಾತನಾಡುವುದಕ್ಕಿಂತ ನಮ್ಮದೇ ಭಾಷೆಯಲ್ಲಿ ಮಾತಾಡಬೇಕು. ಅಕ್ಕ ಪಕ್ಕದ ಎಲ್ಲಾ ರಾಜ್ಯಗಳಲ್ಲೂ ಆಯಾ ರಾಜ್ಯದ ಜನರಾಡುವ ಭಾಷೆಯೇ ಸಾರ್ವಭೌಮ. ನಮ್ಮಲ್ಲೂ ಇದನ್ನೇ ಆಚರಿಸಬೇಕು ಎಂದು ಕರೆ ನೀಡಿದರು. ಒಂದು ಭಾಷೆ ಮಾತನಾಡುವ ಜನ ಒಂದು ಆಡಳಿತದ ಸೂರಿನಡಿ ಬರಬೇಕು ಎನ್ನುವುದು ಕನ್ನಡ ಏಕೀಕರಣ ಚಳವಳಿಯ ಆಶಯವಾಗಿತ್ತು. ಈ ಆಶಯ ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಯಾಗಬೇಕು. ಕನ್ನಡ ಓದುವುದನ್ನು, ಬರೆಯುವುದನ್ನು ಹೆಚ್ಚೆಚ್ಚು ಕಲಿಯಬೇಕು, ಕಲಿಸಬೇಕು ಎಂದು ಕರೆ ನೀಡಿದರು.

## ಗಣರಾಜ್ಯೋತ್ಸವದಲ್ಲಿ ಭಾಗಿಯಾದ ಲಕ್ಕುಂಡಿ ಸ್ತಬ್ಧಚಿತ್ರಕ್ಕೆ ಮತ ನೀಡಲು ಹೇಮಂತ್ ನಿಂಬಾಳ್ಕರ್ ಮನವಿ

ನವದೆಹಲಿ : ದೆಹಲಿಯಲ್ಲಿ ಜನವರಿ 26 ರಂದು ನಡೆದ 76ನೇ ಗಣರಾಜ್ಯೋತ್ಸವದ ಅಂಗವಾಗಿ ಪಥ ಸಂಚಲನದಲ್ಲಿ ಭಾಗವಹಿಸಿದ್ದ ವಿವಿಧ ರಾಜ್ಯಗಳ ಸ್ತಬ್ಧಚಿತ್ರಗಳನ್ನು ಜನಾಭಿಪ್ರಾಯ ಆಧರಿಸಿ ಪ್ರಶಸ್ತಿಗೆ ಪರಿಗಣಿಸಲು ಕೇಂದ್ರ ಸರ್ಕಾರದ ರಕ್ಷಣಾ ಸಚಿವಾಲಯವು ಆನ್ಲೈನ್ ನಲ್ಲಿ ಓಟ್ ಮಾಡಲು ಅವಕಾಶ ಕಲ್ಪಿಸಿದೆ.

ಈ ಬಾರಿ ಕರ್ನಾಟಕವು ಲಕ್ಕುಂಡಿ, ಶಿಲ್ಪಕಲೆಯ ತೊಟ್ಟಿಲು ಸ್ತಬ್ಧಚಿತ್ರದೊಂದಿಗೆ ಭಾಗವಹಿಸಿತ್ತು. ಅಪಾರ ಜನರ ಮೆಚ್ಚುಗೆಗೆ ಪಾತ್ರವಾಗಿರುವ ನಮ್ಮ ರಾಜ್ಯದ ಸ್ತಬ್ಧಚಿತ್ರವನ್ನು ಓಟ್ ಮಾಡಿ ಬೆಂಬಲಿಸುವಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಹೇಮಂತ್ ಎಂ. ನಿಂಬಾಳ್ಕರ್ ಅವರು ಮನವಿ ಮಾಡಿದ್ದಾರೆ. ಕೇಂದ್ರ ಸರ್ಕಾರವು ಅತ್ಯುತ್ತಮ ಸ್ತಬ್ಧಚಿತ್ರದ ಆಯ್ಕೆಗಾಗಿ ಸಾರ್ವಜನಿಕರು ಆನ್‌ಲೈನ್, ಇಮೇಲ್ ಮತ್ತು ಎಸ್‌ಎಂಎಸ್ ಮೂಲಕ ಓಟ್ ಮಾಡಲು ಅವಕಾಶ ಕಲ್ಪಿಸಿದೆ. ಜ. 28ರ ಮಧ್ಯರಾತ್ರಿ 12ರ ವರೆಗೆ ಓಟ್ ಮಾಡಲು ಅವಕಾಶವಿದೆ. ಸಾರ್ವಜನಿಕರು ನಿಗದಿತ ಅವಧಿಯೊಳಗೆ ಓಟ್ ಮಾಡಿ ರಾಜ್ಯದ ಸ್ತಬ್ಧಚಿತ್ರವನ್ನು ಬೆಂಬಲಿಸುವಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ. ಓಟ್ ಮಾಡುವ ವಿಧಾನದ ಬಗ್ಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಕಿರುಚಿತ್ರವನ್ನು ಸಹ ಬಿಡುಗಡೆಗೊಳಿಸಿದೆ. ಇದನ್ನು ಅನುಸರಿಸಿ, **Lakkundi Cradle of stone Craft** ವಿಷಯದ ಸ್ತಬ್ಧಚಿತ್ರಕ್ಕೆ ಹೆಚ್ಚು ಹೆಚ್ಚು ಓಟ್ ಮಾಡುವ ಮೂಲಕ ಬೆಂಬಲ ಹಾಗೂ ಮೆಚ್ಚುಗೆ ಸೂಚಿಸಬೇಕೆಂದೂ




ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ. **https://www.mygov.in/group-poll/vote-your-favourite-tableau-and-marching-contingent-republic-day-parade-2025/** ಕೊಂಡಿಯನ್ನು ಕ್ಲಿಕ್ ಮಾಡಿ, **Login to participate** ಮೇಲೆ ಕ್ಲಿಕ್ ಮಾಡಿ, ತಮ್ಮ ನೋಂದಾಯಿತ ಮೊಬೈಲ್ ನಂಬರ್ ಅಥವಾ ಇಮೇಲ್ ವಿವರ ನಮೂದಿಸಿ, ತಾವು ಸ್ವೀಕರಿಸುವ ಒಟಿಪಿ ನಮೂದಿಸಿ, ನಂತರ **Resend. OTP/ Submitted** ಇದರಲ್ಲಿ **submitt** ಕ್ಲಿಕ್ ಮಾಡಿ, ಎಲ್ಲಾ ಸ್ತಬ್ಧಚಿತ್ರಗಳ ಮಾಹಿತಿ ಕಾಣುತ್ತದೆ. **Lakkundi : cradle of stone craft** ಕ್ಲಿಕ್ ಮಾಡಿ ತಮ್ಮ ಮತವನ್ನು ದಾಖಲಿಸಬಹುದು. ತಮ್ಮ ನೋಂದಾಯಿತ ಮೊಬೈಲ್ ಸಂಖ್ಯೆಯಿಂದ **MYGOVPOLL** 357037,12 ಟೈಫ್ ಮಾಡಿ 7738299899 ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಮೂಲಕ ಓಟ ಮಾಡಬಹುದಾಗಿದೆ.

## ನವದೆಹಲಿಯ ಕರ್ನಾಟಕ ಭವನ 1,2,3 ರಲ್ಲಿ ಗಣರಾಜ್ಯೋತ್ಸವ ಆಚರಣೆ



ನವದೆಹಲಿ, ಜ.27: ಚಾಣಕ್ಯ ಪುರಿಯ 10 ಕೌಟಿಲ್ಯ ಮಾರ್ಗದಲ್ಲಿರುವ ಕರ್ನಾಟಕ ಭವನ –1 ಕಾವೇರಿಯಲ್ಲಿ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು. ನವದೆಹಲಿಯ ಕರ್ನಾಟಕ ಭವನದ ನಿವಾಸಿ ಆಯುಕ್ತೆ ಇಮ್‌ಕೊಂಗ್ಲಾ ಜಮೀರ್ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿದರು ಹಾಗೂ ಎಲ್ಲರಿಗೂ ಗಣರಾಜ್ಯೋತ್ಸವ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಕರ್ನಾಟಕ ಭವನದ ಅಧಿಕಾರಿಗಳು ಸಿಬ್ಬಂದಿ ಉಪಸ್ಥಿತರಿದ್ದರು.





76ನೇ ಗಣರಾಜ್ಯೋತ್ಸವದ ದಿನದಂದು ಸಿ.ಮೋಹನ್ ಕುಮಾರ್ ಸಹಾಯಕ ನಿವಾಸಿ ಆಯುಕ್ತರು ಹಾಗೂ ಕರ್ನಾಟಕ ಮುಖ್ಯಮಂತ್ರಿಗಳಿಗೆ ವಿಶೇಷ ಕರ್ತವ್ಯದಲ್ಲಿರುವ ಅಧಿಕಾರಿಯವರು ಕರ್ನಾಟಕ ಭವನ ಭೀಮದಲ್ಲಿ ಧ್ವಜಾರೋಹಣವನ್ನು ನೆರವೇರಿಸಿದರು.



ನವದೆಹಲಿಯ ಕರ್ನಾಟಕ ಭವನದ ಅಪರ ನಿವಾಸಿ ಆಯುಕ್ತೆ ಆಕೃತಿ ಬನ್ಸಾಲ್ ಅವರು ಕರ್ನಾಟಕ ಭವನ –2 ರಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿದರು ಹಾಗೂ ಎಲ್ಲರಿಗೂ ಗಣರಾಜ್ಯೋತ್ಸವ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಕರ್ನಾಟಕ ಭವನದ ಅಧಿಕಾರಿಗಳು, ಸಿಬ್ಬಂದಿ ಇದ್ದರು.

## ಗಣರಾಜ್ಯೋತ್ಸವದಂದು ಶುಭಾಶಯ ಕೋರಿದ ಫ್ರಾನ್ಸ್ ಅಧ್ಯಕ್ಷ ಮತ್ತು ಐರ್ಲೆಂಡ್ ಪ್ರಧಾನಿ: ಮೋದಿ ಧನ್ಯವಾದ

**ನವದೆಹಲಿ, ಜ.27:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಭಾರತದ 76ನೇ ಗಣರಾಜ್ಯೋತ್ಸವದ ಶುಭಾಶಯ ಕೋರಿದ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್ ಮತ್ತು ಐರ್ಲೆಂಡ್ ಪ್ರಧಾನಮಂತ್ರಿ ಮೈಕೆಲ್ ಮಾರ್ಟಿನ್ ಅವರಿಗೆ ಧನ್ಯವಾದ ಅರ್ಪಿಸಿದರು.


ಈ ಸಂಬಂಧ ಜಾಲತಾಣದಲ್ಲಿ ಫ್ರಾನ್ಸ್ ಅಧ್ಯಕ್ಷರ ಪೋಸ್ಟ್‌ಗೆ ಪ್ರತಿಕ್ರಿಯಿಸಿದ ನರೇಂದ್ರ ಮೋದಿ, ನನ್ನ ಆತ್ಮೀಯ ಸ್ನೇಹಿತ, ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್ ಭಾರತದ 76ನೇ ಗಣರಾಜ್ಯೋತ್ಸವದಂದು ನಿಮ್ಮ ಪ್ರೀತಿಯ ಶುಭಾಶಯಗಳನ್ನು ಬಹಳವಾಗಿ ಪ್ರಶಂಸಿಸಲ್ಪಡುತ್ತವೆ. ಕಳೆದ ವರ್ಷ ಇದೇ ದಿನದಂದು ನಿಮ್ಮ ಉಪಸ್ಥಿತಿಯು ನಮ್ಮ ಕಾರ್ಯತಂತ್ರದ ಪಾಲುದಾರಿಕೆ ಮತ್ತು ಶಾಶ್ವತ ಸ್ನೇಹದಲ್ಲಿ ಒಂದು ಉನ್ನತ ಹಂತವಾಗಿತ್ತು.



ಮಾನವೀಯತೆಯ ಉತ್ತಮ ಭವಿಷ್ಯಕ್ಕಾಗಿ ನಾವು ಒಟ್ಟಾಗಿ ಕೆಲಸ ಮಾಡುತ್ತಿರುವುದರಿಂದ ಪ್ಯಾರಿಸ್‌ನಲ್ಲಿ ನಡೆಯಲಿರುವ ಎಐ ಕ್ರಿಯಾ ಶೃಂಗಸಭೆಯಲ್ಲಿ ಶೀಘ್ರದಲ್ಲೇ ನಿಮ್ಮನ್ನು ಭೇಟಿಯಾಗುತ್ತೇವೆ ಎಂದಿದ್ದಾರೆ.

ಇದೇ ವೇಳೆ ಐರ್ಲೆಂಡ್ ಪ್ರಧಾನಮಂತ್ರಿ ಅವರ ಪೋಸ್ಟ್‌ಗೆ ಪ್ರತಿಕ್ರಿಯಿಸಿದ ನರೇಂದ್ರ ಮೋದಿ, ನಿಮ್ಮ ಶುಭ ಹಾರೈಕೆಗಳಿಗಾಗಿ ಪ್ರಧಾನಿ ಮೈಕೆಲ್ ಮಾರ್ಟಿನ್ ಅವರಿಗೆ ಧನ್ಯವಾದಗಳು. ಪ್ರಜಾಪ್ರಭುತ್ವದ ಮೇಲಿನ ನಂಬಿಕೆ ಮತ್ತು ನಂಬಿಕೆಯ ಆಧಾರದ ಮೇಲೆ ಭಾರತ ಮತ್ತು ಐರ್ಲೆಂಡ್ ನಡುವಿನ ಸ್ನೇಹದ ನಿರಂತರ ಬಂಧವು ಮುಂಬರುವ ದಿನಗಳಲ್ಲಿ ಬಲಗೊಳ್ಳುತ್ತಲೇ ಇರುತ್ತದೆ ಎಂದು ನನಗೆ ವಿಶ್ವಾಸವಿದೆ ಭಾರತದ ಪ್ರಧಾನಿ ಮೋದಿ ಎಂದು ಹೇಳಿದ್ದಾರೆ.

## ನಿತ್ಯ ಪಂಚಾಂಗ 28.01.2025 ಮಂಗಳವಾರ



ಶ್ರೀ ಕ್ರೋಧಿ ನಾಮ ಸಂವತ್ಸರ, ದಕ್ಷಿಣಾಯನ-ಶರದ್ ಹೇಮಂತ ಋತು, ಚಾಂದ್ರಮಾನ, ಪುಷ್ಯ ಬಹುಳ

ಚತುರ್ದಶಿ, ಪೂರ್ವಾಷಾಢ ನಕ್ಷತ್ರ, ಅನಧ್ಯಯನ ತ್ರಯ, ಸೂಡಿ ಮಹಾಂತಸ್ವಾಮಿ ಪುಣ್ಯದಿನ, ಸುತ್ತೂರು ಶಿವರಾತ್ರೀಶ್ವರ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ಜಾತಿಗಣತಿ ವಿಚಾರ: ಪ್ರತಿಕ್ರಿಯೆ ನೀಡದೆ ನಿರ್ಗಮಿಸಿದ ಖರ್ಗೆ

**ಬೆಂಗಳೂರು, ಜ.27:** ಜಾತಿಗಣತಿ ವಿಚಾರವಾಗಿ ಎದುರಾದ ಪ್ರಶ್ನೆಯೊಂದಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಯಾವುದೇ ಪ್ರತಿಕ್ರಿಯೆ ನೀಡದೇ ನಿರ್ಗಮಿಸಿದ್ದಾರೆ. ನಗರದ ತಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿ ಜನಗಣತಿ ವಿಚಾರವಾಗಿ ಶೋಷಿತ ವರ್ಗಗಳ ಬೇಡಿಕೆಗಳ ಕುರಿತು ಪ್ರಶ್ನೆ ಎದುರಾದಾಗ ಯಾವುದೇ ಪ್ರತಿಕ್ರಿಯೆ ನೀಡದೇ ನಿರ್ಗಮಿಸಿದರು.ಆದರೆ ಇದೇ ವೇಳೆ ದೆಹಲಿಯ ವಿಧಾನಸಭೆಯ ಚುನಾವಣೆಯ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಕಾಂಗ್ರೆಸ್ ಪಕ್ಷ ಉತ್ತಮವಾದ ಪ್ರಚಾರ ಕಾರ್ಯವನ್ನು ಆಂತರಿಕವಾಗಿ ನಡೆಸುತ್ತಿದೆ. ಆದರೆ ಫಲಿತಾಂಶ ಕಾದುನೋಡಬೇಕು ಎಂದು ಹೇಳಿದರು.ನಾವು ಅಬ್ಬರದ



ಪ್ರಚಾರ ಮಾಡುತ್ತಿಲ್ಲ. ಒಳಗೊಳಗೇ ನಮ ಕೆಲಸವನ್ನು ಉತ್ತಮವಾಗಿ ನಿರ್ವಹಣೆ ಮಾಡುತ್ತಿದ್ದೇವೆ. ಮುಂಬರುವ ಚುನಾವಣೆಯಲ್ಲಿ ಜನ ನಮನ್ನು ಬೆಂಬಲಿಸುವ ನಿರೀಕ್ಷೆಯಿದೆ. ಪ್ರಜಾಪ್ರಭುತ್ವದಲ್ಲಿ ಆಡಳಿತ ಪಕ್ಷ ಹಾಗೂ ಪ್ರತಿಪಕ್ಷಗಳೆರಡೂ ಉಳಿಯಬೇಕು.ಈ ಚುನಾವಣೆಯಲ್ಲಿ ಜನ ಯಾವ ರೀತಿಯ ತೀರ್ಪು ನೀಡುತ್ತಾರೋ ಕಾದುನೋಡಬೇಕಿದೆ. ನಾವು ನಮ ಪ್ರಯತ್ನ ಮಾಡುತ್ತಿದ್ದೇವೆ ಎಂದರು.

# ನಟ ಶಿವರಾಜಕುಮಾರ್ ನಿವಾಸಕ್ಕೆ ಸಿಎಂ ಭೇಟಿ

**ಬೆಂಗಳೂರು, ಜ.27:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ನಟ ಶಿವರಾಜ್ ಕುಮಾರ್ ಅವರ ನಾಗವಾರದಲ್ಲಿನ ನಿವಾಸಕ್ಕೆ ಭೇಟಿ ನೀಡಿ ಅವರ ಆರೋಗ್ಯ ವಿಚಾರಿಸಿದರು.

ಕಳೆದ 2024 ಡಿಸೇಂಬರ್ 18ರಂದು ಚಿಕಿತ್ಸೆಗಾಗಿ ಅಮೆರಿಕಗೆ ತೆರಳಿದ್ದ ಶಿವರಾಜಕುಮಾರ್ ಅವರಿಗೆ ಚಿಕಿತ್ಸೆ ಯಶಸ್ವಿಯಾಗಿದೆ. ನಟ ಶಿವರಾಜ್ ಕುಮಾರ್ ಅವರ ಆರೋಗ್ಯ ವಿಚಾರಿಸಿದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಧ್ಯಮಗಳೊಂದಿಗೆ ಮಾತನಾಡಿ, ಶಿವರಾಜ್ ಕುಮಾರ್ ಅವರ ಶಸ್ತ್ರಚಿಕಿತ್ಸೆಯ ನಂತರ ಹಿಂತಿರುಗಿ ಬಂದ ನಂತರ ಅವರ ಆರೋಗ್ಯವನ್ನು ವಿಚಾರಿಸಲು ಇಂದು ಭೇಟಿ ಮಾಡಿದ್ದೇನೆ. ಅವರ ಶಸ್ತ್ರಚಿಕಿತ್ಸೆಯ ಮರುದಿನವೇ ಅವರಿಗೆ ಕರೆಯಾಡಿ ಆರೋಗ್ಯ ವಿಚಾರಿಸಿದಾಗ ಶಸ್ತ್ರಚಿಕಿತ್ಸೆ ಯಶಸ್ವಿ ಯಾಗಿದ್ದು ತೊಂದರೆ ಇಲ್ಲ ಎಂದು ತಿಳಿಸಿದ್ದರು.



ಮುಂದಿನ ತಿಂಗಳಿನಿಂದ ಚಿತ್ರೀಕರಣಕ್ಕೆ ತೆರಳುವುದಾಗಿ ತಿಳಿಸಿದ್ದಾರೆ ಎಂದು ಮುಖ್ಯಮಂತ್ರಿಗಳು ಇದೇ ಸಂದರ್ಭದಲ್ಲಿ ತಿಳಿಸಿದರು.

# ರಾಜಕೀಯ ಪಿತೂರಿಯಿಂದ ಸಿಎಂ ಪತ್ನಿ ಸಚಿವರಿಗೆ ಇ.ಡಿ. ನೋಟಿಸ್: ಡಿಕೆಶಿ ಕಿಡಿ

**ಬೆಂಗಳೂರು, ಜ.27:** ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಾಧ್ಯಮಗಳ ಜೊತೆಗೆ ಮಾತನಾಡಿ, ರಾಜಕೀಯ ಪಿತೂರಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಹಾಗೂ ಸಚಿವ ಬೈರತಿ ಸುರೇಶ್ ಅವರಿಗೆ ಇ.ಡಿ ಸಂಸ್ಥೆ ನೋಟಿಸ್ ನೀಡಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.



ನನ್ನ ವಿರುದ್ಧದ ಪ್ರಕರಣದಲ್ಲೂ ಹೀಗೆ ಆಗಿತ್ತು. ಒಂದು ಪ್ರಕರಣವನ್ನು ಒಂದೇ ಸಮಯದಲ್ಲಿ ಎರಡು ಸಂಸ್ಥೆಗಳು ತನಿಖೆ ನಡೆಸಲು ಸಾಧ್ಯವಿಲ್ಲ. ಲೋಕಾಯುಕ್ತ ಸಂಸ್ಥೆ ಈಗಾಗಲೇ ತನಿಖೆ ಮಾಡುತ್ತಿದೆ. ಲೋಕಾಯುಕ್ತ ತನಿಖೆ ನಡೆಸುತ್ತಿರುವಾಗ ಬೇರೆ ಸಂಸ್ಥೆಗಳು ತನಿಖೆ ನಡೆಸಲು ಆಗುವುದಿಲ್ಲ ಎಂದು ನ್ಯಾಯಾಲಯಗಳು ಅನೇಕ ತೀರ್ಪು ನೀಡಿವೆ. ಈ ವಿಚಾರವಾಗಿ ಸಂಪೂರ್ಣ ಮಾಹಿತಿ ಪಡೆದ ನಂತರ ನಾನು ಮಾತನಾಡುತ್ತೇನೆ ಎಂದು ಡಿಸಿಎಂ ಡಿ ಕೆ ಶಿವಕುಮಾರ್ ತಿಳಿಸಿದರು. ಮುಡಾ ಪ್ರಕರಣ ಸಿಬಿಐ ತನಿಖೆ ನೀಡಬೇಕು ಎಂಬ ವಿಚಾರವಾಗಿ ಮಾಧ್ಯಮಗಳ ಪ್ರಶ್ನೆಗೆ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿ, ನನ್ನ ಪ್ರಕರಣದಲ್ಲೂ ಸಿಬಿಐ ಹಾಗೂ ಇಡಿ ಒಟ್ಟಿಗೆ ತನಿಖೆ ಮಾಡುತ್ತಿದ್ದವು. ಯಾವುದೇ ಸಂಸ್ಥೆಗಳಾಗಲಿ ಒಟ್ಟಿಗೆ ಒಂದೇ ಪ್ರಕರಣವನ್ನು ಎರಡು ಸಂಸ್ಥೆಗಳು ತನಿಖೆ ಮಾಡುವಂತಿಲ್ಲ. ಈ ಕುರಿತಾಗಿ ಬಂದಿರುವ ನ್ಯಾಯಾಲಯದ ತೀರ್ಪುಗಳನ್ನು ನನ್ನ ಪ್ರಕರಣದಲ್ಲಿ ನ್ಯಾಯಾಲಯದ ಮುಂದೆ ಪ್ರಸ್ತಾಪ ಮಾಡಿದ್ದೇನೆ ಎಂದು ತಿಳಿಸಿದರು.

ಇನ್ನೂ ಮುಖ್ಯಮಂತ್ರಿ ಹುದ್ದೆ ವಿಚಾರವಾಗಿ ಸಚಿವರ ಹೇಳಿಕೆ ಬಗ್ಗೆ ಮಾಧ್ಯಮ ಪ್ರತಿನಿಧಿಗಳು ಪ್ರಶ್ನಿಸಿದ್ದು, ಆ ರೀತಿಯಾಗಿ ಯಾರೂ ಏನೂ ಮಾತನಾಡಿಲ್ಲ. ಸರ್ಕಾರ ಸುಭದ್ರವಾಗಿದೆ. ನಾವೆಲ್ಲರೂ ಸಿಎಂ ಅವರ ಕೆಳಗೆ ಕೆಲಸ ಮಾಡುತ್ತಿದ್ದೇವೆ ಎಂದು ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

# ಮುಡಾ ಹಗರಣದಲ್ಲಿ ಮುಖ್ಯಮಂತ್ರಿಗೆ ಹಿನ್ನಡೆ: ಬಿವೈವಿ

**ಬೆಂಗಳೂರು,ಜ.27:** ಮೈಸೂರಿನ ಮುಡಾ ಹಗರಣದಲ್ಲಿ ಮುಖ್ಯಮಂತ್ರಿಗಳಿಗೆ ಬಹಳ ದೊಡ್ಡ ಹಿನ್ನಡೆಯಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.

ಈ ಕುರಿತು ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಬಿ ವೈ ವಿಜಯೇಂದ್ರ ಅವರು, ಬೇಗನೆ ಬಿ ರಿಪೋರ್ಟ್ ಹಾಕಿಸಿಕೊಂಡು ಪ್ರಕರಣ ಮುಚ್ಚಿಹಾಕುವ ಪ್ರಯತ್ನದಲ್ಲಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ದೊಡ್ಡ ಆಘಾತವಾಗಿದೆ.

ಲೋಕಾಯುಕ್ತ ಸಂಸ್ಥೆಯ ತನಿಖೆಯನ್ನು ಮಾಧ್ಯಮಗಳೇ ತೋರಿಸಿವೆ. ರಾತ್ರಿ 8– 9 ಗಂಟೆಗೆ ಸಿದ್ದರಾಮಯ್ಯನವರ ಬಾಮ್ಮೈದ ನೋಟಿಸ್ ಕೊಡದೆ ಇದ್ದರೂ ಮೈಸೂರಿನ ಲೋಕಾಯುಕ್ತ ಕಚೇರಿಗೆ ಭೇಟಿ ಕೊಡುತ್ತಿದ್ದರು ಎಂದು ಆಕ್ಷೇಪಿಸಿದರು.

ಮುಖ್ಯಮಂತ್ರಿ ಕುಟುಂಬಕ್ಕೆ ಎಷ್ಟು ಮುಕ್ತ ವ್ಯವಸ್ಥೆ ಇತ್ತೆಂದು ಅವತ್ತು ಕೂಡ ಬಹಿರಂಗವಾಗಿದೆ. ಮೈಸೂರಿನ ಮುಡಾ ಹಗರಣದ ವಿಷಯದಲ್ಲಿ ಬಿಜೆಪಿ– ಜೆಡಿಎಸ್ ಪಕ್ಷ ಒಟ್ಟಾಗಿ ಪಾದಯಾತ್ರೆ ಮಾಡಿದ್ದವು. ನಮ್ಮ ಹೋರಾಟದ ಪರಿಣಾಮವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಧರ್ಮಪತ್ನಿಯವರು 14 ನಿವೇಶನ ಹಿಂತಿರುಗಿಸುತ್ತೇವೆ ಎಂದು ರಾತ್ರೋರಾತ್ರಿ ಮೂಡಕ್ಕೆ ಪತ್ರ ಬರೆದಿದ್ದರು.

ಆ ಪತ್ರದ ಮೂಲಕ ಮೂಲಕ ಹಗರಣದಿಂದ ಹೊರಕ್ಕೆ ಬಂದ ಭ್ರಮೆಯಲ್ಲಿ ಮುಖ್ಯಮಂತ್ರಿಗಳೂ ಇದ್ದರು. ಇವತ್ತಿನ ಇ.ಡಿ. ನೋಟಿಸ್, ಇದರಿಂದ ಆಘಾತ ಆಗಿರುವುದರಲ್ಲಿ ಎರಡು ಮಾತಿಲ್ಲ ಎಂದು ನುಡಿದರು. ಇ.ಡಿ.ಗೆ ಅವರದೇ ಆದ ನಿಯಮಗಳಿರುತ್ತವೆ. ಅದರ ಪ್ರಕಾರ ಅವರು ಮುಂದುವರೆಯುತ್ತಾರೆ.

ಇ.ಡಿ. ನೋಟಿಸ್ ರಾಜಕೀಯಪ್ರೇರಿತ ಎಂಬುದಕ್ಕಿಂತ ಹೆಚ್ಚಾಗಿ ಕಾಂಗ್ರೆಸ್ ಆಡಳಿತಾವಧಿಯಲ್ಲಿ ಸಾವಿರಾರು ಕೋಟಿ ಬಡವರ ಪಾಲಾಗಬೇಕಾದ ನಿವೇಶನಗಳ



ಅಕ್ರಮ ಹಂಚಿಕೆ ನಡೆದಿತ್ತು. ಈ ದೊಡ್ಡ ಹಗರಣದ ಪರಿಣಾಮವನ್ನು ಮುಂದಿನ ದಿನಗಳಲ್ಲಿ ಎದುರಿಸಬೇಕಾಗುತ್ತದೆ ಎಂದು ಪ್ರಶ್ನೆಗೆ ಉತ್ತರವಾಗಿ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆತುರಾತುರವಾಗಿ ಲೋಕಾಯುಕ್ತ ಸಂಸ್ಥೆಯಿಂದ ಬಿ ರಿಪೋರ್ಟ್ ಪಡೆದು ಮುಡಾ ಹಗರಣದಿಂದ ಹೊರಕ್ಕೆ ಬರಬಹುದೆಂಬ ಲೆಕ್ಕಾಚಾರದಲ್ಲಿದ್ದರು. ಇದೇ ಸಂದರ್ಭದಲ್ಲಿ ಇ.ಡಿ. (ಜಾರಿ ನಿರ್ದೇಶನಾಲಯ) ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಧರ್ಮಪತ್ನಿಗೂ ನೋಟಿಸ್ ಕೊಟ್ಟಿದೆ ಹಾಗೂ ತನಿಖೆಗೆ ಹಾಜರಾಗಲು ತಿಳಿಸಿದೆ ಎಂದು ವಿವರಿಸಿದರು.ಜೊತೆಗೇ ಸಚಿವ ಬೈರತಿ ಸುರೇಶ್‌ರಿಗೂ ಇ.ಡಿ. ನೋಟಿಸ್ ಕೊಟ್ಟಿದೆ. ಹಾಗಾಗಿ ಅನಿವಾರ್ಯವಾಗಿ ಬೈರತಿ ಸುರೇಶ್, ಮುಖ್ಯಮಂತ್ರಿಗಳ ಪತ್ನಿ ಅವರು ತನಿಖಾ ಸಂಸ್ಥೆಯಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ಲೋಕಾಯುಕ್ತ ಕೊಟ್ಟ ವರದಿಯ ಮಾಹಿತಿ ಇಲ್ಲ. ರಾಜ್ಯ ಹೈಕೋರ್ಟಿಗೆ ಲಕೋಟೆಯಲ್ಲಿ ವರದಿ ನೀಡಿದ ಮಾಹಿತಿಗಳು ಬರುತ್ತಿವೆ. ನಾನು ಡಿ.ಕೆ.ಶಿವಕುಮಾರ್ ಅವರ ಹೇಳಿಕೆಯನ್ನೂ ಗಮನಿಸಿದ್ದೇನೆ. ರಾಜಕೀಯಪ್ರೇರಿತ ಇ.ಡಿ. ಎಂದು ಅವರು ಹೇಳಿದ್ದಾರೆ. ಅವರ ಮುಖದಲ್ಲಿ ಮಂದಹಾಸವೂ ಕಾಣುತ್ತಿದೆ ಎಂದು ತಿಳಿಸಿದರು. ಸಿದ್ದರಾಮಯ್ಯನವರ ಕುಟುಂಬಕ್ಕೆ ಇ.ಡಿ. ನೋಟಿಸ್ ಕೊಟ್ಟಿದೆ ಎಂಬ ಸಂತೋಷ ಅವರ ಮುಖದಲ್ಲಿತ್ತು ಎಂದು ಹೇಳಿದರು.

# ಗ್ಲಾಸ್ ಬ್ರಿಜ್ ನಿರ್ಮಾಣಕ್ಕೆ ನೀಲನಕ್ಷೆ ಸಿದ್ಧ: ಡಾ.ಪರಮೇಶ್ವರ್

**ತುಮಕೂರು, ಜ.27:** ಪ್ರವಾಸೋದ್ಯಮ ಅಭಿವೃದ್ಧಿಗಾಗಿ ನಗರದ ಅಮಾನಿಕೆರೆಯಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ಗ್ಲಾಸ್ ಬ್ರಿಡ್ಜ್ ನಿರ್ಮಾಣಕ್ಕೆ ನೀಲ ನಕ್ಷೆಯನ್ನು ಸಿದ್ಧಪಡಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆಯಡಿ ತುಮಕೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು 200 ಕೋಟಿ ರೂ.ಗಳ ಅನುದಾನಕ್ಕೆ ಸರ್ಕಾರ ಅನುಮೋದನೆ ನೀಡಿದ್ದು, ಈ ಅನುದಾನದಲ್ಲಿ 25 ಕೋಟಿ ರೂ.ಗಳನ್ನು ಬಳಸಿಕೊಂಡು ಗಾಜಿನ ಸೇತುವೆಯನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.ಸ್ಮಾರ್ಟ್ ಸಿಟಿ ಯೋಜನೆಯಡಿ ಮಹಾನಗರ ಪಾಲಿಕೆ ವ್ಯಾಪ್ತಿಯ 5 ವಾರ್ಡ್‌ಗಳನ್ನು ಈಗಾಗಲೇ ಅಭಿವೃದ್ಧಿಪಡಿಸಲಾಗಿದ್ದು, ಉಳಿದ 30 ವಾರ್ಡ್‌ಗಳ ಅಭಿವೃದ್ಧಿಗಾಗಿ 200 ಕೋಟಿ ರೂ.ಗಳನ್ನು ವ್ಯಯಿಸಲಾಗುವುದು.ಈ ಅನುದಾನವನ್ನು ಬಳಸಿಕೊಂಡು ಬೆಂಗಳೂರಿನ ಲಾಲ್ಬಾಗ್ ಮಾದರಿಯಲ್ಲಿ ನಗರದ ಅಕ್ಕ–ತಂಗಿ ಕೆರೆ ಅಭಿವೃದ್ಧಿ, 137 ಕೋಟಿ ರೂ. ವೆಚ್ಚದಲ್ಲಿ 202 ರಸ್ತೆ ನಿರ್ಮಾಣ, ಅಮಾನಿಕೆರೆಯನ್ನು ಸ್ವಚ್ಛಗೊಳಿಸಿ ಮಕ್ಕಳಿಗಾಗಿ ಸಾಹಸ ಕ್ರೀಡೆಗೆ ಅವಕಾಶ ನೀಡುವುದರೊಂದಿಗೆ ಐಲ್ಯಾಂಡ್ ನಿರ್ಮಾಣ, 18 ಉದ್ಯಾನವನಗಳ ಅಭಿವೃದ್ಧಿ, ತಲಾ 6 ಕೋಟಿ ರೂ. ವೆಚ್ಚದಲ್ಲಿ ನಗರದ ಖಾಸಗಿ ಬಸ್ ನಿಲ್ದಾಣದ ಆಧುನೀಕರಣ ಹಾಗೂ ಗುಬ್ಬಿ ವೀರಣ್ಣ ಕಲಾ ಕ್ಷೇತ್ರದ ಕಟ್ಟಡವನ್ನು



ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.

ನಗರದಲ್ಲಿ ಶವಾಗಾರ ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ನಾಗರಿಕರ ಆರೋಗ್ಯದ ಹಿತದೃಷ್ಟಿಯಿಂದ ನೈರ್ಮಲ್ಯತೆ(ಹೈಜೆನಿಕ್)ಯಿಂದ ಕೂಡಿದ ಮಾಂಸ ಮಾರಾಟ ಮಾರುಕಟ್ಟೆಯನ್ನು ನಿರ್ಮಿಸಲು ಪಾಲಿಕೆ ಮುಂದಾಗಿದೆ ಎಂದು ಹೇಳಿದರು.ರಾಜ್ಯದ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ತುಮಕೂರಿನ ಆಸು–ಪಾಸಿನಲ್ಲಿ ನಿರ್ಮಿಸುವಂತೆ ಐಟಿಬಿಟಿ ಸಚಿವರಿಗೆ ಮನವಿ ಮಾಡಲಾಗಿದ್ದು, ವಿಮಾನ ನಿಲ್ದಾಣ ನಿರ್ಮಾಣಕ್ಕೆ ಈಗಾಗಲೇ ಜಿಲ್ಲೆಯ ವಸಂತ ನರಸಾಪುರ ಕೈಗಾರಿಕಾ ಪ್ರದೇಶಕ್ಕೆ ಹೊಂದಿಕೊಂಡತೆ ರಾಷ್ಟ್ರೀಯ ಹೆದ್ದಾರಿ 48ರ ಸಮೀಪ 3,000 ಎಕರೆ ಹಾಗೂ ಶಿರಾ ತಾಲ್ಲೂಕಿನ ಸೀಬಿ ದೇವಸ್ಥಾನದ ಸಮೀಪ 5,000 ಎಕರೆ ಭೂಮಿಯನ್ನು ಗುರುತಿಸಲಾಗಿದೆ.

ಜಿಲ್ಲೆಗೆ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಮಂಜೂರಾತಿ ನೀಡಬೇಕೆಂದು ಜಿಲ್ಲೆಯ ಎಲ್ಲಾ ಶಾಸಕರು, ಸಂಸದರು ಪಕ್ಷಾತೀತವಾಗಿ ಸರ್ಕಾರದ ಮೇಲೆ ಒತ್ತಾಯ ತರಲಾಗುವುದು ಎಂದು ಹೇಳಿದರು.ಜಿಲ್ಲೆಯಲ್ಲಿ ಹೆಲಿಕಾಪ್ಟರ್ ತಯಾರಿಕಾ ಘಟಕ ಕಾರ್ಯ ನಿರ್ವಹಿಸುತ್ತಿರುವ ಗುರುತಿಗಾಗಿ ನಗರದ ಹೃದಯಭಾಗದ ಟೌನ್‌ಹಾಲ್ ಪಕ್ಕದಲ್ಲಿ ಹೆಲಿಕಾಪ್ಟರ್ ಮಾದರಿಯನ್ನು ಇರಿಸಲಾಗುವುದು. ಪಾಲಿಕೆ ಆವರಣದಲ್ಲಿ ಬಾಬಾಸಾಹೇಬ್ ಅಂಬೇಡ್ಕರ್ ಪುತ್ಥಳಿ ನಿರ್ಮಿಸುವ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗಿದ್ದು, ಸರ್ಕಾರದಿಂದ ಅನುಮತಿ ದೊರೆತ ನಂತರ ಪುತ್ಥಳಿಯನ್ನು ಸ್ಥಾಪಿಸಲಾಗುವುದು. ಪುತ್ಥಳಿಯನ್ನು ಸ್ಥಾಪನೆಗೆ ಶ್ರೀ ಸಿದ್ಧಾರ್ಥ ಸಂಸ್ಥೆಯಿಂದ 36 ಲಕ್ಷ ರೂ.ಗಳನ್ನು ಕೊಡುಗೆಯಾಗಿ ನೀಡಲಾಗುವುದು ಎಂದು ತಿಳಿಸಿದರು.

# ಮುಡಾ ಪ್ರಕರಣ: ಖುದ್ದು ಹಾಜರಾಗುವಂತೆ ಸೂಚನೆ

ಬೆಂಗಳೂರು, ಜ, 27; ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಬಿಡಿ ನಿವೇಶನ ಹಂಚಿಕೆ ಪ್ರಕರಣ ಸಂಬಂಧ ಜಾರಿ ನಿರ್ದೇಶನಾಲಯ (ಇ.ಡಿ.) ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಹಾಗೂ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರಿಗೆ ನೋಟಿಸ್ ಜಾರಿ ಮಾಡಿದೆ. ಅಕ್ರಮ ಹಣ ವರ್ಗಾವಣೆ ಕಾಯ್ದೆಯಡಿ ಇಬ್ಬರಿಗೂ ನೋಟಿಸ್ ನೀಡುವುದಲ್ಲದೆ, ಇದೇ 28ರ ಮಧ್ಯಾಹ್ನ 3 ಗಂಟೆಗೆ ಖುದ್ದು ಹಾಜರಾಗುವಂತೆ ಸೂಚಿಸಿದೆ.

ಪ್ರಕರಣದ ತನಿಖಾಧಿಕಾರಿ ಮುರಳಿಕೃಷ್ಣ ಅವರು ಜನವರಿ 24ರಂದು ಪಾರ್ವತಿ ಹಾಗೂ ಸುರೇಶ್ ಅವರಿಗೆ ನೋಟಿಸ್ ನೀಡಿರುವುದಾಗಿ ವರದಿಯಾಗಿದೆ. ಪಾರ್ವತಿ ಅವರಿಗೆ ಜನವರಿ 3ರಂದು ಇ.ಡಿ. ನೋಟಿಸ್ ನೀಡಿ, ಜನವರಿ 9ರಂದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಿತ್ತು. ಇದಕ್ಕೆ ತಮ್ಮ ವಕೀಲರ ಮೂಲಕ ಉತ್ತರ ನೀಡಲು 15 ದಿನಗಳ ಕಾಲಾವಕಾಶ ಕೋರಿದ್ದರು. ಹದಿನೈದು ದಿನಗಳ ಕಾಲಾವಕಾಶ ಮುಗಿಯುತ್ತಿದ್ದಂತೆ ತಮ್ಮ ವಕೀಲರ ಮೂಲಕ ಮನವಿ ಸಲ್ಲಿಸಿ, ತಮಗೆ ವಯಸ್ಸಾಗಿದ್ದು, ತಾವು ನಮ್ಮ ಮನಗೇ ಬಂದು ವಿಚಾರಣೆ ನಡೆಸಬಹುದು ಎಂದು ಕೋರಿದ್ದರು. ಮನವಿಗೆ ಸ್ಪಂದಿಸದ ಇ.ಡಿ. 24ರಂದು ನೋಟಿಸ್ ನೀಡಿ ಖುದ್ದು ಹಾಜರಾಗುವಂತೆ ಆದೇಶ ಮಾಡಿತು. ಸಚಿವ ಭೈರತಿ ಸುರೇಶ್ ಅವರಿಗೂ ಇದು ಎರಡನೇ ನೋಟಿಸ್ ಆಗಿದೆ. ನಿಯಮಾವಳಿಗಳನ್ನು ಗಾಳಿಗೆ 50:50ರ ಅನುಪಾತದಲ್ಲಿ ಪ್ರಾಧಿಕಾರ ನಿವೇಶನಗಳನ್ನು ಪಾರ್ವತಿ ಅವರಿಗೆ ಹಂಚಿಕೆ ಮಾಡಿತ್ತು ಎಂದು ಆರೋಪಿಸಲಾಗಿದೆ. ಈ 14 ನಿವೇಶನಗಳನ್ನು ಅಭಿವೃದ್ಧಿ ಹೊಂದಿದ ಬಡಾವಣೆಗಳಲ್ಲಿ ಪಡೆದುಕೊಂಡಿದ್ದರು, ಇದರಿಂದ ಪ್ರಾಧಿಕಾರಕ್ಕೆ ದೊಡ್ಡ ಪ್ರಮಾಣದಲ್ಲಿ ಆರ್ಥಿಕ ನಷ್ಟ ಉಂಟು ಮಾಡಿದೆ. ಅಧಿಕಾರಿಗಳು, ಕಾಣದ ಕೈಗಳ ಒತ್ತಡಕ್ಕೆ ಮಣಿದು ಬಿಡಿ ನಿವೇಶನಗಳನ್ನು ಹಂಚಿಕೆ ಮಾಡಿದ್ದರಿಂದ 58 ಕೋಟಿ ರೂ.ನಷ್ಟು ನಷ್ಟ ಆಗಿದೆ. ಈ ಪ್ರಕರಣವನ್ನೇ ಮುಂದಿಟ್ಟುಕೊಂಡು ಪ್ರಾಧಿಕಾರ ಸಾವಿರಾರು ಬಿಡಿ ನಿವೇಶನಗಳನ್ನು ಹಂಚಿಕೆ ಮಾಡಿದ್ದರಿಂದ ಕೋಟ್ಯಂತರ ರೂ. ನಷ್ಟ ಉಂಟಾಗಿದೆ. ಅಕ್ರಮ ಹಣ ವರ್ಗಾವಣೆ ಆಗಿದೆ ಎಂಬ ಹಿನ್ನೆಲೆಯಲ್ಲಿ ತನಿಖೆ ನಡೆಸಿದ ಇ.ಡಿ. ಸಂಬಂಧಪಟ್ಟ ದಾಖಲೆಗಳನ್ನು ವಶಕ್ಕೆ ಪಡೆದಿದ್ದಲ್ಲದೆ, ಇದುವರೆಗೆ ಮುಡಾದ ಹಿಂದಿನ ಇಬ್ಬರು ಆಯುಕ್ತರು ಹಾಗೂ ಅಧಿಕಾರಿಗಳು ಅಲ್ಲದೆ, ಡೆವಲಪರ್ಸ್‌ಗಳ ಮನೆಗಳ ಮೇಲೆ ದಾಳಿ ನಡೆಸಿ ಕೆಲವು ಮಹತ್ವದ ದಾಖಲೆಗಳನ್ನು ವಶ ಪಡಿಸಿಕೊಂಡಿತ್ತು. ಪ್ರಕರಣಕ್ಕೆ ಸಂಬಂಧಸಿದಂತೆ 80ಕ್ಕೂ ಹೆಚ್ಚು ಅಧಿಕಾರಿಗಳು, ಡೆವಲಪರ್ಸ್ ಮತ್ತು ಮಧ್ಯವರ್ತಿಗಳನ್ನು ಇ.ಡಿ. ವಿಚಾರಣೆಗೆ ಒಳಪಡಿಸಿ, ಇದರಲ್ಲಿ ಭಾರೀ ಭ್ರಷ್ಟಾಚಾರ ನಡೆದಿದೆ ಎಂದು ಹಗರಣದ ತನಿಖೆ ನಡೆಸುತ್ತಿರುವ ಲೋಕಾಯುಕ್ತಕ್ಕೂ ಮಾಹಿತಿ ನೀಡಿತ್ತು. ಇತ್ತೀಚೆಗೆ ತನ್ನ ಜಾಲತಾಣ ಖಾತೆಯಲ್ಲಿ ಮುಡಾದಲ್ಲಿ ನಡೆದಿರುವ ಭ್ರಷ್ಟಾಚಾರ ಹಾಗೂ ಪಾಲುದಾರರ ಕುರಿತು ವಿಷಯ ಬಹಿರಂಗ ಪಡಿಸಿತ್ತು. ಪ್ರಕರಣವನ್ನು ಸಿಬಿಐಗೆ ವಹಿಸುವ ಸಂಬಂಧ ನ್ಯಾಯಾಲಯದಲ್ಲಿ ಅರ್ಜಿ ವಿಚಾರಣೆ ವೇಳೆಯಲ್ಲೇ ಮುಡಾದಲ್ಲಿನ ಭ್ರಷ್ಟಾಚಾರ ಆರೋಪದ ಬಗ್ಗೆ ಇ.ಡಿ. ಪದೇ ಪದೇ ಮಾಹಿತಿ ಬಹಿರಂಗ ಪಡಿಸಿತ್ತು. ಇದರ ಬೆನ್ನಲ್ಲೇ ಪ್ರಮುಖ ಆರೋಪಿಗಳಾದ ಪಾರ್ವತಿ ಹಾಗೂ ಭೈರತಿ ಸುರೇಶ್ ಅವರಿಗೆ ನೋಟಿಸ್ ಜಾರಿ ಮಾಡಿ ವಿಚಾರಣೆಗೆ ಖುದ್ದು ಹಾಜರಾಗುವಂತೆ ಸೂಚಿಸಿದೆ.

# ಮೈಸೂರು ಅಸೋಸಿಯೇಶನ್‌ನಲ್ಲಿ ಸೈಬರ್ ವಂಚನೆ ಕೃತಿ ಬಿಡುಗಡೆ



**ಮುಂಬಯಿ,ಜ.25:** ಸೈಬರ್ ವಂಚನೆ ಕೃತಿ ಓದಿ ನನಗೆ ಬಹಳಷ್ಟು ಲಾಭವಾಗಿದೆ. ಸಂಶೋಧಿತ ತಂತ್ರಜ್ಞಾನವನ್ನು ಸರಳವಾಗಿ ಬರೆಯುವುದು ಅಷ್ಟು ಸುಲಭವಲ್ಲ. ಆದರೂ ಸೈಬರ್ ಲೋಕದ ವಂಚನೆಗಳ ಬಗ್ಗೆ ಸೂಕ್ತ ಮಾಹಿತಿಯನ್ನು ಕನ್ನಡದಲ್ಲಿ ಸುಲಭವಾಗಿಸಿ ಪ್ರಕಟಿಸಿದ್ದು ಪ್ರಶಂಸನೀಯ. ಎಲ್ಲದಕ್ಕೂ ಕೃತಿಕಾರರ ಭಾಷೆಯ ಸರಳತೆ ನನಗೆ ಇಷ್ಟವಾಯಿತು. ಮೊಬೈಲ್‌ವುಳ್ಳವರೆಲ್ಲರೂ ಈ ಪುಸ್ತಕವನ್ನು ಓದಲೇಬೇಕು. ಮೊಬೈಲ್ ಬಳಕೆಯ ಭವಿಷ್ಯದ ಉಪಯೋಗಗಳ ಕುರಿತು ಕೃತಿ ರಚನೆಯಾಗಲಿ. ಇಂತಹ ಕೃತಿ ಮನಮನಗಳಿಂದ ಮನೆಮನೆಗೆ ತಲುಪುತ್ತಾ ಆಧುನಿಕ ತಂತ್ರಜ್ಞಾನದ ಅರಿವು ಎಲ್ಲರ ಪಾಲಾಗಲಿ ಎಂದು ಮೈಸೂರು ಅಸೋಸಿಯೇಶನ್‌ನ ಗೌರವ ಕಾರ್ಯದರ್ಶಿ ಡಾ। ಗಣಪತಿ ಶಂಕರಲಿಂಗ ತಿಳಿಸಿದರು.

ಕಳೆದ ಶನಿವಾರ ಸಂಜೆ ಮಾಟುಂಗಾ ಪೂರ್ವದ ಭಾವುದಾಜಿ ರಸ್ತೆಯಲ್ಲಿನ ಮೈಸೂರು ಅಸೋಸಿಯೇಶನ್ ಸಭಾಗೃಹದಲ್ಲಿ ಮುಂಬಯಿ ವಿಶ್ವವಿದ್ಯಾಲಯದ ಕನ್ನಡ ವಿಭಾಗ ಮತ್ತು ಮೈಸೂರು ಅಸೋಸಿಯೇಶನ್ ಮುಂಬಯಿ ಇವುಗಳ ಸಹಯೋಗದೊಂದಿಗೆ ಆಯೋಜಿಸಿದ್ದ ವಿಕ್ರಮ್ ಜೋಶಿ ರಚಿತ 'ಸೈಬರ್ ವಂಚನೆ ' ಕೃತಿ ಬಿಡುಗಡೆ ಗೊಳಿಸಿ ಡಾ। ಶಂಕರಲಿಂಗ ಮಾತನಾಡಿದರು.

ಮುಂಬಯಿ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ। ಜಿ.ಎನ್.ಉಪಾಧ್ಯ ಅವರ ಅಧ್ಯಕ್ಷತೆಯಲ್ಲಿ ನಡೆಸಲ್ಪಟ್ಟ ಸರಳ ಕಾರ್ಯಕ್ರಮದಲ್ಲಿ ಹಿರಿಯ ಯಕ್ಷಗಾನ ಕಲಾವಿದ, ವಿದ್ವಾಂಸ ಡಾ। ಎಂ. ಪ್ರಭಾಕರ ಜೋಶಿ, ಸಜ್ಜಲ ಜೋಶಿ ಮತ್ತು ರಿಶಿತಾ ಜೋಶಿ ವೇದಿಕೆಯಲ್ಲಿದ್ದರು.

ಮುಂಬಯಿಯಲ್ಲಿ ಸಾಹಿತ್ಯಾಸಕ್ತರ ಸಂಖ್ಯೆ ಹೆಚ್ಚಾಗಿದೆ. ಆದ್ದರಿಂದ ಮುಂಬಯಿ ಸಾಹಿತ್ಯ ವಲಯವಾಗಿ ಮಾರ್ಪಾಡುತ್ತಿದೆ. ಬಹುಭಾಷಾ ತಜ್ಞರ ಗುರುತರವಾದ ಕೆಲಸ ಸಾಹಿತ್ಯಸಕ್ತರನ್ನು ಸೆಳೆಯುತ್ತಿದೆ. ಆ ಪೈಕಿ ವಿಕ್ರಮ್ ಜೋಶಿ ಉದಯೋನ್ಮುಖ ಕೃತಿಕಾರನಾಗಿ ಸೇರ್ಪಡೆಯಾಗಿದ್ದಾರೆ ಎಂದು ಡಾ। ಜಿ.ಎನ್.ಉಪಾಧ್ಯ ತಿಳಿಸಿದರು.

ಇಲ್ಲಿರುವ ಪ್ರತಿಯೊಬ್ಬರೂ ಒಂದಲ್ಲ ಒಂದು ರೀತಿಯಲ್ಲಿ ಸೈಬರ್ ವಂಚನೆಯ ಕುರಿತು ಅನುಭವವನ್ನು ಪಡೆದವರಾಗಿದ್ದಾರೆ. ನಮ್ಮ ಸಮಾಜದಲ್ಲಿ ಆಗುತ್ತಿರುವ ಸೈಬರ್ ವಂಚನೆಗಳ ಕುರಿತು ಕೃತಿಯನ್ನು ರಚಿಸುವ ಆಲೋಚನೆಯಿತ್ತು.ಇದಕ್ಕೆ ಸ್ಪಷ್ಟ ರೂಪುಕೊಟ್ಟು ನನ್ನ ಕನಸನ್ನು ಸಾಕಾರಗೊಳಿಸಲು ಸಹಕರಿಸಿದವರು ಪ್ರಾಧ್ಯಾಪಕ ಡಾ। ಜಿ. ಎನ್ ಉಪಾಧ್ಯ ಅವರು. ಹಳ್ಳಿಗಳಲ್ಲಿ ಇರುವಂಥ ಜನ ಸಾಮಾನ್ಯರಿಗೂ ಸೈಬರ್ ವಂಚನೆಯ ಕುರಿತು ಮಾಹಿತಿಗಳು ಸಿಗಲಿ ಎನ್ನುವ ಉದ್ದೇಶದಿಂದ ಈ ಕೃತಿಯನ್ನು ರಚಿಸಿದ್ದೇನೆ ಎಂದು ಕೃತಿಕಾರ ವಿಕ್ರಂ ಜೋಶಿ ತಿಳಿಸಿದರು.

ಕನ್ನಡ ವಿಭಾಗದ ಕಲಾ ಭಾಗ್ವತ್ ಕೃತಿಯನ್ನು ಪರಿಚಯಿಸಿದರು. ಕನ್ನಡ ವಿಭಾಗದ ಸಹ ಪ್ರಾಧ್ಯಾಪಕಿ ಡಾ। ಪೂರ್ಣಿಮಾ ಎಸ್.ಶೆಟ್ಟಿ ಕಾರ್ಯಕ್ರಮ ನಿರೂಪಿಸಿ ಧನ್ಯವದಿಸಿದರು.

# ಬೆನ್ನುಮೂಳೆ ಗಡ್ಡೆ ಹೊರತೆಗೆಯುವಲ್ಲಿ ಯಶಸ್ವಿ:ವೈದ್ಯರಿಗೆ ಹೆಗ್ಗಡೆ ಅಭಿನಂದನೆ

**ಮುಂಬಯಿ, ಜ.26:** ಡಾ.ಮಹೇಶ್ ಕೆ. ಮತ್ತು ಡಾ.ಶತಾನಂದಪ್ರಸಾದ್ ರಾವ್ ನೇತೃತ್ವದಲ್ಲಿ ತಜ್ಞವೈದ್ಯರ ತಂಡ ಶಸ್ತ್ರಚಿಕಿತ್ಸೆಯ ಮೂಲಕ ಮಹಿಳೆಯೊಬ್ಬರ ಬೆನ್ನುಮೂಳೆಯಲ್ಲಿದ್ದ ಮೂರು ಸೆಂ.ಮೀ ಗಾತ್ರದ ಗಡ್ಡೆಯನ್ನು ಹೊರತೆಗೆಯುವಲ್ಲಿ ಯಶಸ್ವಿಯಾಗಿ ರೋಗಿಗೆ ಶಾಶ್ವತ ಪರಿಹಾರ ನೀಡಿದ್ದಾರೆ ಎಂದು ಧರ್ಮಸ್ಥಳದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರು ವೈದ್ಯರ ತಂಡ ಮತ್ತು ಸಿಬ್ಬಂದಿಯನ್ನು ಗೌರವಿಸಿ ಅಭಿನಂದಿಸಿದರು.

ಅವರು ಭಾನುವಾರ ಉಜಿರೆಯಲ್ಲಿರುವ ಎಸ್.ಡಿ.ಎಮ್. ಆಸ್ಪತ್ರೆಯಲ್ಲಿ ವಿಶ್ವದಲ್ಲೇ ಮೊದಲ ಬಾರಿ ಬೆನ್ನುಮೂಳೆಯ ಗಡ್ಡೆಯನ್ನು ಎಂಡೋಸ್ಕೋಪಿಕ್ ಶಸ್ತ್ರಚಿಕಿತ್ಸೆ ಮೂಲಕ ಯಶಸ್ವಿಯಾಗಿ ಹೊರತೆಗೆದು ರೋಗಿಗೆ ಶಾಶ್ವತ ಪರಿಹಾರ ನೀಡಿದ ವೈದ್ಯರು ಮತ್ತು ತಂಡದವರನ್ನು ಗೌರವಿಸಿ ಅಭಿನಂದಿಸಿದರು.

ಯಾವುದೇ ಹೊಸ ಪ್ರಯೋಗ ಮತ್ತು ಶಸ್ತ್ರಚಿಕಿತ್ಸೆ ಮಾಡುವಾಗ ಅನುಭವ ಹಾಗೂ ಪರಿಣತಿಯೊಂದಿಗೆ ಹೆಚ್ಚಿನ ಧೈರ್ಯ ಮತ್ತು ಆತ್ಮವಿಶ್ವಾಸವೂ ಬೇಕಾಗುತ್ತದೆ. ದೇವರ ಅನುಗ್ರಹದಿಂದ ಗ್ರಾಮೀಣ ಪ್ರದೇಶದ ಆಸ್ಪತ್ರೆಯಲ್ಲಿ ಕಡಿಮೆ ವೆಚ್ಚದಲ್ಲಿ ಉತ್ತಮ ಗುಣಮಟ್ಟದ ಶಸ್ತ್ರಚಿಕಿತ್ಸೆ ನಡೆಸಿದ ಬಗ್ಗೆ




ಹೆಗ್ಗಡೆಯವರ ಸಂತಸ ವ್ಯಕ್ತಪಡಿಸಿದರು.

ಶಸ್ತ್ರಚಿಕಿತ್ಸೆಯ ವಿಧಾನವನ್ನು ವೀಡಿಯೊ ಪ್ರದರ್ಶನದ ಮೂಲಕ ವೈದ್ಯರು ವಿವರಿಸಿದರು.

ಪ್ರಕರಣದ ವಿವರ: ಶಿಶಿಲ ಗ್ರಾಮದ 65ವರ್ಷ ಪ್ರಾಯದ ಧರ್ಣಮ್ಮ ಎಂಬ ಮಹಿಳೆ ಬೆನ್ನುನೋವು ಪೀಡಿತರಾಗಿ ಚಿಕಿತ್ಸೆಗೆಂದು ಉಜಿರೆಯ ಎಸ್.ಡಿ.ಎಮ್. ಆಸ್ಪತ್ರೆಗೆ ಬಂದಿದ್ದರು. ಆಕೆಯನ್ನು ಪರೀಕ್ಷಿಸಿದಾಗ ಬೆನ್ನುಮೂಳೆಯಲ್ಲಿ 3 ಸೆಂ. ಮೀ. ಗಾತ್ರದ ಗೆಡ್ಡೆ ಕಂಡುಬಂತು.

ಸತತ ಆರು ಗಂಟೆಗಳ ಕಾಲ ಎಂಡೋಸ್ಕೋಪಿಕ್ ತಂತ್ರಜ್ಞಾನ ಬಳಸಿ ನಡೆಸಿದ ಶಸ್ತ್ರಚಿಕಿತ್ಸೆಯಲ್ಲಿ ಕೇವಲ ಒಂದು ಸೆಂ. ಮೀ. ಛೇದನದೊಂದಿಗೆ ಮೂರು ಸೆಂ. ಮೀ. ಗೆಡ್ಡೆಯನ್ನು ಯಶಸ್ವಿಯಾಗಿ ಹೊರತೆಗೆಯಲಾಯಿತು. ಹೆಚ್ಚಿನ ರಕ್ತಸ್ರಾವವಾಗದಂತೆ ಹಾಗೂ ಇತರ ಅಂಗಾಂಗಗಳಿಗೆ ಹಾನಿಯಾಗದಂತೆ ನೋವುರಹಿತ ಶಸ್ತ್ರಚಿಕಿತ್ಸೆ ಮೂಲಕ ಆಕೆ ಈಗ ಪೂರ್ಣ ಆರೋಗ್ಯವನ್ನು ಹೊಂದಿದ್ದಾರೆ.

ಹಿಂದೆ ಇಂತಹ ಶಸ್ತ್ರಚಿಕಿತ್ಸೆಯನ್ನು ತೆರೆದ ತಂತ್ರಜ್ಞಾನ ಬಳಸಿ ಮಾಡಲಾಗುತ್ತಿತ್ತು. ರೋಗಿಗೆ ರಕ್ತದ ನಷ್ಟ ಹಾಗೂ ಸ್ನಾಯುಗಳಿಗೆ ಹಾನಿಯಾಗುವ ಸಾಧ್ಯತೆ ಇತ್ತು ಎಂದು ವೈದ್ಯರು ತಿಳಿಸಿದ್ದಾರೆ.

**ವೈದ್ಯರ ತಂಡ:** ಡಾ.ಮಹೇಶ್ ಕೆ. ಮತ್ತು ಮೂಳೆಶಸ್ತ್ರಚಿಕಿತ್ಸಕರಾದ ಡಾ. ಶತಾನಂದಪ್ರಸಾದ್ ರಾವ್, ಅರವಳಿಕೆ ತಜ್ಞರಾದ ಉಜಿರೆಯ ಡಾ. ಚೈತ್ರಾ ಆರ್. ಇವರ ತಂಡ ಯಶಸ್ವಿ ಶಸ್ತ್ರಚಿಕಿತ್ಸೆ ನಡೆಸಿದರು. ಅರೆವಳಿಕೆ ತಂತ್ರಜ್ಞರಾದ ರಂಜಿತ್ ಮತ್ತು ಅಮಿತಾ, ದಾದಿಯರಾದ ಜ್ಯೋತಿ ಮತ್ತು ಶ್ವೇತಲ್ ಸಹಕರಿಸಿದರು. ಎಂ.ಆರ್.ಐ. ಸ್ಕ್ಯಾನಿಂಗ್ ಮೂಲಕ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿರುವುದಾಗಿ ತಿಳಿದುಬಂದಿದೆ. ಕೇವಲ ಒಂದು ಲಕ್ಷದ ಎರಡು ಸಾವಿರ ರೂ ವೆಚ್ಚದಲ್ಲಿ ಶಸ್ತ್ರಚಿಕಿತ್ಸೆ ನಡೆಸಲಾಗಿದೆ.

ಡೆಹರಾಡೂನ್‌ನಲ್ಲಿ ಇತ್ತೀಚೆಗೆ ನಡೆದ ಜಾಗತಿಕ ಬೆನ್ನುಮೂಳೆ ಶಸ್ತ್ರಚಿಕಿತ್ಸಕರ ಸಮಾವೇಶದಲ್ಲಿ ಉಜಿರೆಯ ಯಶಸ್ವಿ ಶಸ್ತ್ರಚಿಕಿತ್ಸೆ ಬಗ್ಗೆ ಪ್ರಸ್ತಾಪಿಸಿದಾಗ ವಿಶ್ವದಲ್ಲೇ ಇದು ಮೊದಲ ಯಶಸ್ವಿ ಎಂಡೋಸ್ಕೋಪಿಕ್ ಇಂಟ್ರಾಡ್ಯೂರಲ್ ಬೆನ್ನುಮೂಳೆಯ ಗೆಡ್ಡೆ ಹೊರತೆಗೆಯುವ ಯಶಸ್ವಿ ಶಸ್ತ್ರಚಿಕಿತ್ಸೆ ಎಂದು ಎಲ್ಲರೂ ಅಭಿನಂದಿಸಿದ್ದಾರೆ.

ಆಸ್ಪತ್ರೆಗೆ ಬೇಕಾದ ಹೊಸ ಎಂ.ಆರ್.ಐ. ಅಳವಡಿಸುವುದಾಗಿ ಹೆಗ್ಗಡೆಯವರು ಭರವಸೆ ನೀಡಿದರು. ಹೇಮಾವತಿ ವೀ. ಹೆಗ್ಗಡೆಯವರು ಕೂಡಾ ವೈದ್ಯರ ಸೇವೆ, ಸಾಧನೆಯನ್ನು ಶ್ಲಾಘಿಸಿ ಅಭಿನಂದಿಸಿದರು. ವೈದ್ಯಕೀಯ ಅಧೀಕ್ಷಕ ಡಾ. ದೇವೇಂದ್ರ ಕುಮಾರ್ ಮತ್ತು ಅರೆವಳಿಕೆ ತಜ್ಞರಾದ ಉಜಿರೆಯ ಡಾ. ಚೈತ್ರಾ ಆರ್. ಉಪಸ್ಥಿತರಿದ್ದರು. ಶಸ್ತ್ರಚಿಕಿತ್ಸೆಯಿಂದ ಗುಣಮುಖರಾದ ಶಿಶಿಲದ ಧರ್ಣಮ್ಮ ಕೂಡಾ ಸಭೆಯಲ್ಲಿ ಉಪಸ್ಥಿತರಿದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಜಾರ್ಖಂಡ್ ರಾಜ್ಯದ ಬೊಕಾರೋ ಉಕ್ಕು ಸ್ಥಾವರಕ್ಕೆ ಎಚ್‌ಡಿಕೆ ಭೇಟಿ

## ವಾರ್ಷಿಕ 300 ದಶಲಕ್ಷ ಟನ್ ಉಕ್ಕು ಉತ್ಪಾದನೆ ಗುರಿ ಗ್ಯಾರಂಟಿ




**ಬೊಕಾರೋ,ಜ.27:** ಪ್ರಧಾನಿ ನರೇಂದ್ರ ಮೋದಿ ಅವರ ಕನಸಿನಂತೆ 2030ರ ವೇಳೆಗೆ ವಾರ್ಷಿಕ 300 ದಶಲಕ್ಷ ಟನ್ ಉಕ್ಕು ಉತ್ಪಾದನೆ ಮಾಡಿಯೇ ತೀರುತ್ತೇವೆ ಎಂದು ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕೆ ಖಾತೆ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರು ವಿಶ್ವಾಸ ವ್ಯಕ್ತಪಡಿಸಿದರು.

ಭಾರತದಲ್ಲಿಯೇ ಅತಿದೊಡ್ಡ ಉಕ್ಕು ಉತ್ಪಾದನಾ ಕಾರ್ಖಾನೆಗಳಲ್ಲಿ ಒಂದಾಗಿರುವ ಜಾರ್ಖಂಡ್ ರಾಜ್ಯದ ಬೊಕಾರೋ ಉಕ್ಕು ಸ್ಥಾವರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಮಾತನಾಡಿದ ಸಚಿವರು; ಪ್ರಧಾನಿಗಳು ನಿಗದಿ ಮಾಡಿರುವ ಗುರಿ ದೊಡ್ಡದಿದೆ. ಆದರೆ, ಅದನ್ನು ಮುಟ್ಟುತ್ತೇವೆ ಎನ್ನುವ ಅಚಲ ವಿಶ್ವಾಸವಿದೆ. ಬೊಕಾರೋ ಉಕ್ಕು ಕಾರ್ಖಾನೆಗೆ ಭೇಟಿ ನೀಡಿದ ಮೇಲೆ ಆ ವಿಶ್ವಾಸ ಇಮ್ಮಡಿಯಾಗಿದೆ ಎಂದು ಹೇಳಿದರು.

ಅಲ್ಲದೆ, ಉಕ್ಕು ಉತ್ಪಾದನೆಯಲ್ಲಿ ಇಂಗಾಲ ಹೊರಸೂಸುವಿಕೆಯನ್ನು ಸಂಪೂರ್ಣ ಶೂನ್ಯಕ್ಕೆ ಇಳಿಸುವುದು ಕೇಂದ್ರ ಸರಕಾರದ ಗುರಿ. 2070ರ ವೇಳೆಗೆ ಇಂಗಾಲದ ಶೂನ್ಯ ಹೊರಸೂಸುವಿಕೆಯನ್ನು ಸಾಧಿಸುತ್ತೇವೆ ಎಂದು ಅವರು ಪಣ ತೊಟ್ಟರು.

ಉಕ್ಕು ಖಾತೆಯ ಸಹಾಯಕ ಸಚಿವರಾದ ಭೂಪತಿರಾಜು ಶ್ರೀನಿವಾಸ ವರ್ಮ, ಭಾರತೀಯ ಉಕ್ಕು ಪ್ರಾಧಿಕಾರದ ಅಧ್ಯಕ್ಷ ಅಮೇರೆಂದು ಪ್ರಕಾಶ್ ಮುಂತಾದ ಉನ್ನತ ಅಧಿಕಾರಿಗಳ ಜತೆ ಬೊಕಾರೋ ಕಾರ್ಖಾನೆಯನ್ನು ವೀಕ್ಷಿಸಿದ ಸಚಿವರು; ಭಾರತದ ಉಕ್ಕು ಬೇಡಿಕೆಯನ್ನು ಪೂರೈಸುವಲ್ಲಿ ಈ ಸ್ಥಾವರ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಿದೆ. ಸ್ಥಾವರಕ್ಕೆ ಮತ್ತಷ್ಟು ಶಕ್ತಿ ತುಂಬಲಾಗುವುದು ಎಂದು ಹೇಳಿದರು.

ಉಕ್ಕು ಉದ್ಯಮ ಭಾರತದ ಸುಸ್ಥಿರ ಅಭಿವೃದ್ಧಿಯ ಬೆನ್ನೆಲುಬು. ಹೀಗಾಗಿ ಆತ್ಮನಿರ್ಭರ್ ಭಾರತದ ಪರಿಕಲ್ಪನೆಯ ಅಡಿಯಲ್ಲಿ ಕೇಂದ್ರ ಸರಕಾರ ನಿರ್ದಿಷ್ಟ ಕಾರ್ಯಸೂಚಿ ಇಟ್ಟುಕೊಂಡು ಕೆಲಸ ಮಾಡುತ್ತಿದೆ. ಬೊಕಾರೊ ಉಕ್ಕು ಸ್ಥಾವರ ಉತ್ಕೃಷ್ಟತೆ ಎಂಜಿನಿಯರಿಂಗ್ ಮತ್ತು ಉತ್ಪಾದನಾ ಶ್ರೇಷ್ಠತೆಗೆ ಉಜ್ವಲ ಉದಾಹರಣೆಯಾಗಿದೆ ಎಂದು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿತಂತೆ ಉಕ್ಕು ಕ್ಷೇತ್ರದಲ್ಲಿ ನಿರಂತರ ಸುಸ್ಥಿರತೆ, ನಾವೀನ್ಯತೆ ಮತ್ತು ನಮ್ಮ ಕಾರ್ಮಿಕರ ಕಲ್ಯಾಣಕ್ಕೆ ಆದ್ಯತೆ ನೀಡುವುದರೊಂದಿಗೆ ನಾವು ಭಾರತವನ್ನು ಜಾಗತಿಕ ಉಕ್ಕಿನ ಶಕ್ತಿ ಕೇಂದ್ರವಾಗಿ ಪರಿವರ್ತಿಸುತ್ತಿದ್ದೇವೆ ಎಂದು ಕುಮಾರಸ್ವಾಮಿ ಅವರು ಒತ್ತಿ ಹೇಳಿದರು.

**ರಕ್ಷಣಾ ಮತ್ತು ಹಸಿರು ಉಕ್ಕಿನ ಮೇಲೆ ಕೇಂದ್ರೀಕರಿಸಿ**

ಬೊಕಾರೊ ಉಕ್ಕು ಕಾರ್ಖಾನೆಯ ಆಡಳಿತ ಕಚೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಚಿವ ಕುಮಾರಸ್ವಾಮಿ ಅವರಿಗೆ 3ಆ ನಕ್ಷೆಯನ್ನು ತೋರಿಸಲಾಯಿತು. ಅಲ್ಲಿಂದಲೇ ಸ್ಥಾವರದ ಕಾರ್ಯಾಚರಣೆಗಳ ಸಮಗ್ರ ಅವಲೋಕನವನ್ನು ಮಾಡಿದ ಸಚಿವರು; ನಂತರ ಪ್ರತಿ ವಿಭಾಗಕ್ಕೂ ಭೇಟಿ ಕೊಟ್ಟರು. ಮುಖ್ಯವಾಗಿ ಊದು ಕುಲುಮೆ (ಬ್ಲಾಸ್ಟ್ ಫರ್ ನೆಸ್) ಗಳನ್ನು ಸಚಿವರು ವೀಕ್ಷಿಸಿದರು.

ಬೊಕಾರೋ ಉಕ್ಕು ಕಾರ್ಖಾನೆಯಿಂದ ಭಾರತೀಯ ನೌಕಾಪಡೆ ಮತ್ತು ಇತರೆ ರಕ್ಷಣಾ ವಲಯಗಳಿಗೆ ಭಾರೀ ಪ್ರಮಾಣದಲ್ಲಿ ಅತ್ಯುತ್ತಮ ಗುಣಮಟ್ಟದ ಡಿಎಂಆರ್ ಪ್ಲೇಟ್‌ಗಳನ್ನು ಸರಬರಾಜು ಮಾಡಲಾಗುತ್ತದೆ. ದೇಶ ರಕ್ಷಣೆಯಲ್ಲಿ ಮಹತ್ವದ ಪಾತ್ರ ಪೋಷಿಸುವ ಡಿಎಂಆರ್ ಪ್ಲೇಟ್ಗಳ ತಯಾರಿಕೆ ಪ್ರಕ್ರಿಯೆಯನ್ನು ಸಚಿವರು ಖುದ್ದು ವೀಕ್ಷಿಸಿದರು. ಅಲ್ಲದೆ; ರಾಷ್ಟ್ರ ಭದ್ರತೆಗೆ ಕಾರ್ಖಾನೆ ನೀಡುತ್ತಿರುವ ಕೊಡುಗೆಯನ್ನು ಸಚಿವರು ಶ್ಲಾಘಿಸಿದರು.

**ಇಂಗಾಲ ಹೊರಸೂಸುವಿಕೆ ಶೂನ್ಯ ಮಟ್ಟಕ್ಕೆ:**

ಕಾರ್ಖಾನೆಯಲ್ಲಿ ಇಂಗಾಲ ಹೊರಸೂಸುವಿಕೆ ಶೂನ್ಯ ಮಟ್ಟಕ್ಕೆ ಇಳಿಸುವಲ್ಲಿ ಕೈಗೊಳ್ಳಲಾಗಿರುವ ಉಪಕ್ರಮಗಳನ್ನು ಸಚಿವರು ವಿಶೇಷವಾಗಿ ಗಮನಿಸಿದರು. ಈ ಉದ್ದೇಶಕ್ಕಾಗಿ ಕಾರ್ಖಾನೆ ಕೈಗೊಂಡಿರುವ ಹಸರೀಕರಣ ಕಾರ್ಯಕ್ರಮಗಳನ್ನು ಸಚಿವರು ಮೆಚ್ಚಿಕೊಂಡರು.

2070ರ ವೇಳೆಗೆ ಉಕ್ಕು ಕ್ಷೇತ್ರದಲ್ಲಿ ಇಂಗಾಲ ಹೊರಸೂಸುವಿಕೆಯನ್ನು ಶೂನ್ಯ ಮಟ್ಟಕ್ಕೆ ತರಲೇಬೇಕು ಎಂದು ಒತ್ತಿ ಹೇಳಿದ ಸಚಿವರು; ಈ ವಿಷಯದಲ್ಲಿ ಯಾವುದೇ ರಾಜಿ ಬೇಡ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಹೆಚ್ಚಿನ ಉತ್ಪಾದನೆಗಾಗಿ ವಿಸ್ತರಣಾ ಯೋಜನೆಗಳು

ಇದೇ ಕೇಂದ್ರ ಸಚಿವರು ಸ್ಥಾವರದ ಮಹತ್ವಾಕಾಂಕ್ಷೆಯ ಕೆಲವಾರು ವಿಸ್ತರಣಾ ಯೋಜನೆಗಳನ್ನು ಪರಿಶೀಲಿಸಿದರು. ಮುಖ್ಯವಾಗಿ ವಾರ್ಷಿಕ 3.2 ದಶಲಕ್ಷ ಟನ್ ಉಕ್ಕು ಉತ್ಪಾದನೆ ಸಾಮರ್ಥ್ಯದ ಊದುಕುಲುಮೆಯ ಸ್ಥಾಪನೆ, ಹೊಸ ಸ್ಟಾಂಪ್ ಚಾರ್ಜ್ ಬ್ಯಾಟರಿಗಳು ಅಳವಡಿಕೆ, ಆಧುನಿಕ ಶೀತಲೀಕರಣ ಘಟಕ ಸ್ಥಾಪನೆ ಇತ್ಯಾದಿ ಯೋಜನೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು ಹಾಗೂ ಎಲ್ಲಾ ಯೋಜನೆಗಳನ್ನು ಕ್ಷಿಪ್ರಗತಿಯಲ್ಲಿ ಅನುಷ್ಠಾನಗೊಳಿಸಿ ಎಂದು ಸೂಚಿಸಿದರು.

# ವಕ್ಫ್ ಮಸೂದೆ ತಿದ್ದುಪಡಿಗೆ ಸಂಸದೀಯ ಸಮಿತಿ ಅಸ್ತು

ನವದೆಹಲಿ, ಜ. 27: ವಕ್ಫ್ ತಿದ್ದುಪಡಿ ಮಸೂದೆಯ ಸಂಸದೀಯ ಸಮಿತಿಯ ಸದಸ್ಯರು ಸರ್ಕಾರ ಮತ್ತು ವಿರೋಧ ಪಕ್ಷದ ನಡುವೆ ಭಿನ್ನಾಭಿಪ್ರಾಯ ಮೂಡಿಸಿರುವ ಕರಡು ಶಾಸನಕ್ಕೆ 572 ತಿದ್ದುಪಡಿಗಳನ್ನು ಸೂಚಿಸಿದ್ದಾರೆ ಎಂದು. ಸಮಿತಿಯು ಸೋಮವಾರ ನಡೆಯುವ ತನ್ನ ಸಭೆಯಲ್ಲಿ ಷರತ್ತು ವಾರು ತಿದ್ದುಪಡಿಗಳನ್ನು ಚರ್ಚಿಸಲಿದ್ದು, ಬಿಜೆಪಿ ಮತ್ತು ವಿರೋಧ ಪಕ್ಷದ ಸದಸ್ಯರು ಮಸೂದೆಗೆ ತಿದ್ದುಪಡಿಗಳನ್ನು ಸಲ್ಲಿಸಲಿದ್ದಾರೆ. ವಕ್ಫ್ ಮಸೂದೆಗೆ ಸಮಿತಿಯ ವಿಚಾರಣೆಯು ಕೊನೆಯ ಹಂತಕ್ಕೆ ತಲುಪುತ್ತಿದ್ದಂತೆ ಬಿಜೆಪಿ ನಾಯಕ ಜಗದಾಂಬಿಕಾ ಪಾಲ್ ಅಧ್ಯಕ್ಷತೆಯ ವಕ್ಫ್ ತಿದ್ದುಪಡಿ ಮಸೂದೆಯ ಜಂಟಿ ಸಮಿತಿಯು ಭಾನುವಾರ ತಡರಾತ್ರಿ ತಿದ್ದುಪಡಿಗಳ ಸಮಗ್ರ ಪಟ್ಟಿಯನ್ನು ವಿತರಿಸಿತು. ಆದಾಗ್ಯೂ, ತಿದ್ದುಪಡಿಗಳನ್ನು ಸಲ್ಲಿಸಿದ ಸದಸ್ಯರ ಪಟ್ಟಿಯಲ್ಲಿ ಬಿಜೆಪಿಯ ಯಾವುದೇ ಮಿತ್ರಪಕ್ಷಗಳಿಲ್ಲ ಎಂದು ವರದಿ ಸೂಚಿಸಿದೆ. ವಕ್ಫ್ (ತಿದ್ದುಪಡಿ) ಮಸೂದೆ, 2024 ಅನ್ನು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಲೋಕಸಭೆಯಲ್ಲಿ ಪರಿಚಯಿಸಿದ ನಂತರ ಆಗಸ್ಟ್ 8 ರಂದು ಸಂಸತ್ತಿನ ಜಂಟಿ ಸಮಿತಿಗೆ ಉಲ್ಲೇಖಿಸಲಾಗಿತ್ತು. ವಕ್ಫ್ ಆಸ್ತಿಗಳನ್ನು ನಿಯಂತ್ರಿಸುವ ಮತ್ತು ನಿರ್ವಹಿಸುವಲ್ಲಿನ ಸಮಸ್ಯೆಗಳು ಮತ್ತು ಸವಾಲುಗಳನ್ನು ಪರಿಹರಿಸಲು 1995 ರ ವಕ್ಫ್ ಕಾಯ್ದೆಯನ್ನು ತಿದ್ದುಪಡಿ ಮಾಡುವ ಗುರಿಯನ್ನು ಈ ಮಸೂದೆ ಹೊಂದಿದೆ. ವಕ್ಫ್ ಎಂದರೆ, ಒಬ್ಬ ಮುಸ್ಲಿಂ ಅಥವಾ ಒಂದು ಮುಸ್ಲಿಂ ಗುಂಪು ತಮ್ಮ ಸ್ವಂತ ಆಸ್ತಿಯನ್ನು ಅಥವಾ ತಮಗೆ ಉಡುಗೊರೆಯಾಗಿ ಸಿಕ್ಕ ಆಸ್ತಿಯನ್ನು ಅಥವಾ ಪಿತ್ರಾರ್ಜಿತ ಆಸ್ತಿಯನ್ನು (ಅದು ಚರಾಸ್ತಿ ಅಥವಾ ಸ್ಥಿರಾಸ್ತಿಯಾದರೂ) ಮನಸಾರೆ ದೇವರ ಹೆಸರಿನಲ್ಲಿ ಅರ್ಪಿಸುವ ಒಂದು ಆಚರಣೆಯಾಗಿದೆ. ಈ ಆಚರಣೆಯು ಅರ್ಪಿಸುವ ವ್ಯಕ್ತಿ ಮತ್ತು ಆತ ನಂಬುವ ದೇವರ ನಡುವಿನ ಒಂದು ಒಪ್ಪಂದ. ಹಾಗಾಗಿಯೆ ಇದೊಂದು ಸರಳ ಧಾರ್ಮಿಕ ಆಚರಣೆ. ಭಾರತ ಸಂವಿಧಾನ ಹೇಳುವ ಆತ್ಮಸಾಕ್ಷಿಯ ಸ್ವಾತಂತ್ರ್ಯದ ಅಡಿಯಲ್ಲಿ ಬರುವ ಆಚರಣೆಯ ಹಕ್ಕು. ಉದಾಹರಣೆಗೆ ಒಂದು ಮುಸ್ಲಿಂ ಗುಂಪು ದುಡ್ಡು ಸಂಗ್ರಹಿಸಿ ಅದರಲ್ಲಿ ಒಂದಿಷ್ಟು ಜಾಗ ಖರೀದಿಸಿ ಮಸೀದಿ ಕಟ್ಟಿ ಅದನ್ನು ದೇವರಿಗೆ ಅರ್ಪಿಸುತ್ತಾರೆ. ಅಂದಿನಿಂದ ಆ ಮಸೀದಿ ಯಾವುದೇ ವ್ಯಕ್ತಿಯ ಆಸ್ತಿಯಾಗಿ ಇರುವುದಿಲ್ಲ, ಬದಲಾಗಿ ಅದು ಮುಸ್ಲಿಮರ ಸಾಮುದಾಯಿಕ ಸೊತ್ತಾಗಿರುತ್ತದೆ. ಇನ್ನೂ ಮುಂದುವರಿದು ಹೇಳುವುದಾದರೆ ತಮ್ಮ ಆಸ್ತಿಯನ್ನು ದೇವರಿಗಾಗಿ ಅರ್ಪಿಸಿದ್ದೇನೆ ಎಂದು ಸಂಕಲ್ಪಿಸುವುದಾಗಿದೆ ವಕ್ಫ್ ನಂತರ ಅದನ್ನು ಸಮುದಾಯದ ಸೇವೆಗೆ, ಸಬಲೀಕರಣದ ಬಳಕೆಗೆ ಮೀಸಲು ಇಡಬೇಕಾಗುತ್ತದೆ. ಇಸ್ಲಾಮಿಕ್ ನಿಯಮಗಳ ಪ್ರಕಾರ, ಒಮ್ಮೆ ಯಾರಾದರೂ ತಮ್ಮ ಆಸ್ತಿಯನ್ನು ವಕ್ಫ್ ಅಂದರೆ ದೇವರಿಗಾಗಿ ಅರ್ಪಿಸಿದರೆ ಅದರ ಮಾಲೀಕ ಅವರಾಗಿರುವುದಿಲ್ಲ, ಬದಲಾಗಿ ?ದೇವರು? ಅದರ ಮಾಲೀಕನಾಗುತ್ತಾನೆ. ಹಾಗಾಗಿ ಒಮ್ಮೆ ತಮ್ಮ ಆಸ್ತಿಯನ್ನು ವಕ್ಫ್ ಎಂದು ಸಂಕಲ್ಪಿಸಿದರೆ, ಅದರ ಮೇಲೆ ಅವರಿಗೆ ಯಾವುದೇ ರೀತಿಯ ಹಕ್ಕು ಇರುವುದಿಲ್ಲ. ಸ್ವತಃ ಆಸ್ತಿಯನ್ನು ವಕ್ಫ್ ಮಾಡಿದ ವ್ಯಕ್ತಿಯೇ ಈ ಸಂಕಲ್ಪವನ್ನು ವಾಪಸ್ಸು ಪಡೆಯುವಂತೆ ಇಲ್ಲ. ಅಷ್ಟೇ ಅಲ್ಲದೆ, ಈ ಆಸ್ತಿಗಳನ್ನು ಆತ ಯಾರಿಗೂ ಮಾರಾಟ ಮಾಡುವಂತೆ, ಉಡುಗೊರೆ ನೀಡುವಂತೆ ಹಾಗೂ ಯಾವುದಕ್ಕೋ ಬದಲಿಯಾಗಿ ನೀಡುವಂತೆಯು ಇಲ್ಲ ಎಂದು ಇಸ್ಲಾಮಿಕ್ ನಿಯಮಗಳು ಹೇಳುತ್ತದೆ. ಕೇಂದ್ರ ಸರ್ಕಾರ ಜಾರಿಗೆ ತರಬೇಕು ಎಂದು ಉದ್ದೇಶಿಸಿರುವ ಹೊಸ ತಿದ್ದುಪಡಿ ಮಸೂದೆಯಲ್ಲಿ ಬರುವ 3ಸಿ, 3ಆರ್, 14 ಮತ್ತು 40 ಸೆಕ್ಷನ್‌ಗಳು ಮುಸ್ಲಿಂ ವಿರೋಧಿ ಮತ್ತು ವಕ್ಫ್ ವಿರೋಧಿಯಾಗಿದೆ ಎಂಬ ಆರೋಪಗಳನ್ನು ಮಾಡಲಾಗುತ್ತಿದೆ. ಬಹಳ ಮುಖ್ಯವಾಗಿ, ತಿದ್ದುಪಡಿ ಮಸೂದೆಯ 3ಆರ್ ಸೆಕ್ಷನ್, ಯಾವುದಾದರೂ ವಕ್ಫ್ ಆಸ್ತಿಯ ಬಗ್ಗೆ ವಕ್ಫ್ ಬೋರ್ಡ್ ಮತ್ತು ರಾಜ್ಯ ಸರ್ಕಾರದ ನಡುವೆ ತಕರಾರು ಇದ್ದರೆ ಆ ವ್ಯಾಜ್ಯವನ್ನು ಜಿಲ್ಲಾಧಿಕಾರಿಯ ಬಳಿಗೆ ತೆಗೆದುಕೊಂಡುಹೋಗಬೇಕು ಎಂದು ಹೇಳುತ್ತದೆ. ಇದರ ಬಗ್ಗೆ ಜಿಲ್ಲಾಧಿಕಾರಿ ವಿಚಾರಣೆ ನಡೆಸಬೇಕು ಎಂದು ಹೇಳುವ ಸೆಕ್ಷನ್, ಅದರ ತೀರ್ಮಾನ ಬರುವವರೆಗೆ ಅದು ಸರ್ಕಾರದ ಜಾಗವಾಗಿರಲಿದೆ ಎಂದು ಹೇಳುತ್ತದೆ.

ಒಂದುವೇಳೆ ಇದೇ ರೀತಿ ಮಸೀದಿಯೊಂದರ ತಕರಾರು ಜಿಲ್ಲಾಧಿಕಾರಿ ಬಳಿಗೆ ತೆಗೆದುಕೊಂಡು ಹೋದರೆ, ಅದರ ತೀರ್ಮಾನ ಬರುವವರೆಗೆ ಅದು ಸರ್ಕಾರಿ ಜಾಗವಾಗಿ ಇರುತ್ತದೆ. ಇಂತಹ ಸರ್ಕಾರದ ಜಾಗದಲ್ಲಿ ಯಾರು ಬೇಕಾದರೂ ಕಾರ್ಯಕ್ರಮ ಮಾಡಲು ಅನುಮತಿ ನೀಡುವ ಅಪಾಯವಿರುತ್ತದೆ ಎಂದು ಟೀಕಾಕಾರರು ಹೇಳಿದ್ದಾರೆ. ಅಲ್ಲದೆ, ಪ್ರಸ್ತುತ ಜಾರಿಯಲ್ಲಿರುವ ವಕ್ಫ್ ಕಾಯ್ದೆಯ ಪ್ರಕಾರ, ತಕರಾರುಗಳು ಟ್ರಿಬ್ಯುನಲ್ಗೆ ಹೋಗಬೇಕು, ಅಲ್ಲಿಯೂ ಬಗೆಹರಿಯದಿದ್ದರೆ ಹೈಕೋರ್ಟ್ ಮತ್ತು ಸುಪ್ರೀಂಕೋರ್ಟ್ಗೆ ಹೋಗಬಹುದು. ಆದರೆ ತಿದ್ದುಪಡಿ ಮಸೂದೆಯ ಪ್ರಕಾರ ಜಿಲ್ಲಾಧಿಕಾರಿಯೇ ಕೊನೆಯ ಆಯ್ಕೆಯಾಗಿರುತ್ತದೆ. ಅದರ ನಂತರ ಮೇಲ್ಮನವಿಯ ಬಗ್ಗೆ ಈ ತಿದ್ದುಪಡಿ ಮಸೂದೆ ಮಾತನಾಡುವುದೇ ಇಲ್ಲ. ಜಿಲ್ಲಾಧಿಕಾರಿಯ ತೀರ್ಪಿನ ವಿರುದ್ಧ ಮೇಲ್ಮನವಿಯ ಬಗ್ಗೆ ತಿದ್ದುಪಡಿ ಮಸೂದೆಯು ಮೌನವಾಗಿದೆ. ಈ ಮಸೂದೆಯು ನ್ಯಾಯಾಲಯದ ಬಗ್ಗೆ ಹೇಳುವುದೇ ಇಲ್ಲ. ಇದು ಪ್ರಜಾಪ್ರಭುತ್ವ ವಿರೋಧಿಯಾಗಿದ್ದು, ಜಿಲ್ಲಾಧಿಕಾರಿಗಳ ಮತ್ತು ಆಡಳಿತರೂಢ ಪಕ್ಷಗಳ ಸರ್ವಾಧಿಕಾರ ಇಲ್ಲಿ ಕೆಲಸ ಮಾಡಲಿದೆ ಎಂಬ ಆರೋಪ ವ್ಯಕ್ತವಾಗಿದೆ.

# ಮುಡಾ ಹಗರಣ: ತನಿಖೆಯಿಂದ ತಪ್ಪಿಸಿಕೊಳ್ಳಲು ಸಿಎಂ ಪ್ರಯತ್ನ: ಜೋಶಿ

**ಮೈಸೂರು,ಜ.27:** ಮುಡಾ ಹಗರಣದಲ್ಲಿ ಏನಾದರೂ ಮಾಡಿ ತನಿಖೆಯಿಂದ ತಪ್ಪಿಸಿಕೊಳ್ಳಲು ಸಿಎಂ ಸಿದ್ದರಾಮಯ್ಯ ಪ್ರಯತ್ನಿಸುತ್ತಿದ್ದಾರೆ. ರಾಜ್ಯಪಾಲರ ಆದೇಶದ ವಿರುದ್ಧವಾಗಿ ಹೈಕೋರ್ಟ್‌ಗೆ ಹೋದರು. ಆದರೆ ರಾಜ್ಯಪಾಲರ ನಡೆಯನ್ನು ಹೈಕೋರ್ಟ್ ತೆಗೆದು ಹಾಕಿಲ್ಲ. ಉಚ್ಚ ನ್ಯಾಯಾಲಯ ಸಿಎಂ ಪ್ರಕರಣದಲ್ಲಿ ನಿಯಮಗಳನ್ನು ಉಲ್ಲಂಘಿಸಿದ್ದಾರೆಂದು ಹೇಳಿದ ಮೇಲೂ ಅಧಿಕಾರದಲ್ಲಿ ಸಿದ್ದರಾಮಯ್ಯ ಮುಂದುವರೆದಿರುವುದೇ ಒಂದು ಅನೈತಿಕತೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಿಜಿಸ್ಟರ್ ಮೈಕ್ರೋ ಫೈನಾನ್ಸ್ ಗಳು ಆರ್‌ಬಿಐ ನಿಯಾಮವಳಿಗೆ ಒಳಪಡುತ್ತದೆ. ರಾಜ್ಯ ಸರ್ಕಾರದ ಇದನ್ನು ಗಮನಿಸಬೇಕು. ಕಾನೂನು ಕೈಗೆ ತೆಗೆದುಕೊಳ್ಳುವವರ ವಿರುದ್ಧ ಸಿಎಂ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕು. ನಿಯಮಗಳನ್ನು ಜಾರಿಗೆ ತರಬೇಕು ಎಂದರು.

ಪೊಲೀಸರಿಗೆ ಅಧಿಕಾರ ಕೊಟ್ಟು ಅದರಲ್ಲಿ ಭ್ರಷ್ಟಾಚಾರ ಆಗಬಾರದು. ಸಮಿತಿಗೆ ಪ್ರಾಮಾಣಿಕ ಅಧಿಕಾರಿಗಳನ್ನು ನೇಮಿಸಿ ಮಾನಿಟರ್ ಮಾಡಬೇಕು. ಆರ್ ಬಿಐ ಗೈಡ್ ನೈಲ್ಸ್ ನಲ್ಲಿ ಎಷ್ಟು ಪರ್ಸಟೇಂಜ್ ಬಡ್ಡಿ ಹಾಕಬೇಕು ಎಂದಿದೆ. ಅನ್ ರಿಜಿಸ್ಟರ್ ಫೈನಾನ್ಸ್ ಸಾಕಷ್ಟಿದೆ. ಎನ್ ಬಿಎಫ್ಸಿಯಲ್ಲೂ ಸಹ ಇದಕ್ಕೆ ಪವರ್ ಸಿಗುತ್ತಿಲ್ಲ. ಈಗಾಗಿ ರಾಜ್ಯ ಸರ್ಕಾರ ಕಟ್ಟುನಿಟ್ಟಾಗಿ ಕಂಟ್ರೋಲ್ ಮಾಡಬೇಕು. ಇದರಲ್ಲಿ ಭ್ರಷ್ಟಾಚಾರವಾಗುತ್ತಿದೆ. ಫೈನಾನ್ಸ್ ಕಂಪನಿಗಳು ಪೊಲೀಸರ ರಕ್ಷಣೆ ಪಡೆದು ತೊಂದರೆ ಕೊಡುತ್ತಿದ್ದಾರೆ ಎಂಬ ಮಾಹಿತಿ ಇದೆ. ಪೊಲೀಸರ ಮೇಲೆ ನಾನು ಆರೋಪ ಮಾಡುವುದಿಲ್ಲ. ರಾಜ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ತೊಡಗಿದೆ ಹೀಗಾಗಿ ಈ ರೀತಿಯ ಪ್ರಕರಣಗಳು ಹೆಚ್ಚಾಗಿದೆ ಎಂದರು. ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದು ಒಂದೂವರೆ ವರ್ಷವಾಗಿದೆ. ರಾಜ್ಯದಲ್ಲಿ ಏನೇ ನಡೆದರು ಹಿಂದಿನ ಬಿಜೆಪಿ ಹಾಗೂ ಕೇಂದ್ರ ಸರ್ಕಾರದ ಮೇಲೆ ಹಾಕುತ್ತಾರೆ. ಮಳೆ ಹೆಚ್ಚಾದರು ಕಡಿಮೆಯಾದರೂ ಕೇಂದ್ರ ಬಿಜೆಪಿ ಹಾಗೂ ರಾಜ್ಯದ ಬಿಜೆಪಿ ಕಾರಣ ಎನ್ನುತ್ತಾರೆ. ಈ ಬಾಲಿಷ ಹೇಳಿಕೆಗಳನ್ನು ಕೊಡವುದನ್ನು ಬಿಡಬೇಕು. ಜನರು ಅಧಿಕಾರ ಕೊಟ್ಟಿದ್ದಾರೆ. ಒಳ್ಳೆಯ ಕೆಲಸಗಳನ್ನು ಮಾಡಲಿ. ಸರ್ಕಾರ ಭ್ರಷ್ಟಾಚಾರದಲ್ಲಿ ತೊಡಗಿದೆ. ಕುರ್ಚಿ ಜಗಳದಲ್ಲಿ ನಿರತರಾಗಿದ್ದಾರೆ ಎಂದು ಪ್ರಹ್ಲಾದ್ ಜೋಶಿ ಹೇಳಿದರು.

# ಸರ್ಕಾರ ಸಾಲ ನೀಡದಿರುವುದರಿಂದ ಮೈಕ್ರೋ ಫೈನಾನ್ಸ್ ಮೊರೆಹೋದ ಜನ: ಅಶೋಕ್ ಆಕ್ರೋಶ

ಬೆಂಗಳೂರು, ಜ. 27 : ಕಾಂಗ್ರೆಸ್ ಸರ್ಕಾರ ಮಾಡಿದ ಪಾಪದಿಂದಾಗಿ ಜನರು ಮೈಕ್ರೋ ಫೈನಾನ್ಸ್ನಲ್ಲಿ ಸಾಲ ಪಡೆಯುತ್ತಿದ್ದಾರೆ. ಸರ್ಕಾರವೇ ಸಾಲ ನೀಡಿದ್ದರೆ ಜನರು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಬರುತ್ತಿರಲಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಕ್ರೋಶ ವ್ಯಕ್ತಪಡಿಸಿದರು. ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಗಂಗಾ ಕಲ್ಯಾಣ ಯೋಜನೆಗೆ 2022–23 ರಲ್ಲಿ ಬಿಜೆಪಿ ಸರ್ಕಾರ 60 ಕೋಟಿ ರೂ. ಅನುದಾನ ನೀಡಿತ್ತು. 2024–25 ರಲ್ಲಿ ಕಾಂಗ್ರೆಸ್ 40 ಕೋಟಿ ರೂ. ನೀಡಿದೆ. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಸ್ವಯಂ ಉದ್ಯೋಗ ಯೋಜನೆಗೆ ಬಿಜೆಪಿ 100 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 45 ಕೋಟಿ ರೂ. ನೀಡಿದೆ. ತಾಂಡಾ ಅಭಿವೃದ್ಧಿ ನಿಗಮದ ಸ್ವಯಂ ಉದ್ಯೋಗ ಯೋಜನೆಗೆ ಬಿಜೆಪಿ 110 ಕೋಟಿ ರೂ. ನೀಡಿದರೆ ಕಾಂಗ್ರೆಸ್ 60 ಕೋಟಿ ರೂ. ನೀಡಿದೆ. ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮಕ್ಕೆ ಬಿಜೆಪಿ 100 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 50 ಕೋಟಿ ರೂ. ನೀಡಿದೆ. ಜೊತೆಗೆ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಭ್ರಷ್ಟಾಚಾರದಿಂದ ಹಣ ಫ್ರೀಜ್ ಆಗಿದೆ. ನಿಗಮಗಳಿಗೆ 1,700 ಕೋಟಿ ರೂ. ನೀಡಬೇಕಿದ್ದು, 643 ಕೋಟಿ ರೂ. ನೀಡಲಾಗಿದೆ. ಅಂದರೆ ಎಲ್ಲ ನಿಗಮಗಳಿಗೆ ಒಟ್ಟು 1,055 ಕೋಟಿ ರೂ. ಕೊರತೆಯಾಗಿದೆ. ಈ ಹಣದಲ್ಲಿ ಜನರಿಗೆ ಸಾಲ ನೀಡಬಹುದಿತ್ತು. ಕೊರತೆಯಾದ ಹಣವನ್ನು ಸಾಲವಾಗಿ ಮೈಕ್ರೋ ಫೈನಾನ್ಸ್‌ಗಳು ನೀಡುತ್ತಿವೆ ಎಂದರು.

ಪ್ರತಿ ಬಜೆಟ್‌ನಲ್ಲೂ ಅನುದಾನ ಶೇ.20 ರಷ್ಟು ಹೆಚ್ಚಾಗಬೇಕು. 2022–23 ರಲ್ಲಿ ಬಿಜೆಪಿ ಸರ್ಕಾರ ಕೃಷಿ ಇಲಾಖೆಗೆ 7,288 ಕೋಟಿ ರೂ. ನೀಡಿದರೆ, ಕಾಂಗ್ರೆಸ್ ಸರ್ಕಾರ 5,035 ಕೋಟಿ ರೂ. ನೀಡಿದೆ. ಅಂದರೆ 2,253 ಕೋಟಿ ರೂ. ಕೊರತೆಯಾಗಿದೆ. ಇದು ರೈತರ ಬದುಕಿನ ಮೇಲೆ ಪರಿಣಾಮ ಬೀರಿದೆ. ತೋಟಗಾರಿಕಾ ಇಲಾಖೆಗೆ ಬಿಜೆಪಿ 1,374 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 1,207 ಕೋಟಿ ರೂ. ನೀಡಿದೆ. ಕೃಷಿ, ತೋಟಗಾರಿಕೆ, ಗ್ರಾಮೀಣಾಭಿವೃದ್ಧಿ, ಸಹಕಾರಿ ಎಲ್ಲ ಸೇರಿ ಬಿಜೆಪಿ 15,383 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 14,768 ಕೋಟಿ ರೂ. ನೀಡಿದೆ. ಇದರಿಂದ 614 ಕೋಟಿ ರೂ. ಕೊರತೆಯಾಗಿದೆ. ಕಂದಾಯ ಇಲಾಖೆಗೆ ಬಿಜೆಪಿ 1534 ಕೋಟಿ ರೂ.ನೀಡಿದರೆ, ಕಾಂಗ್ರೆಸ್ನಿಂದ 940 ಕೋಟಿ ರೂ. ನೀಡಲಾಗಿದೆ. 594 ಕೋಟಿ ರೂ. ಕೊರತೆಯಾಗಿದೆ. ಲೋಕೋಪಯೋಗಿ ಇಲಾಖೆಗೆ ಬಿಜೆಪಿ 12,410 ಕೋಟಿ ರೂ. ನೀಡಿದರೆ, ಕಾಂಗ್ರೆಸ್ನಿಂದ 9,699 ಕೋಟಿ ರೂ. ನೀಡಲಾಗಿದೆ. 2,710 ಕೋಟಿ ರೂ. ಕೊರತೆಯಾಗಿದೆ. ನೀರಾವರಿಗೆ ಬಿಜೆಪಿ 19,610 ಕೋಟಿ ರೂ. ನೀಡಿದರೆ, ಕಾಂಗ್ರೆಸ್ 16,834 ಕೋಟಿ ರೂ. ನೀಡಿದೆ. ಇದರಿಂದ 2755 ಕೋಟಿ ರೂ. ಕೊರತೆಯಾಗಿದೆ ಎಂದು ತಿಳಿಸಿದರು. ಮೈಕ್ರೋ ಫೈನಾನ್ಸ್ ಮೀಟರ್ ಬಡ್ಡಿ ದಂಧೆಯಲ್ಲಿ ರೌಡಿಗಳು ಈವರೆಗೆ ಸುಮ್ಮನಿದ್ದರು. ಕಾಂಗ್ರೆಸ್ ಸರ್ಕಾರದಿಂದಾಗಿ ರೌಡಿಗಳಿಗೆ ಉದ್ಯೋಗ ಸಿಕ್ಕಿದೆ. ಬಡ ಜನರು ಸಾಲ ಮಾಡಿದರೆ ಮನೆ ಬಿಟ್ಟು ಹೊರಡಬೇಕಾಗಿದೆ. ಜನರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಹಿಂದಿನ ಬಿಜೆಪಿ ಸರ್ಕಾರ ಸಾಲ ನೀಡುತ್ತಿತ್ತು. ಈಗ ಕಾಂಗ್ರೆಸ್ ಸರ್ಕಾರ ನಿಗಮಗಳ ಮೂಲಕ ಸಾಲ ನೀಡದೆ, ಜನರು ಅನಿವಾರ್ಯವಾಗಿ ಮೈಕ್ರೋ ಫೈನಾನ್ಸ್ ಗಳ ಮೊರೆ ಹೋಗಿದ್ದಾರೆ ಎಂದು ದೂರಿದರು.



ಮೈಕ್ರೋ ಫೈನಾನ್ಸ್‌ನಲ್ಲಿ 10 ಜನರ ಗುಂಪು ರಚಿಸಿ, ಪ್ರತಿಯೊಬ್ಬರಿಗೂ 50 ಸಾವಿರ ರೂ. ಸಾಲ ನೀಡುತ್ತಾರೆ. ಒಬ್ಬರಿಗೆ ಉಳಿದವರು ಶೂರಿಟಿ ಕೊಡಬೇಕಾಗುತ್ತದೆ. ಪ್ರತಿ ತಿಂಗಳು ಅಧಿಕ ಬಡ್ಡಿ ಕಟ್ಟಬೇಕಾಗುತ್ತದೆ. 50 ಸಾವಿರ ರೂ. ಸಾಲ ಪಡೆದರೆ 67 ಸಾವಿರ ರೂ. ವಾಪಸ್ ನೀಡಬೇಕು. ಎರಡು ತಿಂಗಳು ಕಟ್ಟಲಿಲ್ಲವೆಂದರೆ ರೌಡಿಗಳು ಮನೆಗೆ ಹೋಗಿ ಗಲಾಟೆ ಮಾಡುತ್ತಾರೆ. ಅನೇಕ ಹಳ್ಳಿಗಳಲ್ಲಿ ಜನರು ಮನೆ ಬಿಟ್ಟು ವಲಸೆ ಹೋಗಿದ್ದಾರೆ ಎಂದರು.

ಕೋಟೆ ಲೂಟಿಯಾದ ನಂತರ ಬಾಗಿಲು ಹಾಕಿದರು ಎಂಬಂತೆ, ಸಿಎಂ ಸಿದ್ದರಾಮಯ್ಯ ಈಗ ಹೊಸ ಕಾನೂನು ತರಲು ಮುಂದಾಗಿದ್ದಾರೆ. ನೋಟಿಸ್ ಕೊಡದೆ ಜನರನ್ನು ಮನೆಯಿಂದ ಹೊರಕ್ಕೆ ಕಳುಹಿಸಲಾಗಿದೆ. ಇಂತಹ ಸಮಯದಲ್ಲಿ ಪೊಲೀಸರು ಕ್ರಮ ಕೈಗೊಳ್ಳಬೇಕಿತ್ತು. ಆದರೆ ಪೊಲೀಸರು ಕೂಡ ಇದಕ್ಕೆ ಸಹಕಾರ ನೀಡಿದ್ದಾರೆ. ಕಂಟ್ರೋಲ್ ರೂಮ್ ರೂಪಿಸಿದರೂ ಅದರಿಂದ ಜನರಿಗೆ ಪ್ರಯೋಜನವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿಎಂ ಸಿದ್ದರಾಮಯ್ಯ ಸಾಲ ಮನ್ನಾ ಬಗ್ಗೆ ಹೇಳಿದ್ದರಿಂದ ಡಿಸಿಸಿ ಬ್ಯಾಂಕ್ಗಳಿಗೆ ನಷ್ಟವಾಗಿದೆ. ಸಾಲ ಪಡೆದವರು ಕಾಂಗ್ರೆಸ್ ಸರ್ಕಾರವನ್ನು ನಂಬಿಕೊಂಡು ಕೂತಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮಾಂಗಲ್ಯ ಕಿತ್ತುಕೊಳ್ಳುತ್ತಾರೆಂದು ಪ್ರಧಾನಿ ಮೋದಿ ಹೇಳಿದ್ದು ಈಗ ನಿಜವಾಗಿದೆ. ಗೃಹಲಕ್ಷ್ಮಿಯ ಹಣ ಮಹಿಳೆಯರಿಗೆ ನಿಜವಾಗಿಯೂ ಸಿಕ್ಕಿದ್ದರೆ ಏಕೆ ಮೈಕ್ರೋ ಫೈನಾನ್ಸ್ಗೆ ಹೋಗುತ್ತಾರೆ ಎಂದು ಪ್ರಶ್ನೆ ಮಾಡಿದರು. ಸಿಎಂ ಸಿದ್ದರಾಮಯ್ಯ ಬಜೆಟ್ ಮಂಡಿಸಲು ಕೇಂದ್ರ ಸರ್ಕಾರ ಹಣ ಕೊಡಬೇಕಿದೆ. ಇದರ ಜೊತೆಗೆ ಬೆಂಗಳೂರಿಗೆ ಅನುದಾನ ನೀಡಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಕೇಳಿದ್ದಾರೆ. ಈಗ ಮೈಕ್ರೋ ಫೈನಾನ್ಸ್ ವಿರುದ್ಧ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳಬೇಕಂತೆ. ಎಲ್ಲವನ್ನೂ ಪ್ರಧಾನಿ ನರೇಂದ್ರ ಮೋದಿ ಮಾಡುವುದಾದರೆ ಇಲ್ಲಿ ಕಾಂಗ್ರೆಸ್ ಏಕೆ ಅಧಿಕಾರದಲ್ಲಿದೆ ಎಂದು ಪ್ರಶ್ನೆ ಮಾಡಿದರು. ಏಕರೂಪ ನಾಗರಿಕ ಸಂಹಿತೆ : ಏಕರೂಪ ನಾಗರಿಕ ಸಂಹಿತೆ ಜಾರಿಯಾದರೆ ಎಲ್ಲರೂ ಸಮಾನ ಎಂಬ ಭಾವನೆ ಬೆಳೆಯುತ್ತದೆ. ಬೇರೆ ದೇಶಗಳಲ್ಲಿ ಎಲ್ಲ ನಾಗರಿಕರು ಒಂದೇ ಎಂದು ಪರಿಗಣಿಸಲಾಗುತ್ತದೆ. ಅದೇ ರೀತಿ ಭಾರತದಲ್ಲೂ ಹಿಂದೂಗಳಿಗೆ ಇರುವ ಕಾನೂನು ಎಲ್ಲ ಧರ್ಮೀಯರಿಗೆ ಅನ್ವಯವಾಗಬೇಕು ಎಂದರು.


## ಫೈನಾನ್ಸ್ ಸಿಬ್ಬಂದಿ ಕಿರುಕುಳ ಶಿಕ್ಷಕಿ ಆತ್ಮಹತ್ಯೆ

**ದಾವಣಗೆರೆ:** ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಈಗಾಗಲೇ ಸಿಎಂ ಸಿದ್ದರಾಮಯ್ಯ ಕಠಿಣ ಕಾನೂನು ಜಾರಿ ಮಾಡುವುದಾಗಿ ತಿಳಿಸಿದ್ದು ಅಲ್ಲದೆ, ಸಾಲಗಾರರಿಗೆ ಕಿರುಕುಳ ನೀಡಬಾರದು ಎಂದು ಮೈಕ್ರೋ ಫೈನಾನ್ಸ್ ನವರಿಗೆ ಖಡಕ್ ಸೂಚನೆ ನೀಡಿದ್ದಾರೆ. ಇದರ ಹೊರತಾಗಿಯೂ ಕೂಡ ಇದೀಗ ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲೂಕಿನಲ್ಲಿ ಖಾಸಗಿ ಫೈನಾನ್ಸ್ ಸಿಬ್ಬಂದಿಗಳ ಕಿರುಕುಳಕ್ಕೆ ಬೇಸತ್ತು ಸರ್ಕಾರಿ ಶಿಕ್ಷಕಿ ಒಬ್ಬರು ತುಂಗಭದ್ರಾ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಹೌದು ತುಂಗಭದ್ರಾ ನದಿಗೆ ಹಾರಿ ಶಿಕ್ಷಕಿ ಒಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹೊನ್ನಾಳಿ ತಾಲೂಕಿನಲ್ಲಿ ನಡೆದಿದೆ. ಹೊನ್ನಾಳಿ ನಿವಾಸಿಯಾಗಿದ್ದ ಸರಕಾರಿ ಶಾಲೆಯ ಶಿಕ್ಷಕಿ ಪುಷ್ಪಲತಾ (46) ಆತ್ಮಹತ್ಯೆ ಮಾಡಿಕೊಂಡಂತಹ ಶಿಕ್ಷಕಿ. ಮನೆ ಕಟ್ಟಲು ಖಾಸಗೆ ಮೈಕ್ರೋ ಫೈನಾನ್ಸ್ ಹಾಗೂ ಕೈಗಡ ಸಾಲ ತೆಗೆದುಕೊಂಡಿದ್ದರು. ಖಾಸಗಿ ಫೈನಾನ್ಸ್ ಕಾಟಕ್ಕೆ ಹಾಗೂ ಸಾಲಕ್ಕೆ ಹೆದರಿ ಶಿಕ್ಷಕಿ ಸೂಸೈಡ್ ಮಾಡಿಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ.ಹೊನ್ನಾಳಿಯ ಸರ್ಕಾರಿ ಶಾಲೆ ಶಿಕ್ಷಕಿ ಪುಷ್ಪಲತಾ ಅವರು ಭಾನುವಾರ ರಾತ್ರಿಯಿಂದ ಕಾಣೆಯಾಗಿದ್ದರು.ಹೊನ್ನಾಳಿ ಪಟ್ಟಣದ ರಾಘವೇಂದ್ರ ಮಠದ ಸಮೀಪ, ತುಂಗಭದ್ರಾ ನದಿ ದಂಡೆಯ ಬಳಿ ಪುಷ್ಪಲತಾ ಅವರ ಚಪ್ಪಲಿ ದೊರೆತಿವೆ. ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಕುಟುಂಬದವರು ಶಂಕೆ ವ್ಯಕ್ತಪಡಿಸಿದ್ದರು. ಆದರೆ ಪುಷ್ಪಲತಾ ಇದೀಗ ಆತ್ಮಹತ್ಯೆ ಮಾಡಿಕೊಂಡಿರುವುದು ದೃಢಪಟ್ಟಿದೆ.

# ಮೈಕ್ರೋ ಫೈನಾನ್ಸ್: ಕಿರುಕುಳದ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ: ಕಂದಾಯ ಸಚಿವ ಸೂಚನೆ

**ಬೆಂಗಳೂರು, ಜ.27;** ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳದ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಕಂದಾಯ ಸಚಿವ ಕೃಷ್ಣಭೈರೇಗೌಡ ಸೂಚನೆ ನೀಡಿದ್ದಾರೆ.



ನಗರದ ವಿಕಾಸಸೌಧದಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳ ಜೊತೆ ಮಾಸಿಕ ಪ್ರಗತಿ ಪರಿಶೀಲನೆ ಸಭೆ ನಡೆಸಿದ ವೇಳೆ ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳದ ಬಗ್ಗೆ ಪ್ರಮುಖವಾಗಿ ಪ್ರಸ್ತಾಪಿಸಿದರು. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳು 59 ಸಾವಿರ ಕೋಟಿ ರೂ. ಸಾಲ ನೀಡಿವೆ. ತಮ ಸಾಮರ್ಥ್ಯವನ್ನು ವಿಸ್ತರಿಸಿಕೊಳ್ಳಲು ಸಾಮರ್ಥ್ಯ ಮೀರಿ ಸಾಲ ನೀಡಿವೆ. ಸಾಲ ನೀಡುವಾಗ ಸಾಲ ಪಡೆದವರ ಆರ್ಥಿಕ ಸಾಮರ್ಥ್ಯವನ್ನು ಕಡೆಗಣಿಸಲಾಗುತ್ತಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳು ಕೂಡ ತಮ ವ್ಯವಹಾರವನ್ನು ನಿಲ್ಲಿಸಬೇಕಾದಂತಹ ಪರಿಸ್ಥಿತಿ ಬರಬಹುದು ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ವಿಚಾರವಾಗಿ ಇತ್ತೀಚೆಗೆ ಸಭೆ ನಡೆಸಿದ್ದರು. ಮುಂದುವರೆದ ಭಾಗವಾಗಿ ಇಂದು ಹಣಕಾಸು ಇಲಾಖೆಯ ವ್ಯವಹಾರಗಳ ಕಾರ್ಯದರ್ಶಿ ಅವರೊಂದಿಗೆ ಸಂಜೆ ಮತ್ತೊಂದು ಸುತ್ತಿನ ಸಭೆ ನಡೆಸಿ ಮುಖ್ಯಮಂತ್ರಿ ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳು ಮೈಕ್ರೋ ಫೈನಾನ್ಸ್ ಕಂಪನಿಗಳ ಮುಖ್ಯಸ್ಥರ ಜೊತೆಗೆ ಸಭೆ ನಡೆಸಿ ಸಾಲ ವಸೂಲಾತಿಗೆ ಆರ್.ಬಿ.ಐ ನಿಗದಿಪಡಿಸಿರುವ ಮಾದರಿ ಕಾರ್ಯಾಚರಣೆಯನ್ನು ಪಾಲನೆ ಮಾಡಲು ಕಟ್ಟುನಿಟ್ಟಿನ ಆದೇಶ ನೀಡಬೇಕು. ಒಂದು ವೇಳೆ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಐಪಿಸಿ ಸೆಕ್ಷನ್‌ಗಳ ಬಳಕೆ ಮಾಡಿ ಪ್ರಕರಣ ದಾಖಲಿಸಿ ಒಂದೆರಡು ಪ್ರಕರಣಗಳು ದಾಖಲಾದರೆ ಮೈಕ್ರೋ ಫೈನಾನ್?ಸ ಕಂಪನಿಗಳು ತಮಷ್ಟಕ್ಕೆ ತಾವು ದಾರಿಗೆ ಬರುತ್ತವೆ ಎಂದರು. ಈ ನಡುವೆ ಮಿತಿಮೀರಿದ ಸಾಲದ ವ್ಯವಹಾರವನ್ನು ಮೈಕ್ರೋ ಫೈನಾನ್ಸ್ ಕಂಪನಿಗಳು ನಡೆಸುತ್ತಿವೆ. ಆರ್ಥಿಕ ಸಾಮರ್ಥ್ಯವನ್ನು ಮೀರಿ ಸಾಲ ನೀಡಲಾಗುತ್ತಿದೆ. ಒಂದೊಂದು ಕುಟುಂಬಕ್ಕೆ 2–3 ಸಾಲಗಳನ್ನು ನೀಡಲಾಗುತ್ತಿದೆ. ಸಾಲದ ಗರಿಷ್ಠ ಮಿತಿ 2 ಲಕ್ಷ ರೂ.ಗಳಿದ್ದರೂ, 5 ಲಕ್ಷ, 6 ಲಕ್ಷ ರೂ.ಗಳನ್ನು ಸಾಲ ನೀಡಲಾಗಿದೆ. ಇದರಿಂದಾಗಿ ಮರು ಪಾವತಿ ಸಾಮರ್ಥ್ಯ ಕುಗ್ಗುತ್ತಿದೆ ಎಂದು ವಿಷಾದಿಸಿದರು. ಇಂದು ಸಭೆಯ ಬಳಿಕ ಜಿಲ್ಲಾಧಿಕಾರಿಗಳು ತಕ್ಷಣವೇ ಜಿಲ್ಲೆಯಲ್ಲಿರುವ ಅನಧಿಕೃತ ಮೈಕ್ರೋ ಫೈನಾನ್ಸ್ ಕಂಪನಿಗಳ ಮುಖ್ಯಸ್ಥರ ಜೊತೆ ತುರ್ತು ಸಭೆ ನಡೆಸಬೇಕು. ಹಣಕಾಸು ಇಲಾಖೆಯಿಂದ ಆರ್.ಬಿ.ಐ ಮಾರ್ಗಸೂಚಿಯ ಆದೇಶವನ್ನು ಜಿಲ್ಲಾಡಳಿತಕ್ಕೆ ಒದಗಿಸಲಾಗುತ್ತದೆ. ಅದರ ಕುರಿತು ಕಂಪನಿಗಳಿಗೆ ಮನವರಿಕೆ ಮಾಡಿಕೊಡಬೇಕು. ಮುಖ್ಯಮಂತ್ರಿಯವರು ಬೆಂಗಳೂರಿನಲ್ಲಿ ಒಂದು ಸುತ್ತಿನ ಸಭೆ ನಡೆಸಿ ಈಗಾಗಲೇ ಸೂಚನೆ ನೀಡಿದ್ದಾರೆ. ಜಿಲ್ಲಾ ಕೇಂದ್ರಗಳಲ್ಲೂ ಇದರ ಬಗ್ಗೆ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು. ಕಂಪನಿಗಳು ಆಕ್ರಮಣಕಾರಿಯಾಗಿ ತಮ ಸಾಲ ವಹಿವಾಟನ್ನು ನಡೆಸುತ್ತಿವೆ. ಸಾಮರ್ಥ್ಯಕ್ಕನುಗುಣವಾಗಿ ಸಾಲ ನೀಡಿದ್ದರೆ ಸಮಸ್ಯೆಯಾಗುತ್ತಿರಲಿಲ್ಲ. ಮಿತಿಮೀರಿದ ವಹಿವಾಟು ಸಾಲ ಮರುಪಾವತಿಗೆ ತೊಂದರೆ ಉಂಟುಮಾಡುತ್ತಿದೆ. ಹೀಗಾಗಿ ನಾಳೆ ಮೈಕ್ರೋ ಫೈನಾನ್ಸ್ ಕಂಪನಿಗಳು ಕೂಡ ನಷ್ಟ ಅನುಭವಿಸುತ್ತವೆ ಎಂದು ಎಚ್ಚರಿಕೆ ನೀಡಿದರು. ಈಗ ಅನಿವಾರ್ಯವಾಗಿ ರಾಜ್ಯಸರ್ಕಾರ ಮಧ್ಯಪ್ರವೇಶಿಸಬೇಕಾಗಿದೆ. ಈಗಿನ ವಾತಾವರಣದಲ್ಲಿ ಗ್ಲೌಸ್ ಹಾಕಿಕೊಂಡು ಮೃದುವಾಗಿ ಪರಿಸ್ಥಿತಿ ನಿಭಾಯಿಸಲು ನಮಗೆ ಗೊತ್ತಾಗುತ್ತಿಲ್ಲ. ದಡಬಡ ಎಂದು ಆಕಡೆ ನಾಲ್ಕು ಬಾರಿ ದೊಣ್ಣೆ ಬೀಸಿದರೆ ಜನ ಸಾಲ ಮರುಪಾವತಿಯನ್ನು ನಿಲ್ಲಿಸುತ್ತಾರೆ. ಆಗ ಮೈಕ್ರೋ ಫೈನಾನ್ಸ್ ವಲಯವೇ ಕುಸಿದುಹೋಗುತ್ತದೆ ಎಂದರು. ಮೈಕ್ರೋ ಫೈನಾನ್ಸ್ ಕಂಪನಿಗಳು ಕುಸಿಯಬಾರದು. ಜನರಿಗೆ ಇವುಗಳ ಅಗತ್ಯವಿದೆ. ಆದರೆ ನಿಯಮ ಮೀರಿ ವ್ಯವಹಾರ ಮಾಡಿ, ತಮಷ್ಟಕ್ಕೆ ತಾವು ಅಪಾಯ ಮಾಡಿಕೊಂಡು ಜನರಿಗೂ ತೊಂದರೆ ಕೊಡುತ್ತಿವೆ. ಇದಕ್ಕೆ ಈ ವಾರವೇ ಕಡಿವಾಣ ಹಾಕಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

# ಆಪ್ ಅಧಿಕಾರಕ್ಕೆ ಬಂದರೆ ಸಿಸೋಡಿಯಾ ಮತ್ತೊಮ್ಮೆ ಡಿಸಿಎಂ

**ನವದೆಹಲಿ,ಜ.27:** ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಆಪ್ ಅದ್ಮಿ ಪಕ್ಷವೂ ಅಧಿಕಾರ ಉಳಿಸಿಕೊಂಡಿರೆ ಮನೀಶ್ ಸಿಸೋಡಿಯಾ ಮತ್ತೆ ಉಪ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಘೋಷಿಸಿದ್ದಾರೆ. ಜಂಗ್ಪುರ ಕ್ಷೇತ್ರದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಅರವಿಂದ್ ಕೇಜ್ರಿವಾಲ್ ಈ ಘೋಷಣೆ ಮಾಡಿದ್ದಾರೆ. ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಿಸೋಡಿಯಾ ಸರ್ಕಾರದಲ್ಲಿ ಉಪಮುಖ್ಯಮಂತ್ರಿಯಾಗುತ್ತಾರೆ ಮತ್ತು ಅವರೊಂದಿಗೆ ನೀವೆಲ್ಲರೂ ಉಪಮುಖ್ಯಮಂತ್ರಿಗಳಾಗುತ್ತೀರಿ ಹೀಗಾಗಿ ನೀವು ಮನೀಶ್ ಸಿಸೋಡಿಯಾ ಅವರನ್ನು ಆಯ್ಕೆ ಮಾಡಬೇಕು ಎಂದು ಮತದಾರರಿಗೆ ಮನವಿ ಮಾಡಿದರು. ಹಾಲಿ ಎಎಪಿ ಸರ್ಕಾರದ ಬಹುಪಾಲು ಅವಧಿಯಲ್ಲಿ ಅರವಿಂದ್ ಕೇಜ್ರಿವಾಲ್ ಅವರ ಉಪನಾಯಕರಾಗಿ ಸೇವೆ ಸಲ್ಲಿಸಿದ ಮನೀಶ್ ಸಿಸೋಡಿಯಾ ಅವರನ್ನು ಮಾರ್ಚ್ 2023 ರಲ್ಲಿ ದೆಹಲಿ ಮದ್ಯದ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿಸಲಾಯಿತು. ನಂತರ ಅವರು ರಾಜೀನಾಮೆ ನೀಡಿದರು. ಸಿಸೋಡಿಯಾ ಪ್ರಸುತ್ತ ಪತ್ಪರ್ಗಂಜ್ನಿಂದ ಶಾಸಕರಾಗಿದ್ದಾರೆ, ಆದರೆ ಈ ವಿಧಾನಸಭಾ ಚುನಾವಣೆಯಲ್ಲಿ ಜಂಗ್ಪುರದಿಂದ ಸ್ಪರ್ಧಿಸುತ್ತಿದ್ದಾರೆ. ಈ ವಿಧಾನಸಭೆಯಲ್ಲಿ ಬಿಜೆಪಿ ಶಾಸಕರು ತಮ್ಮ ಕ್ಷೇತ್ರಗಳ ಅಭಿವೃದ್ಧಿಗೆ ಅಡ್ಡಿಪಡಿಸುತ್ತಿದ್ದಾರೆ, ಕಳೆದ ಬಾರಿ ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಶಾಸಕರು ಗೆದ್ದಿದ್ದರು, ಅವರವರ ಕ್ಷೇತ್ರದಲ್ಲಿ ಯಾವುದೇ ಕಾಮಗಾರಿ ನಡೆಯಲು ಬಿಡಲಿಲ್ಲ, ಎಂಟು ಮಂದಿಯೂ ತಮ್ಮ ವಿಧಾನಸಭೆಯನ್ನು ನರಕವನ್ನಾಗಿಸಿದ್ದಾರೆ ನೀವು ಇಂತಹ ತಪ್ಪು ಮಾಡಬೇಡಿ ಎಂದು ಅರವಿಂದ್ ಕೇಜ್ರಿವಾಲ್ ತಿಳಿಸಿದರು. ಮನೀಶ್ ಸಿಸೋಡಿಯಾ ಅವರ ಕೊಡುಗೆ ಬಗ್ಗೆ ಮಾತನಾಡಿದ ಅರವಿಂದ್ ಕೇಜ್ರಿವಾಲ್, ಮನೀಷ್ ಸಿಸೋಡಿಯಾ ಮತ್ತು ನಾನು ಒಟ್ಟಾಗಿ ನಿಮ್ಮ ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಸರ್ಕಾರಿ ಶಾಲೆಗಳನ್ನು ಅತ್ಯುತ್ತಮವಾಗಿ ಮಾಡಿದ್ದೇವೆ. ಈಗ ತಮ್ಮ ಸರ್ಕಾರ ರಚನೆಯಾದರೆ ಇಲ್ಲಿರುವ ಎಲ್ಲಾ ಸರ್ಕಾರಿ ಶಾಲೆಗಳನ್ನು ಮುಚ್ಚುತ್ತೇವೆ ಎಂದು ಬಿಜೆಪಿ ಹೇಳುತ್ತಿದೆ. ಎಎಪಿ ಸರ್ಕಾರಿ ಶಾಲೆಗಳನ್ನು ನಿರ್ಮಿಸುತ್ತದೆ, ಬಿಜೆಪಿಯನ್ನು 'ಅವುಗಳನ್ನು ಮುಚ್ಚುವ' ನಿರ್ಧಾರ ಮಾಡಿದೆ. ಯಾರನ್ನು ಆಯ್ಕೆ ಮಾಡುವುದು ನಿಮಗೆ ಬಿಟ್ಟದೆ. ಜಂಗ್ಪುರದಲ್ಲಿ ಆಪ್ ಗೆದ್ದರೆ ಇಲ್ಲಿನ ಪ್ರತಿಯೊಬ್ಬ ಸಹೋದರ ಸಹೋದರಿಯರೂ ಉಪ ಮುಖ್ಯಮಂತ್ರಿಯಾಗುತ್ತಾರೆ, ಇಲ್ಲಿನ ಜನರ ಕೆಲಸವನ್ನು ತಡೆಯುವ ಧೈರ್ಯ ಯಾರಿಗೂ ಬರುವುದಿಲ್ಲ ಎಂದರು.

# ರೋಹಿಂಗ್ಯಾ ನಿರಾಶ್ರಿತ ಮಕ್ಕಳು ಶಿಕ್ಷಣ ಪಡೆಯಲು ಅರ್ಹರು: ಸುಪ್ರೀಂ

**ನವದೆಹಲಿ, ಜ. 27:** ಸರ್ಕಾರಿ ಶಾಲೆಗಳಲ್ಲಿ ರೋಹಿಂಗ್ಯಾ ನಿರಾಶ್ರಿತ ಮಕ್ಕಳ ಪ್ರವೇಶದ ವಿಷಯವನ್ನು ಪರಿಗಣಿಸುವ ಅಗತ್ಯವಿದೆ ಎಂದು ಸುಪ್ರೀಂ ಕೋರ್ಟ್ ಸೋಮವಾರ ಹೇಳಿದೆ. ದೆಹಲಿ ಮುನ್ಸಿಪಲ್ ಕಾರ್ಪೊರೇಷನ್ (ಎಂಸಿಡಿ) ಮ್ಯಾನ್ಮಾರ್‌ನ ರೋಹಿಂಗ್ಯಾ ನಿರಾಶ್ರಿತ ಮಕ್ಕಳನ್ನು ಸ್ಥಳೀಯ ಶಾಲೆಗಳಿಗೆ ಸೇರಿಸಿಕೊಳ್ಳುವಂತೆ ನಿರ್ದೇಶಿಸಲು ದೆಹಲಿ ಹೈಕೋರ್ಟ್ ನಿರಾಕರಿಸಿದ್ದರ ವಿರುದ್ಧ ವಿಶೇಷ ರಜೆ ಅರ್ಜಿಯನ್ನು ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಎನ್ಕೆ ಸಿಂಗ್ ಅವರ ಪೀಠ ವಿಚಾರಣೆ ನಡೆಸುತ್ತಿತ್ತು. ಆರಂಭದಲ್ಲಿ, ಅರ್ಜಿದಾರರ ಎನ್‌ಜಿಒ ಪರವಾಗಿ ಹಾಜರಾದ ವಕೀಲ ಅಶೋಕ್ ಅಗರ್ವಾಲ್, ಅರ್ಜಿಯನ್ನು ಸ್ಥಾಪಿಸುವ ಹಿಂದಿನ ಉದ್ದೇಶ ದುರ್ಬಲ ರೋಹಿಂಗ್ಯಾ ನಿರಾಶ್ರಿತ ಮಕ್ಕಳಿಗೆ ಶಿಕ್ಷಣ ನೀಡುವುದಾಗಿದೆ ಎಂದು ಸಲ್ಲಿಸಿದರು.

ಈ ರೋಹಿಂಗ್ಯಾ ಕುಟುಂಬಗಳು ಎಲ್ಲಿವೆ ನೀವು ಅವರನ್ನು ನಿರಾಶ್ರಿತರ ಶಿಬಿರದಿಂದ ಹೊರಗೆ ಕರೆದೊಯ್ಯಲು ಬಯಸುತ್ತೀರಾ ಎಂದು ನ್ಯಾಯಮೂರ್ತಿ ಕಾಂತ್ ನೇತೃತ್ವದ ಪೀಠ ಕೇಳಿತು. ಇದಕ್ಕೆ ಪ್ರತಿಕ್ರಿಯೆಯಾಗಿ, ಈ ಮಕ್ಕಳು ಯಾವುದೇ ಶಿಬಿರದಲ್ಲಿ ಅಲ್ಲ, ತಮ್ಮ ಕುಟುಂಬಗಳೊಂದಿಗೆ ಸಾಮಾನ್ಯವಾಗಿ ವಾಸಿಸುತ್ತಿದ್ದಾರೆ ಎಂದು ಅಗರ್ವಾಲ್ ಹೇಳಿದರು. ಅವರು ಸಾಮಾನ್ಯ ವಸತಿ ಪ್ರದೇಶದಲ್ಲಿ ವಾಸಿಸುತ್ತಿದ್ದರೆ, ನಿಮ್ಮ (ಅರ್ಜಿದಾರರ) ಅಂಶವನ್ನು



ಪರಿಗಣಿಸಬೇಕಾಗುತ್ತದೆ. ಅವರು ಶಿಬಿರದಲ್ಲಿ ಸೀಮಿತವಾಗಿದ್ದರೂ ಸಹ, ನಿಮ್ಮ ಅಂಶವನ್ನು ಪರಿಗಣಿಸಬೇಕಾಗುತ್ತದೆ, ಆದರೆ ಬೇರೆ ರೀತಿಯಲ್ಲಿ ಆಗಿದೆ. ನೀವು ನಿರಾಶ್ರಿತರ ಶಿಬಿರದೊಳಗೆ ಶೈಕ್ಷಣಿಕ ಸೌಲಭ್ಯಗಳನ್ನು ಕೇಳಬೇಕು ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಈ ಸಂದರ್ಭದಲ್ಲಿ, ಅರ್ಜಿದಾರರ ಪರ ವಕೀಲರು, ಶಾಲೆಯಿಂದ ಹೊರಗುಳಿದ ಮತ್ತು ಎಂಸಿಡಿ ಶಾಲೆಗಳಲ್ಲಿ ಪ್ರವೇಶ ನಿರಾಕರಿಸಲ್ಪಟ್ಟ ಕನಿಷ್ಠ 17 ಮಕ್ಕಳ ವಿಳಾಸವನ್ನು ವಿವರಿಸುವ ಅಫಿಡವಿಟ್ ಸಲ್ಲಿಸುವುದಾಗಿ ಹೇಳಿದರು. ವಿಚಾರಣೆಯನ್ನು ಮುಂದೂಡುತ್ತಾ, ಸುಪ್ರೀಂ ಕೋರ್ಟ್ ಅರ್ಜಿದಾರರಿಗೆ ಅಫಿಡವಿಟ್ ಅನ್ನು ದಾಖಲೆಯಲ್ಲಿ ಇರಿಸಲು ಎರಡು ವಾರಗಳ ಕಾಲಾವಕಾಶ ನೀಡಿತು. ಇದಕ್ಕೂ ಮೊದಲು ಅಕ್ಟೋಬರ್ 29 ರಂದು, ದೆಹಲಿ ಹೈಕೋರ್ಟ್ ಅರ್ಜಿದಾರರಾದ ಸಾಮಾಜಿಕ ನ್ಯಾಯಶಾಸ್ತ್ರಜ್ಞ ಎ ಸಿವಿಲ್ ರೈಟ್ಸ್ ಗ್ರೂಪ್, ಒಂದು ಎನ್‌ಜಿಒ, ಸರ್ಕಾರಿ ಅಧಿಕಾರಿಗಳನ್ನು ಸಂಪರ್ಕಿಸಿ ಮತ್ತು ಎತ್ತಿರುವ ಸಮಸ್ಯೆಯ ಪರಿಹಾರಕ್ಕಾಗಿ ಕೇಂದ್ರ ಗೃಹ ಸಚಿವಾಲಯದ ಮುಂದೆ ಪ್ರಾತಿನಿಧ್ಯವನ್ನು ಸಲ್ಲಿಸುವಂತೆ ಕೇಳಿತ್ತು. ಯಾವುದೇ ದೇಶದ ನ್ಯಾಯಾಲಯಗಳು ಯಾರಿಗೆ ಪೌರತ್ವ ನೀಡಬೇಕೆಂದು ನಿರ್ಧರಿಸದಿದ್ದಾಗ, ನ್ಯಾಯಾಂಗ ವೇದಿಕೆಯನ್ನು ಬಳಸಿಕೊಂಡು ನಾಗರಿಕರಲ್ಲದವರಿಗೆ ಶಿಕ್ಷಣದ ಹಕ್ಕನ್ನು ವಿಸ್ತರಿಸಲು ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ (ಪಿಐಎಲ್) ಪರೋಕ್ಷವಾಗಿ ಪ್ರಯತ್ನಿಸಿದೆ ಎಂದು ದೆಹಲಿ ಹೈಕೋರ್ಟ್ ಗಮನಿಸಿತ್ತು. ನೀವು ನೇರವಾಗಿ ಮಾಡಲು ಸಾಧ್ಯವಾಗದ್ದನ್ನು ನೀವು ಪರೋಕ್ಷವಾಗಿ ಮಾಡುತ್ತಿದ್ದೀರಿ. ಮೊದಲು, ಸೂಕ್ತ ಅಧಿಕಾರಿಗಳನ್ನು ಸಂಪರ್ಕಿಸಿ ಎಂದು ಅದು ಅರ್ಜಿದಾರರ ವಕೀಲರಿಗೆ ತಿಳಿಸಿತ್ತು. ಅರ್ಜಿಯನ್ನು ವಿಲೇವಾರಿ ಮಾಡಿದ ದೆಹಲಿ ಹೈಕೋರ್ಟ್, ನಿರ್ಣಾಯಕ ನೀತಿ ವಿಷಯಗಳಿಗೆ ಸಂಬಂಧಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಲ್ಲಿ ಕೋರಿರುವ ಪರಿಹಾರಗಳನ್ನು ಕೇಂದ್ರ ಗೃಹ ಸಚಿವಾಲಯ ಅಥವಾ ವಿದೇಶಾಂಗ ಸಚಿವಾಲಯಕ್ಕೆ ಸಲ್ಲಿಸಬೇಕು ಎಂದು ಹೇಳಿತ್ತು.

ಸುಪ್ರೀಂ ಕೋರ್ಟ್ ಮುಂದೆ, ಭಾರತದ ಭೂಪ್ರದೇಶದೊಳಗೆ ವಾಸಿಸುವ ಎಲ್ಲಾ ನಿರಾಶ್ರಿತ ಮಕ್ಕಳು ಶಿಕ್ಷಣ ಪಡೆಯಲು ಅರ್ಹರು ಎಂದು ಸ್ಪಷ್ಟಪಡಿಸುವ ಆದೇಶವನ್ನು ಹೊರಡಿಸಲು ಕೇಂದ್ರ ಮತ್ತು ದೆಹಲಿ ಸರ್ಕಾರಗಳಿಗೆ ಪ್ರಾತಿನಿಧ್ಯ ನೀಡಿರುವುದಾಗಿ ಅರ್ಜಿದಾರರು ವಾದಿಸಿದರು. ಈ ಪ್ರಾತಿನಿಧ್ಯದ ನಂತರ 28.11.2024ರಂದು ಜ್ಞಾಪನೆಯನ್ನು ಕಳುಹಿಸಲಾಗಿದೆ, ಆದಾಗ್ಯೂ, ಇಲ್ಲಿಯವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಅರ್ಜಿದಾರರು ಹೇಳಿದರು. ಆಧಾರ್ ಕಾರ್ಡ್ ಇಲ್ಲದ ಕಾರಣ ಈ ಮಕ್ಕಳಿಗೆ ಪ್ರವೇಶ ನಿರಾಕರಿಸುವುದು ಭಾರತೀಯ ಸಂವಿಧಾನ ಮತ್ತು ಆರ್‌ಟಿಇ ಕಾಯ್ದೆ, 2009 ರ ಅಡಿಯಲ್ಲಿ ವಿವರಿಸಿರುವ ಶಿಕ್ಷಣದ ಮೂಲಭೂತ ಹಕ್ಕನ್ನು ಉಲ್ಲಂಘಿಸುತ್ತದೆ ಎಂದು ದೆಹಲಿ ಹೈಕೋರ್ಟ್‌ನಲ್ಲಿ ಸಲ್ಲಿಸಲಾದ ಅರ್ಜಿಯಲ್ಲಿ ವಾದಿಸಲಾಗಿತ್ತು.

ಈ ಮಕ್ಕಳು ಭಾರತದಲ್ಲಿಯೇ ಇದ್ದರೂ, ಅವರು ಭಾರತದ ಸಂವಿಧಾನದ 14, 21 ಮತ್ತು 21–ಎ ವಿಧಿಗಳ ಅಡಿಯಲ್ಲಿ ಶಿಕ್ಷಣದ ಹಕ್ಕು, ಜೊತೆಗೆ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ, 2009 ಸೇರಿದಂತೆ ಸಾಂವಿಧಾನಿಕ ರಕ್ಷಣೆಗಳಿಗೆ ಅರ್ಹರಾಗಿದ್ದಾರೆ ಎಂದು ಅರ್ಜಿಯಲ್ಲಿ ತಿಳಿಸಲಾಗಿದೆ. 14 ವರ್ಷದೊಳಗಿನ ಎಲ್ಲಾ ವಿದ್ಯಾರ್ಥಿಗಳು ಸರ್ಕಾರಿ ಅಥವಾ ಎಂಸಿಡಿ ಶಾಲೆಗಳಿಗೆ ಪ್ರವೇಶ ಪಡೆಯುವುದನ್ನು ಖಚಿತಪಡಿಸಿಕೊಳ್ಳುವುದು ಶಿಕ್ಷಣ ನಿರ್ದೇಶನಾಲಯ ಮತ್ತು ಎಂಸಿಡಿ ಜವಾಬ್ದಾರಿಯಾಗಿದೆ ಎಂದು ಅದು ಹೇಳಿದೆ.

## ಮದುವೆಗೆ ಅಸಮ್ಮತಿ ಆತ್ಮಹತ್ಯೆಗೆ ಪ್ರಚೋದನೆಯಲ್ಲ: ಸುಪ್ರೀಂ

ಮದುವೆಗೆ ಅಸಮ್ಮತಿ ವ್ಯಕ್ತಪಡಿಸುವುದು ಭಾರತೀಯ ದಂಡ ಸಂಹಿತೆಯ (ಐಪಿಸಿ) ಸೆಕ್ಷನ್ 306ರ ಅಡಿಯಲ್ಲಿ ಆತ್ಮಹತ್ಯೆಗೆ ಪ್ರಚೋದನೆಯಾಗುವುದಿಲ್ಲ ಎಂದು ಸುಪ್ರೀಂ ಕೋರ್ಟ್ ತನ್ನ ಇತ್ತೀಚಿನ ಆದೇಶದಲ್ಲಿ ತಿಳಿಸಿದೆ. ನ್ಯಾಯಮೂರ್ತಿಗಳಾದ ಬಿ.ವಿ. ನಾಗರತ್ನ ಮತ್ತು ಸತೀಶ್ ಚಂದ್ರ ಶರ್ಮಾ ಅವರ ದ್ವಿಸದಸ್ಯ ಪೀಠವು ಈ ತೀರ್ಪು ನೀಡದೆ. ಮದುವೆಗೆ ಅಸಮ್ಮತಿ

ತನ್ನ ಮಗನನ್ನು ಪ್ರೀತಿಸುತ್ತಿದ್ದ ಯುವತಿಯ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಆರೋಪ ಹೊತ್ತ ಮಹಿಳೆಯ ವಿರುದ್ಧದ ಆರೋಪಪಟ್ಟಿಯನ್ನು ರದ್ದುಗೊಳಿಸುವಾಗ ಪೀಠವು ಈ ಅಭಿಪ್ರಾಯವನ್ನು ವ್ಯಕ್ತಪಡಿಸಿದೆ. ಆರೋಪಪಟ್ಟಿ ಮತ್ತು ಸಾಕ್ಷಿಗಳ ಹೇಳಿಕೆಗಳು ಸೇರಿದಂತೆ ದಾಖಲೆಯಲ್ಲಿರುವ ಎಲ್ಲಾ ಪುರಾವೆಗಳು ಸರಿಯಾಗಿದ್ದರೂ ಸಹ, ಪ್ರಕರಣದಲ್ಲಿ ಮೇಲ್ಮನವಿ ಸಲ್ಲಿಸಿದವರ (ಆರೋಪಿ) ವಿರುದ್ಧ ಯಾವುದೇ ಸಾಕ್ಷ್ಯಾಧಾರಗಳಿಲ್ಲ ಎಂದು ಹೇಳಿದೆ. ಮೇಲ್ಮನವಿ ಸಲ್ಲಿಸಿದವರ ಕೃತ್ಯಗಳು ಐಪಿಸಿಯ ಸೆಕ್ಷನ್ 306 (ಆತ್ಮಹತ್ಯೆಗೆ ಪ್ರಚೋದನೆ) ಅಡಿಯಲ್ಲಿ ಅಪರಾಧವನ್ನು ರೂಪಿಸಲು ಸಾಧ್ಯವಿಲ್ಲ. ಈ ಸಾವು ಪರೋಕ್ಷವಾಗಿದೆ ಎಂದು ನಾವು ಕಂಡುಕೊಂಡಿದ್ದೇವೆ. ಮೃತ ವ್ಯಕ್ತಿಗೆ ಆತ್ಮಹತ್ಯೆಯಂತಹ ದುರದೃಷ್ಟಕರ ಕೃತ್ಯವನ್ನು ಮಾಡುವುದನ್ನು ಬಿಟ್ಟು ಬೇರೆ ದಾರಿಯಿರಲಿಲ್ಲ ಎಂಬುವುದು ಸರಿಯಲ್ಲ ಎಂದು ಪೀಠವು ಹೇಳಿದೆ. ಈ ಆರೋಪಗಳು ಮೃತ ಯುವತಿ ಮತ್ತು ಮೇಲ್ಮನವಿ ಸಲ್ಲಿಸಿದ ವ್ಯಕ್ತಿಯ ಮಗನ ನಡುವಿನ ವಿವಾದಗಳನ್ನು ಆಧರಿಸಿವೆ. ಆದರೆ ಮಹಿಳೆಯು ತನ್ನ ಮಗ ಈ ಯುವತಿಯನ್ನು ಮದುವೆಯಾಗಲು ನಿರಾಕರಿಸಿದ್ದರು. ಮೇಲ್ಮನವಿ ಸಲ್ಲಿಸಿದವರ ಮೇಲೆ ಮದುವೆಯನ್ನು ವಿರೋಧಿಸಿದ ಮತ್ತು ಮೃತರ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನೀಡಿದ ಆರೋಪ ಹೊರಿಸಲಾಗಿತ್ತು. ಮೃತ ಯುವತಿಯು ತಮ್ಮ ಪ್ರಿಯಕರನನ್ನು ಮದುವೆಯಾಗದೆ ಬದುಕಿರಲು ಸಾಧ್ಯವಾಗುವುದಿಲ್ಲ ಎಂಬ ಹೇಳಿಕೆಯು ಸರಿಯಲ್ಲ. ಅಷ್ಟಕ್ಕೆ ಅವರ ಆತ್ಮಹತ್ಯೆಗೆ ಪ್ರಿಯಕರ ತಾಯಿ ಕಾರಣವಲ್ಲ ಎಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದೆ.

### ಏಕರೂಪ ನಾಗರಿಕ ಸಂಹಿತೆ ಜಾರಿಮಾಡಿದ ಉತ್ತರಾಖಂಡ ಸರ್ಕಾರ

# ದೇಶದಲ್ಲಿ ಯುಸಿಸಿ ಜಾರಿ ಮಾಡಿದ ಮೊದಲ ರಾಜ್ಯ

**ಡೆಹ್ರಾಡೋನ್ :** ದೇಶದಲ್ಲಿ ಮೊದಲ ಬಾರಿಗೆ ಉತ್ತರಾಖಂಡ ಸರ್ಕಾರ ಏಕರೂಪ ನಾಗರಿಕ ಸಂಹಿತೆಯನ್ನು ಜಾರಿಗೊಳಿಸಿದೆ. ಮುಖ್ಯ ಸೇವಕ ಸದನ್ನಲ್ಲಿ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಯುಸಿಸಿ ಪೋರ್ಟಲ್ ಉದ್ಘಾಟಿಸಿ ಮತ್ತು ಕೈಪಿಡಿಯನ್ನು ಬಿಡುಗಡೆ ಮಾಡುವ ಮೂಲಕ ಅಧಿಕೃತವಾಗಿ ಜಾರಿಗೊಳಿಸಿದರು.

ಏಕರೂಪ ನಾಗರಿಕ ಸಂಹಿತೆಗಾಗಿ ತಜ್ಞರ ಸಮಿತಿಯನ್ನು 27 ಮೇ 2022 ರಂದು ರಚಿಸಲಾಯಿತು. ಸಮಿತಿಯು ತನ್ನ ವರದಿಯನ್ನು ಫೆಬ್ರವರಿ 2, 2024 ರಂದು ಸರ್ಕಾರಕ್ಕೆ ಸಲ್ಲಿಸಿತ್ತು. ಇದರ ನಂತರ, ಮಸೂದೆಯನ್ನು ಮಾರ್ಚ್ 8, 2024 ರಂದು ವಿಧಾನಸಭೆಯಲ್ಲಿ ಅಂಗೀಕರಿಸಲಾಯಿತು. ವಿಧಾನಸಭೆ ಅಂಗೀಕರಿಸಿದ ಬಳಿಕ ರಾಷ್ಟ್ರಪತಿಗಳ ಅನುಮೋದನೆಗೆ ಕಳುಹಿಸಲಾಗಿತ್ತು. ಇಲ್ಲಿಂದ, ಈ ಕಾಯಿದೆಯು ಮಾರ್ಚ್ 12, 2024 ರಂದು ರಾಷ್ಟ್ರಪತಿಗಳ ಅನುಮೋದನೆಯನ್ನು ಪಡೆಯಿತು.

ಯುಸಿಸಿ ಅನುಷ್ಠಾನಕ್ಕೆ ತಂತ್ರಜ್ಞಾನ ಆಧಾರಿತ ವ್ಯವಸ್ಥೆಗಳನ್ನು ಅಳವಡಿಸಲಾಯಿತು. ನಾಗರಿಕರು ಮತ್ತು ಅಧಿಕಾರಿಗಳಿಗಾಗಿ ಆನ್‌ಲೈನ್ ಪೋರ್ಟಲ್‌ಗಳನ್ನು ಅಭಿವೃದ್ಧಿಪಡಿಸಲಾಗಿದೆ. ಜನವರಿ 20 ರಂದು, ಯುಸಿಸಿ ನಿಯಮಗಳು ಮತ್ತು ನಿಬಂಧನೆಗಳನ್ನು ಅಂತಿಮಗೊಳಿಸಲಾಯಿತು ಮತ್ತು ಕ್ಯಾಬಿನೆಟ್ ಅಂಗೀಕರಿಸಿತು. ಈ ಬಗ್ಗೆ ಮಾತನಾಡಿದ ಮುಖ್ಯ ಕಾರ್ಯದರ್ಶಿ ರಾಧಾ ರಾತೂರಿ, ಸಮಿತಿಯು ಹಲವು ವರ್ಷಗಳ ಪರಿಶ್ರಮದಿಂದ ಯುಸಿಸಿ ಸಿದ್ಧಪಡಿಸಿದೆ. ಇದು ನಮ್ಮ ರಾಜ್ಯಕ್ಕೆ



ಹೆಮ್ಮೆಯ ವಿಷಯ. ಇದು ಸಮಾಜದ ಮೇಲೆ ಸಕಾರಾತ್ಮಕ ಪರಿಣಾಮ ಬೀರುತ್ತದೆ. ನೋಂದಣಿ ಪ್ರಕ್ರಿಯೆಯನ್ನೂ ಸರಳಗೊಳಿಸಲಾಗಿದೆ ಎಂದರು. ನೋಂದಣಿಯನ್ನು ಸುಲಭಗೊಳಿಸಲಾಗಿದೆ ಎಂದು ಯುಸಿಸಿ ಸಮಿತಿ ಅಧ್ಯಕ್ಷ ಶತ್ರುಘ್ನ ಸಿಂಗ್ ತಿಳಿಸಿದ್ದಾರೆ.

**ಯುಸಿಸಿ ಜಾರಿಯಿಂದ ಏನು ಬದಲಾವಣೆ**

* ಎಲ್ಲಾ ಧಾರ್ಮಿಕ ಸಮುದಾಯಗಳಲ್ಲಿ ಮದುವೆ, ವಿಚ್ಛೇದನ, ಜೀವನಾಂಶ ಮತ್ತು ಉತ್ತರಾಧಿಕಾರಕ್ಕೆ ಒಂದೇ ಕಾನೂನು.
* ಮಾರ್ಚ್ 26, 2010 ರ ನಂತರದ ಪ್ರತಿ ದಂಪತಿಗಳು ತಮ್ಮ ವಿಚ್ಛೇದನ ಮತ್ತು ಮದುವೆಯನ್ನು ನೋಂದಾಯಿಸುವುದು ಕಡ್ಡಾಯವಾಗಿರುತ್ತದೆ.
* ಗ್ರಾಮ ಪಂಚಾಯತ್, ನಗರ ಪಂಚಾಯತ್, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆ ಮಟ್ಟದಲ್ಲಿ ನೋಂದಣಿ ಸೌಲಭ್ಯ.
* ನೋಂದಣಿ ಮಾಡದಿದ್ದರೆ ಗರಿಷ್ಠ 25,000 ರೂ. ನೋಂದಣಿ ಮಾಡಿಸಿಕೊಳ್ಳದವರೂ ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗುತ್ತಾರೆ.
* ಹುಡುಗನ ಮದುವೆಗೆ ಕನಿಷ್ಠ ವಯಸ್ಸು 21 ವರ್ಷಗಳು ಮತ್ತು ಹುಡುಗಿಯ ವಯಸ್ಸು 18 ವರ್ಷಗಳು.
* ವಿಚ್ಛೇದನಕ್ಕೆ ಪುರುಷರಂತೆ ಮಹಿಳೆಯರು ಸಹ ಅದೇ ಕಾರಣಗಳು ಮತ್ತು ಹಕ್ಕುಗಳನ್ನು ಬಳಸಬಹುದು.
* ಹಲಾಲಾ ಮತ್ತು ಇದ್ದತ್ ನಂತಹ ಆಚರಣೆಗಳು ಕೊನೆಗೊಳ್ಳುತ್ತವೆ
* ಮಹಿಳೆ ಮರುಮದುವೆಯಾಗಲು ಯಾವುದೇ ರೀತಿಯ ಷರತ್ತುಗಳಿಲ್ಲ
* ಯಾರಾದರೂ ಒಪ್ಪಿಗೆಯಿಲ್ಲದೆ ಧರ್ಮವನ್ನು ಬದಲಾಯಿಸಿದರೆ, ಆ ವ್ಯಕ್ತಿಗೆ ವಿಚ್ಛೇದನ ನೀಡುವ ಮತ್ತು ಜೀವನಾಂಶ ಭತ್ಯೆಯನ್ನು ತೆಗೆದುಕೊಳ್ಳುವ ಹಕ್ಕು ಇನ್ನೊಬ್ಬ ವ್ಯಕ್ತಿಗೆ ಇರುತ್ತದೆ.
* ಗಂಡ ಮತ್ತು ಹೆಂಡತಿ ಜೀವಂತವಾಗಿದ್ದರೆ ಮತ್ತೆ ಮದುವೆಯಾಗುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗುವುದು.
* ಪತಿ ಮತ್ತು ಹೆಂಡತಿಯ ನಡುವೆ ವಿಚ್ಛೇದನ ಅಥವಾ ಕೌಟುಂಬಿಕ ವಿವಾದದ ಸಂದರ್ಭದಲ್ಲಿ, ಐದು ವರ್ಷದವರೆಗಿನ ಮಗುವಿನ ಪಾಲನೆ ತಾಯಿಯ ಬಳಿ ಇರುತ್ತದೆ.
* ಆಸ್ತಿಯಲ್ಲಿ ಮಗ ಮತ್ತು ಮಗಳಿಗೆ ಸಮಾನ ಹಕ್ಕು ಇರುತ್ತದೆ
* ಅಕ್ರಮ ಮಕ್ಕಳನ್ನು ಸಹ ಆ ದಂಪತಿಗಳ ಜೈವಿಕ ಮಕ್ಕಳು ಎಂದು ಪರಿಗಣಿಸಲಾಗುತ್ತದೆ. ಬಾಡಿಗೆ ತಾಯ್ತನದ ನೆರವಿನ ಸಂತಾನೋತ್ಪತ್ತಿ ತಂತ್ರಜ್ಞಾನದ ಮೂಲಕ ಜನಿಸಿದ ದತ್ತು ಮಕ್ಕಳು ಜೈವಿಕ ಮಕ್ಕಳಾಗಿರುತ್ತಾರೆ.
* ಮಹಿಳೆಯ ಗರ್ಭದಲ್ಲಿರುವ ಮಗುವಿನ ಆಸ್ತಿ ಹಕ್ಕುಗಳನ್ನು ರಕ್ಷಿಸಲಾಗುವುದು. ಒಬ್ಬ ವ್ಯಕ್ತಿಯು ತನ್ನ ಆಸ್ತಿಯನ್ನು ಇಚ್ಛೆಯ ಮೂಲಕ ಯಾವುದೇ ವ್ಯಕ್ತಿಗೆ ನೀಡಬಹುದು
* ಲೀವ್–ಇನ್ ಹೌಸ್‌ನಲ್ಲಿ ವಾಸಿಸುವ ಪ್ರತಿಯೊಬ್ಬ ವ್ಯಕ್ತಿಗೆ ವೆಬ್ ಪೋರ್ಟಲ್‌ನಲ್ಲಿ ನೋಂದಣಿ ಕಡ್ಡಾಯವಾಗಿರುತ್ತದೆ.
* ನೋಂದಣಿ ರಶೀದಿಯ ಮೂಲಕ ಮಾತ್ರ ದಂಪತಿಗಳು ಬಾಡಿಗೆಗೆ ಮನೆ, ಹಾಸ್ಟೆಲ್ ಅಥವಾ ಪಿಜಿ ತೆಗೆದುಕೊಳ್ಳಲು ಅವಕಾಶ
* ಲೀವ್–ಇನ್ ಜನಿಸಿದ ಮಕ್ಕಳನ್ನು ಕಾನೂನುಬದ್ಧ ಮಕ್ಕಳು ಎಂದು ಪರಿಗಣಿಸಲಾಗುತ್ತದೆ ಮತ್ತು ಜೈವಿಕ ಮಕ್ಕಳ ಎಲ್ಲಾ ಹಕ್ಕುಗಳನ್ನು ಪಡೆಯುತ್ತಾರೆ.

ಲಿವ್–ಇನ್ ಸಂಬಂಧ ಕಡ್ಡಾಯವಾಗಿ ನೋಂದಣಿ ಮಾಡದಿದ್ದಲ್ಲಿ ಆರು ತಿಂಗಳ ಜೈಲು ಶಿಕ್ಷೆ ಅಥವಾ 25,000 ರೂಪಾಯಿ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿದೆ.



ಪ್ರಯಾಗರಾಜ್‌ನ ಮಹಾ ಕುಂಭಮೇಳದಲ್ಲಿ ಭಾನುವರ ಏಳುವರೆ ಕೋಟಿ ರುದ್ರಾಕ್ಷ ಮಣಿಗಳಿಂದ ರಚಿಸಲಾದ ಹನ್ನೆರಡು ಜ್ಯೋತಿರ್ಲಿಂಗಗಳ ದೃಶ್ಯವನ್ನು ಕಣ್ತುಂಬಿಕೊಂಡ ಜನರು.

## ಕೌಟುಂಬಿಕ ನ್ಯಾಯಾಲಯದಾಚೆ ವಿವಾದ ಇತ್ಯರ್ಥ ಸಾಮರಸ್ಯ ತಾಣ ಆರಂಭಿಸಿದ ಕೇರಳ ಕಾನೂನು ಸೇವಾ ಪ್ರಾಧಿಕಾರ

**ತಿರುವಂತನಪುರಂ, ಜ. 27 :** ಕೌಟುಂಬಿಕ ವ್ಯಾಜ್ಯಗಳನ್ನು ನ್ಯಾಯಾಲಯದ ಹೊರಗೆ ಇತ್ಯರ್ಥಗೊಳಿಸುವುದನ್ನು ಪ್ರೋತ್ಸಾಹಿಸುವುದಕ್ಕಾಗಿ ಕೇರಳ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಸಾಮರಸ್ಯ ತಾಣ ಎಂಬ ವಿಶಿಷ್ಟ ಯೋಜನೆ ಪ್ರಾರಂಭಿಸಿದೆ. ಕೇರಳ ಹೈಕೋರ್ಟ್ ನ್ಯಾಯಮೂರ್ತಿ ಮತ್ತು ಕೆಎಲ್‌ಎಸ್‌ಎ ಕಾರ್ಯನಿರ್ವಾಹಕ ಅಧ್ಯಕ್ಷ ನ್ಯಾಯಮೂರ್ತಿ ಎ ಮುಹಮ್ಮದ್ ಮುಸ್ತಾಕ್ ಅವರು ಯೋಜನೆ ಉದ್ಘಾಟಿಸಿದರು.

ದುಬಾರಿ ಮತ್ತು ಸಮಯ ಹಿಡಿಯುವ ವ್ಯಾಜ್ಯಗಳನ್ನು ತಪ್ಪಿಸುವ ಮೂಲಕ ಹಾಗೂ ಕಕ್ಷಿದಾರರ ನಡುವೆ ಸೌಹಾರ್ದಯುತವಾಗಿ ವ್ಯಾಜ್ಯಗಳನ್ನು ಬಗೆಹರಿಸುವ ಮೂಲಕ ನ್ಯಾಯಾಲಯಗಳ ಮೇಲಿನ ಪ್ರಕರಣದ ಬಾಕಿಯ ಹೊರೆಯನ್ನು ಸಾಮರಸ್ಯ ತಾಣ ತಗ್ಗಿಸುವ ನಿರೀಕ್ಷೆಯಿದೆ.

ಈ ಯೋಜನೆ ಆಪ್ತಸಮಾಲೋಚನೆ, ಮಧ್ಯಸ್ಥಿಕೆ ಸೇವೆ, ಕಾನೂನು ಮಾರ್ಗದರ್ಶನ ಅಥವಾ ಕಾನೂನು ನೆರವು, ಭಾವನಾತ್ಮಕ ಬೆಂಬಲ ಹಾಗೂ ಕ್ಷೇಮ ಕಾರ್ಯಕ್ರಮಗಳನ್ನು ಉಚಿತವಾಗಿ ನೀಡುತ್ತದೆ. ದಾವೆದಾರರು ಯೋಜನೆಯಡಿ ಸೇವೆ ಪಡೆಯಲು ರಾಜ್ಯದ ಹದಿನಾಲ್ಕು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳಲ್ಲಿ ಒಂದನ್ನು ಸಂಪರ್ಕಿಸಬಹುದು.

ವಿವಾಹ ಸಂಬಂಧಗಳಷ್ಟೇ ಅಲ್ಲದೆ, ಸಹಜೀವನದಂತಹ ಮದುವೆಯ ಸ್ವರೂಪದಲ್ಲಿನ ಸಂಬಂಧಗಳು ಸಹ ಸಾಮರಸ್ಯ ತಾಣದ ವ್ಯಾಪ್ತಿಗೆ ಬರುತ್ತವೆ. ಪ್ರಕ್ರಿಯೆಯಲ್ಲಿ ಹಂಚಿಕೊಳ್ಳಲಾಗುವ ಎಲ್ಲಾ ಚರ್ಚೆ, ದಾಖಲೆಗಳು ಮತ್ತು ಮಾಹಿತಿ ಕಟ್ಟುನಿಟ್ಟಾಗಿ ಗೌಪ್ಯವಾಗಿರುತ್ತದೆ. ಒಂದೊಮ್ಮೆ ಜಾರಿಗೊಳಿಸಬೇಕಾದ ನಿಯಮವನ್ನು ರಾಜಿ ಒಪ್ಪಂದ ಹೊಂದಿದ್ದರೆ, ಅಂತಹ ಪ್ರಕರಣವನ್ನು ಲೋಕ್ ಅದಾಲತ್ ಮುಂದೆ ಮಂಡಿಸಬಹುದು. ನಂತರ ಅದು ಒಪ್ಪಂದದ ನಿಯಮಗಳ ಆಧಾರದ ಮೇಲೆ ತೀರ್ಪು ನೀಡಲಿದೆ. ಈ ಪ್ರಕ್ರಿಯೆ ರಾಜಿ ಸಂಧಾನವನ್ನು ಔಪಚಾರಿಕವಾಗಿ ಗುರುತಿಸಲು ಮತ್ತು ಕಾನೂನುಬದ್ಧವಾಗಿ ಹಿಡಿದಿಡಲು ಅನುಮತಿಸುತ್ತದೆ. ಇದು ದೀರ್ಘಾವಧಿಯ ದಾವೆಯ ಅಗತ್ಯವಿಲ್ಲದೆಯೇ ರಾಜಿ ಸಂಧಾನ ಪಾಲನೆ ಖಚಿತಪಡಿಸಿಕೊಳ್ಳಲು ಪಕ್ಷಕಾರರಿಗೆ ತ್ವರಿತ ಮತ್ತು ಹೆಚ್ಚು ದಕ್ಕಬಹುದಾದ ಮಾರ್ಗ ಕಲ್ಪಿಸುತ್ತದೆ.

# ನೀರಿನ ಟ್ಯಾಂಕ್ ಮಲಿನ: ಸಿಬಿಐ ತನಿಖೆಗೆ ಆಗ್ರಹ

**ವೆಂಗೈವಾಯಲ್, ಜ. 27:** ವೆಂಗೈವಾಯಲ್‌ನ ದಲಿತ ನಿವಾಸಿಗಳ ಪ್ರತಿಭಟನೆ ಮುಂದುವರೆದಿದೆ. ಡಿಸೆಂಬರ್ 2022ರ ಘಟನೆಯ ಬಗ್ಗೆ ಸರ್ಕಾರ ಸಿಬಿಐ ತನಿಖೆಗೆ ಆದೇಶಿಸುವವರೆಗೆ ಪ್ರತಿಭಟನೆ ಮುಂದುವರಿಯಲಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಗ್ರಾಮದ ದಲಿತರಿಗೆ ಪೂರೈಸಲಾದ ಓವರ್‌ಹೆಡ್ ನೀರಿನ ಟ್ಯಾಂಕ್‌ನಲ್ಲಿ ಮಲ ಮಿಶ್ರಣವಾಗಿದೆ ಎಂದು ಆರೋಪಿಸಿ ದಲಿತ ಸಮುದಾಯದ ಮೂವರು ವಿಸಿಲ್ ಬ್ಲೋವರ್‌ಗಳ ಮೇಲೆ ಸಿಬಿ–ಸಿಐಡಿ ವರದಿ ಹೊರಿಸಿದ ನಂತರ ದಲಿತರ ಧರಣಿ ಆರಂಭವಾಯಿತು. ವೈಯಕ್ತಿಕ ಉದ್ದೇಶದಿಂದ ಮೂವರು ವ್ಯಕ್ತಿಗಳು ಅಪರಾಧ ಮಾಡಿದ್ದಾರೆ ಎಂದು ಮದ್ರಾಸ್ ಹೈಕೋರ್ಟ್‌ಗೆ ಸಿಬಿ–ಸಿಐಡಿ ಸಲ್ಲಿಸಿದ ವರದಿಯು ದಲಿತ ನಿವಾಸಿಗಳನ್ನು ಅಸಮಾಧಾನಕ್ಕೆ ಕಾರಣವಾಗಿದೆ. ಕೂಡಲೇ ಅವರು ಪ್ರತಿಭಟನೆಗೆ ಮುಂದಾದರು. ಸಿಬಿ–ಸಿಐಡಿ ಪೊಲೀಸರು ಕಳೆದ ಸೋಮವಾರ ನ್ಯಾಯಾಲಯದಲ್ಲಿ ಅಂತಿಮ ತನಿಖಾ ವರದಿಯನ್ನು ಸಲ್ಲಿಸಿದರು. ಅದೇ ಗ್ರಾಮದ ಮೂವರು ಯುವಕರ ಮೇಲೆ ಆರೋಪ ಹೊರಿಸಿದರು. ಗ್ರಾಮದ ನಿವಾಸಿ ಕೆ. ಕಣ್ಣದಾಸನ್ ಮಾತನಾಡಿದ ಅವರು, ನಾವು ಮಾಡದ



ಕೃತ್ಯಕ್ಕೆ ನಮ್ಮನ್ನು ದೂಷಿಸುವ ಮೂಲಕ ಸಿಬಿ–ಸಿಐಡಿ ವರದಿಯು ನಮ್ಮ ಖ್ಯಾತಿಗೆ ಕಳಂಕ ತಂದಿದೆ. ಪ್ರಕರಣವನ್ನು ತ್ವರಿತವಾಗಿ ಮುಗಿಸಲು ನಮ್ಮ ಮೇಲೆ ಸಂಪೂರ್ಣ ಹೊಣೆಯನ್ನು ಹೊರಿಸುವುದು ಅನ್ಯಾಯ ಎಂದು ನಾವು ಭಾವಿಸುತ್ತೇವೆ ಎಂದರು. ಮಾಧ್ಯಮಗಳಲ್ಲಿ ಪ್ರಸಾರವಾಗುವ ಕೆಲವು ಆಡಿಯೊ ತುಣುಕುಗಳನ್ನು ನಾವು ಮಾಡದ ಅಪರಾಧವನ್ನು ಒಪ್ಪಿಕೊಳ್ಳುತ್ತಿದ್ದೇವೆ ಎಂದು ತೋರುವಂತೆ ಮಾಡಲು, ನಮ್ಮನ್ನು ಅಪರಾಧಿಗಳಾಗಿ ಚಿತ್ರಿಸಲು ತಿರುಚಲಾಗಿದೆ. ಇದು ನಾವು ಈಗಾಗಲೇ ಹೊರುವ ಹೊರೆಯನ್ನು ಹೆಚ್ಚಿಸಿದೆ. ತನಿಖೆಯ ಸಮಯದಲ್ಲಿ, ಪೊಲೀಸರು ತಪ್ಪೊಪ್ಪಿಕೊಳ್ಳಲು ಒತ್ತಡ ಹೇರಿದರೂ ಸಹ, ಅವರು ಮಾಡದ ಅಪರಾಧವನ್ನು ಒಪ್ಪಿಕೊಳ್ಳದಂತೆ ನಾವು ಯುವಕರಿಗೆ ನಿರಂತರವಾಗಿ ಸಲಹೆ ನೀಡಿದ್ದೇವೆ. ಈಗಲೂ ಸಹ, ಈ ಅಪರಾಧವನ್ನು ಒಪ್ಪಿಕೊಳ್ಳಲು ಪೊಲೀಸ್ ಬಲವಂತದ ಬಗ್ಗೆ ನಮ್ಮ ಹೇಳಿಕೆಗಳು ಸಾರ್ವಜನಿಕ ವಲಯದಲ್ಲಿ ಲಭ್ಯವಿದೆ ಎಂದರು.

ಗಣರಾಜ್ಯೋತ್ಸವದ ದಿನವಾದ ಭಾನುವಾರ, ಪ್ರತಿಭಟನಾಕಾರರು ತಮ್ಮ ಪ್ರತಿರೋಧವನ್ನು ಗುರುತಿಸಲು ಕಪ್ಪು ಧ್ವಜಗಳನ್ನು ಪ್ರದರ್ಶಿಸುವ ಮೂಲಕ ತಮ್ಮ ಪ್ರತಿಭಟನೆಯನ್ನು ತೀವ್ರಗೊಳಿಸಿದರು. ಬೆಳಗ್ಗೆ 9 ಗಂಟೆಗೆ ಪ್ರಾರಂಭವಾದ ದಿನದ ಪ್ರತಿಭಟನೆ ಸಂಜೆ ಮುಕ್ತಾಯವಾಯಿತು. ಈ ಮಧ್ಯೆ, ಹೊರಗಿನವರ ಆಗಮನವನ್ನು ತಡೆಗಟ್ಟಲು ವೆಂಗೈವಾಯಲ್‌ಗೆ ಹೋಗುವ ಏಳು ಪ್ರವೇಶ ದ್ವಾರಗಳಲ್ಲಿ ಪೊಲೀಸರು ಭದ್ರತೆಯನ್ನು ಹೆಚ್ಚಿಸಿದ್ದಾರೆ.


ಡಿಎಂಕೆಯ ಎರಡು ಪ್ರಮುಖ ಮಿತ್ರಪಕ್ಷಗಳಾದ ಸಿಪಿಎಂ ಮತ್ತು ವಿಸಿಕೆ ಶುಕ್ರವಾರ ವರದಿಯನ್ನು ಟೀಕಿಸಿವೆ. ಪ್ರಕರಣದ ಸಿಬಿಐ ತನಿಖೆಗೆ ಒತ್ತಾಯಿಸುತ್ತಿರುವ ವಿರೋಧ ಪಕ್ಷಗಳೊಂದಿಗೆ ಸೇರಿಕೊಂಡಿವೆ. ಸಿಪಿಎಂ ರಾಜ್ಯ ಕಾರ್ಯದರ್ಶಿ ಪಿ. ಷಣ್ಮುಗಮ್ ಮಾತನಾಡಿದ ಅವರು, ಚಾರ್ಜಶೀಟ್‌ನಲ್ಲಿ ಸಿಬಿ–ಸಿಐಡಿಯ ವಾದವನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದರು. ಪ್ರಕರಣವನ್ನು ಮುಚ್ಚುವ ಒತ್ತಡದಿಂದ ಪೊಲೀಸರು, ಸಂತ್ರಸ್ತ ಜನರು ಸ್ವತಃ ನೀರಿನಲ್ಲಿ ಮಲ ಬೆರೆಸಿದ್ದಾರೆ ಎಂದು ಹೇಳಿದ್ದಾರೆ. ಇದನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ನಿಜವಾದ ಅಪರಾಧಿಗಳನ್ನು ಕಂಡುಹಿಡಿಯಲು ತಮಿಳುನಾಡು ಸರ್ಕಾರ ಪ್ರಕರಣವನ್ನು ಸಿಬಿಐಗೆ ಹಸ್ತಾಂತರಿಸಬೇಕು ಎಂದು ಷಣ್ಮುಗಮ್ ಹೇಳಿದರು.

ವಿಸಿಕೆ ಅಧ್ಯಕ್ಷ ತೋಲ್ ತಿರುಮಾವಲವನ್ ಅವರು ಚಾರ್ಜಶೀಟ್‌ಗೆ ಆಘಾತ ವ್ಯಕ್ತಪಡಿಸಿದರು. ಇದನ್ನು ಒಪ್ಪಿಕೊಳ್ಳಬಾರದು ಎಂದು ಹೈಕೋರ್ಟ್ ಅನ್ನು ಒತ್ತಾಯಿಸಿದರು. ನ್ಯಾಯಾಲಯವು ಸಿಬಿಐ ತನಿಖೆಗೆ ಆದೇಶಿಸಬೇಕು ಎಂದು ಹೇಳಿದರು. ಮದ್ರಾಸ್ ಹೈಕೋರ್ಟ್ ತನಿಖೆಯ ವಿಳಂಬದ ಬಗ್ಗೆ ಪೊಲೀಸರಿಗೆ ಛೀಮಾರಿ ಹಾಕಿದ ನಂತರವೂ ಸಿಬಿ–ಸಿಐಡಿ ಅಪರಾಧಿಗಳನ್ನು ಗುರುತಿಸುವಲ್ಲಿ ಆಲಸ್ಯ ಹೊಂದಿದೆ ಎಂದು ತಿರುಮಾವಲವನ್ ಹೇಳಿದರು. ಈಗ, ಹೈಕೋರ್ಟ್ ಪ್ರಕರಣವನ್ನು ಸಿಬಿಐಗೆ ವಹಿಸದಂತೆ ತಡೆಯಲು, ಆರೋಪಪಟ್ಟಿ ಸಲ್ಲಿಸಲಾಗಿದೆ ಎಂದು ಹೇಳಿದ್ದು, ಪುದುಕ್ಕೋಟ್ಟೈ ಕಲೆಕ್ಟರೇಟ್ ಮುಂದೆ ವಿಸಿಕೆ ಪ್ರತಿಭಟನೆ ನಡೆಸುವ ನಿರೀಕ್ಷೆಯಿದೆ.

# ಹಿಂಸೆಗೆ ತಿರುಗಿದ ಒಳಜಗಳ ಪರಸ್ಪರ ಗುಂಡು ಹಾರಿಸಿಕೊಂಡ ಶಾಸಕರು

**ಶಿಮ್ಲಾ, ಜ. 27:** ಖಾನ್ಪುರದ ಸ್ವತಂತ್ರ ಶಾಸಕ ಉಮೇಶ್ ಕುಮಾರ್ ಮತ್ತು ಲಕ್ಸರ್ ಕುನ್ವಾರ್‌ನ ಬಿಜೆಪಿ ಶಾಸಕ ಪ್ರಣವ್ ಸಿಂಗ್ ಚಾಂಪಿಯನ್ ನಡುವಿನ ದೀರ್ಘಕಾಲದ ಜಗಳ ಭಾನುವಾರ ಹಿಂಸಾತ್ಮಕ ತಿರುವು ಪಡೆದುಕೊಂಡಿದೆ. ಪ್ರಣವ್ ಸಿಂಗ್ ಚಾಂಪಿಯನ್ ಮಾಜಿ ಅಧಿಕಾರಿಯ ಬಳಿಗೆ ಬಂದು ಪಿಸ್ತೂಲಿನಿಂದ ಗುಂಡು ಹಾರಿಸಿ ಕಲ್ಲು ಎಸೆಯಲು ಪ್ರಾರಂಭಿಸಿರುವ ವಿಡಿಯೊ ವೈರಲ್ ಆಗಿದೆ. ಇಡೀ ಘಟನೆಯ ವೀಡಿಯೊ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಶೀಘ್ರದಲ್ಲೇ ವೈರಲ್ ಆಗಿದೆ. ವೀಡಿಯೊದಲ್ಲಿ, ಚಾಂಪಿಯನ್ ಮತ್ತು ಅವರ ಬೆಂಬಲಿಗರು ಕುಮಾರ್ ಅವರ ಕಚೇರಿಯ ಮೇಲೆ ಗಲಾಟೆ ಮಾಡುತ್ತಿರುವುದು ಕಂಡುಬಂದಿದೆ. ಅವರು ಪಿಸ್ತೂಲುಗಳಿಂದ ಹಲವಾರು ಗುಂಡು ಹಾರಿಸುತ್ತಾ ನಿಂದಿಸಿದಿದ್ದಾರೆ. ಕಲ್ಲುಗಳನ್ನು ಎಸೆಯುತ್ತಿರುವುದು ಕಂಡುಬಂದಿದೆ. ಪ್ರತಿಯಾಗಿ, ಕುಮಾರ್ ಮತ್ತು ಅವರ ಬೆಂಬಲಿಗರು ಚಾಂಪಿಯನ್ ಅವರ ಕಚೇರಿಯ ಮೇಲೆ ಗುಂಡು ಹಾರಿಸಿದ್ದಾರೆ.

ಪೊಲೀಸ್ ಅಧಿಕಾರಿಯೊಬ್ಬರ ಪ್ರಕಾರ, ಆರೋಪಿಗಳು ಹಗಲು ಹೊತ್ತಿನಲ್ಲಿ ಕುಮಾರ್ ಅವರ ಕಚೇರಿಯ ಮೇಲೆ ಗುಂಡು ಹಾರಿಸಲು ಪ್ರಾರಂಭಿಸಿದರು. ದೃಶ್ಯಗಳಲ್ಲಿ, ಕಚೇರಿಯ



ಗಾಜಿನ ಕಿಟಕಿಯಲ್ಲಿ ಎರಡು ಗುಂಡುಗಳ ರಂಧ್ರಗಳು ಕಂಡುಬಂದಿವೆ ಮತ್ತು ಗೋಡೆಯ ಮೇಲೆ ಗುಂಡುಗಳ ಗುರುತುಗಳು ಸಹ ಗೋಚರಿಸುತ್ತಿವೆ. ಗುಂಡು ಹಾರಿಸಿದ ಆರೋಪದ ಮೇಲೆ ಪೊಲೀಸರು ಇಬ್ಬರೂ ನಾಯಕರನ್ನು ಬಂಧಿಸಿದ್ದಾರೆ. ದಾಳಿಯ ಬಗ್ಗೆ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡ ಪೊಲೀಸರು, ವಿಡಿಯೋ ವೈರಲ್ ಆದ ನಂತರ ಇಬ್ಬರೂ ನಾಯಕರನ್ನು ಬಂಧಿಸಿದರು. ಕುಮಾರ್ ಅವರ ದಾಳಿಗೆ ಪ್ರತೀಕಾರ ತೀರಿಸಿಕೊಂಡಿದ್ದಾಗಿ ಬಿಜೆಪಿ ನಾಯಕ ಹೇಳಿದ್ದಾರೆ. ತನ್ನ ಮೇಲೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಎಂದು ಆರೋಪಿಸಿದ್ದಾರೆ.

ನಾನು ಪ್ರತಿಕ್ರಿಯಿಸಿದಾಗ, ನನ್ನನ್ನು ಬಂಧಿಸಲಾಯಿತು ಇದು ಅನ್ಯಾಯ. ನಾನು ಅದರ ವಿರುದ್ಧ ಹೋರಾಡುತ್ತೇನೆ ಎಂದು ಚಾಂಪಿಯನ್ ಮಾಧ್ಯಮಗಳಿಗೆ ತಿಳಿಸಿದರು.

ದಾಳಿಯ ಬಗ್ಗೆ ದೂರು ನೀಡಿದಾಗ ಪೊಲೀಸರು ಕ್ರಮ ಕೈಗೊಳ್ಳಲಿಲ್ಲ ಎಂದು ಅವರ ಪತ್ನಿ ದೇವಯಾನಿ ಸಿಂಗ್ ಹೇಳಿದ್ದಾರೆ. ಗೌರವ ಉಳಿಸಲು ತಮ್ಮ ಪತಿಯ ಪ್ರತಿಕ್ರಿಯೆ ಅಗತ್ಯವಾಗಿತ್ತು ಎಂದು ಹೇಳಿದರು. ಹರಿದ್ವಾರ ಎಸ್‌ಎಸ್‌ಪಿ ಪ್ರಮೇಂದ್ರ ಸಿಂಗ್ ದೋವಲ್ ಅವರು ಚಾಂಪಿಯನ್ ಮತ್ತು ಕುಮಾರ್ ಇಬ್ಬರನ್ನೂ ವಶಕ್ಕೆ ಪಡೆದಿದ್ದೇವೆ ಎಂದು ಹೇಳಿದರು. ಇಬ್ಬರು ನಾಯಕರ ನಡುವಿನ ಪೈಪೋಟಿ ಪ್ರಸಿದ್ಧವಾಗಿದೆ. ಅವರು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಆಗಾಗ್ಗೆ ಪರಸ್ಪರ ಜಗಳವಾಡುತ್ತಾರೆ ಎಂದು ದೋವಲ್ ತಿಳಿಸಿದ್ದಾರೆ.

# ಯುಜಿಸಿ ನಿಯಮ ಬದಲಾವಣೆ ಸಂವಿಧಾನದ ಮೇಲೆ ದಾಳಿ: ರೇವಂತ್ ರೆಡ್ಡಿ

**ಹೈದರಾಬಾದ್, ಜ. 27:** ವಿಶ್ವವಿದ್ಯಾಲಯ ಅನುದಾನ ಆಯೋಗದ (ಯುಜಿಸಿ) ನಿಯಮಗಳಲ್ಲಿನ ಬದಲಾವಣೆಗಳು ರಾಜ್ಯಗಳ ಅಧಿಕಾರವನ್ನು ದುರ್ಬಲಗೊಳಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿರುವ ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ, ಕೇಂದ್ರ ಸರ್ಕಾರವನ್ನು ಭಾನುವಾರ ತರಾಟೆಗೆ ತೆಗೆದುಕೊಂಡಿದ್ದಾರೆ. ವಿಶ್ವವಿದ್ಯಾಲಯಗಳ ಮೇಲೆ ಕೇಂದ್ರೀಕೃತ ನಿಯಂತ್ರಣ ಹೊಂದುವ ಕಲ್ಪನೆಯ ಹಿಂದೆ ದೊಡ್ಡ ಪಿತೂರಿ ಇದೆ ಎಂದ ಅವರು, ಯುಜಿಸಿ ನಿಯಮಗಳಲ್ಲಿನ ಬದಲಾವಣೆಗಳನ್ನು ಸಂವಿಧಾನದ ಮೇಲಿನ ದಾಳಿ ಎಂದು ಕರೆದರು.

ಕೇಂದ್ರ ಸರ್ಕಾರ ವಿಶ್ವವಿದ್ಯಾಲಯಗಳ ಮೇಲೆ ಹಿಡಿತ ಸಾಧಿಸಿದರೆ, ಅವು ಕೆಲವು ಜನರಿಗೆ ದುರುದ್ದೇಶಪೂರಿತ ಪ್ರಚಾರದ ವೇದಿಕೆಗಳಾಗುತ್ತವೆ ಎಂದು ಮುಖ್ಯಮಂತ್ರಿ



ಎಚ್ಚರಿಸಿದರು. ತೆಲಂಗಾಣ ಈ ಕ್ರಮವನ್ನು ಬಲವಾಗಿ ವಿರೋಧಿಸುತ್ತದೆ ಮತ್ತು ತನ್ನ ಅಧಿಕಾರವನ್ನು ಬಿಟ್ಟುಕೊಡುವುದಿಲ್ಲ ಎಂದು ಘೋಷಿಸಿದ ಮುಖ್ಯಮಂತ್ರಿ, ಜಂಟಿ ಕಾರ್ಯತಂತ್ರಕ್ಕಾಗಿ ತಮಿಳುನಾಡು, ಆಂಧ್ರಪ್ರದೇಶ ಮತ್ತು ಇತರ ರಾಜ್ಯಗಳ ತಮ್ಮ ಸಹವರ್ತಿಗಳೊಂದಿಗೆ ಈ ವಿಷಯದ ಬಗ್ಗೆ ಚರ್ಚಿಸುವುದಾಗಿ ಹೇಳಿದರು.

ಡಾ.ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಯನ್ನು ಅನಾವರಣಗೊಳಿಸಲು ಅಂಬೇಡ್ಕರ್ ಮುಕ್ತ ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಯುಜಿಸಿ ನಿಯಮಗಳಲ್ಲಿನ ಬದಲಾವಣೆಗಳನ್ನು ಹಿಂತೆಗೆದುಕೊಳ್ಳುವಂತೆ ಮುಖ್ಯಮಂತ್ರಿ ಪ್ರಧಾನಿ ನರೇಂದ್ರ ಮೋದಿಯವರಲ್ಲಿ ಮನವಿ ಮಾಡಿದರು.

ಈ ಪ್ರತಿಗಾಮಿ ನಿರ್ಧಾರವು ಸಹಕಾರಿ ಒಕ್ಕೂಟದ ಅಡಿಪಾಯವನ್ನೇ ಬೆದರಿಸುತ್ತದೆ ಮತ್ತು ಅಂಬೇಡ್ಕರ್ ಅವರ ಆದರ್ಶಗಳಿಗೆ ವಿರುದ್ಧವಾಗಿದೆ. ಈ ಕ್ರಮವನ್ನು ಕೇಂದ್ರ ಸರ್ಕಾರವು ರಾಜ್ಯಗಳ ಮೇಲೆ ನಡೆಸುತ್ತಿರುವ ಸಾಂಸ್ಕೃತಿಕ ದಾಳಿ ಎಂದೂ ಅವರು ಕರೆದಿದ್ದಾರೆ. ಕೇಂದ್ರ ಸರ್ಕಾರದ ಇಂತಹ ಕ್ರಮ ಸೂಕ್ತವಲ್ಲ. ಇದು ಅನಗತ್ಯ ವಿವಾದಗಳಿಗೆ ದಾರಿ ಮಾಡಿಕೊಡುತ್ತದೆ. ಕೇಂದ್ರ ಸರ್ಕಾರವು ರಾಜ್ಯದ ಅಧಿಕಾರವನ್ನು ಕಸಿದುಕೊಳ್ಳುವುದನ್ನು ನಮ್ಮ ಮೇಲಿನ ದಾಳಿ ಎಂದು ನಾವು ಪರಿಗಣಿಸುತ್ತೇವೆ. ನಮ್ಮ ಹಕ್ಕುಗಳನ್ನು ಬಿಟ್ಟುಕೊಡಲು ನಾವು ಸಿದ್ಧರಿಲ್ಲ ಎಂದು ಅವರು ಹೇಳಿದರು. ಕೇಂದ್ರ ಸರ್ಕಾರವು ಯುಜಿಸಿಯಲ್ಲಿನ ಬದಲಾವಣೆಗಳನ್ನು ಹಿಂತೆಗೆದುಕೊಳ್ಳಬೇಕಾಗುತ್ತದೆ ಎಂದು ಹೇಳಿದ ಮುಖ್ಯಮಂತ್ರಿ, ಹಾಗೆ ಮಾಡಲು ವಿಫಲವಾದರೆ, ರಾಜ್ಯವು ಪ್ರತಿಭಟಿಸಲು ಹಿಂಜರಿಯುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಕೇಂದ್ರ ಸರ್ಕಾರವು ಒಂದರ ನಂತರ ಒಂದರಂತೆ ರಾಜ್ಯಗಳ ಅಧಿಕಾರಗಳನ್ನು ಕಸಿದುಕೊಳ್ಳುವುದನ್ನು ಮುಂದುವರಿಸಿದರೆ, ರಾಜ್ಯಗಳು ಕೇವಲ ತೆರಿಗೆ ಸಂಗ್ರಹಿಸುವ ಸಂಸ್ಥೆಗಳಾಗಿ ಕುಸಿಯುತ್ತವೆ ಎಂದು ರೇವಂತ್ ರೆಡ್ಡಿ ಟೀಕಿಸಿದರು. ಸಂವಿಧಾನದ ರಕ್ಷಣೆಯ ಕುರಿತು ದೇಶವು ಮತ್ತೆ ಚರ್ಚೆಗೆ ಸಾಕ್ಷಿಯಾಗುತ್ತಿರುವುದು ದುರದೃಷ್ಟಕರ ಎಂದು ಅವರು ಹೇಳಿದರು.




ಬೆಂಗಳೂರಿನ ಜ್ಞಾನಜ್ಯೋತಿ ಸಭಾಂಗಣದಲ್ಲಿ ನೂತನ ಸಹಾಯಕ ಪ್ರಾಧ್ಯಾಪಕರಿಗೆ ವೃತ್ತಿ ಮಾರ್ಗದರ್ಶನ ಕಾರ್ಯಾಗಾರವನ್ನು ಡಿಸಿಎಂ ಡಿ.ಕೆ. ಶಿವಕುಮಾರ್, ಸಚಿವ ಡಾ.ಎಂ.ಸಿ. ಸುಧಾಕರ್ ಉದ್ಘಾಟಿಸಿದರು.

# ಸರ್ಕಾರ ಯಾರ ವಿರುದ್ಧವೂ ಕ್ರಮ ಕೈಗೊಂಡಿಲ್ಲ : ಎಚ್.ಡಿ.ದೇವೇಗೌಡ ಆಕ್ರೋಶ

**ಬೆಂಗಳೂರು, ಜ. 27 :** ಕಳೆದ ವಿಧಾನಸಭಾ ಚುನಾವಣೆ ಹಾಗೂ ಲೋಕಸಭಾ ಚುನಾವಣೆಯಲ್ಲಿ ಪ್ರಾದೇಶಿಕ ಪಕ್ಷ ಜೆಡಿಎಸ್ ಸಾಲು ಸಾಲು ಸೋಲುಗಳನ್ನು ಕಂಡಿದ್ದು, ಇದೀಗ ಪಕ್ಷ ಸಂಘಟನೆಗಾಗಿ ಮಾರ್ಚ್ ತಿಂಗಳಿಂದ ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳುವುದಾಗಿ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಮಾಜಿ ಪ್ರಧಾನಿಗಳಾದ ಎಚ್.ಡಿ.ದೇವೇಗೌಡ ಅವರು ಹೇಳಿದರು.

ಪಕ್ಷದ ರಾಜ್ಯ ಕಚೇರಿ ಜೆಪಿ ಭವನದಲ್ಲಿ ಮಾಧ್ಯಮಗಳ ಜೊತೆಗೆ ಎಚ್.ಡಿ. ದೇವೇಗೌಡ್ರು ಮಾತನಾಡಿದ ಅವರು, ಪಕ್ಷದ ಸಂಘಟನೆಗೆ ನಾನು ರಾಜ್ಯದ ಉದ್ದಗಲಕ್ಕೂ ಪ್ರವಾಸ ಮಾಡುತ್ತೇನೆ. ಮಾರ್ಚ್ ತಿಂಗಳಿಂದ ಜಿಲ್ಲೆಗಳಿಗೆ ಭೇಟಿ ಕೊಡುತ್ತೇನೆ. ಕಾರ್ಯಕರ್ತರು, ಮುಖಂಡರ ಜತೆಗೂಡಿ ಪಕ್ಷ ಸಂಘಟನೆ ಮಾಡುತ್ತೇನೆ ಎಂಬುದಾಗಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ತಿಳಿಸಿದರು. ಎಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿದ್ದಾರೆ. ಅವರು ದೇಶದ



ಉದ್ದಗಲಕ್ಕೂ ಸಂಚಾರ ಮಾಡಿ ಕೆಲಸ ಮಾಡಬೇಕಿದೆ. ನಾನು, ನಿಖಿಲ್ ಕುಮಾರಸ್ವಾಮಿ ಹಾಗೂ ಪಕ್ಷದ ಎಲ್ಲಾ ಹಿರಿಯ, ಕಿರಿಯ ಮುಖಂಡರೆಲ್ಲ ಸೇರಿ ಕಾರ್ಯಕರ್ತರ ಪಡೆಯೊಂದಿಗೆ ಪಕ್ಷ ಕಟ್ಟುತ್ತೇವೆ ಎಂದು ಎಚ್.ಡಿ. ದೇವೇಗೌಡರು ಅವರು ಹೇಳಿದರು. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ಹಿನ್ನೆಲೆಯಲ್ಲಿ ಪಕ್ಷಕ್ಕೆ ಶಕ್ತಿ ತುಂಬುತ್ತೇವೆ. ಜಿಲ್ಲೆ, ತಾಲ್ಲೂಕು, ಹೋಬಳಿ, ಗ್ರಾಮ ಮಟ್ಟದಲ್ಲಿ ಪಕ್ಷವನ್ನು ಬಲಪಡಿಸುತ್ತೇವೆ. ಬೆಂಗಳೂರು ನಗರದಲ್ಲಿ ಸ್ಥಳೀಯರ ಮುಖಂಡರ ಜತೆಗೂಡಿ ಪಕ್ಷ ಸಂಘಟನೆ ಮಾಡುತ್ತೇವೆ, ಎಂದು ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ. ದೇವೇಗೌಡ್ರು ಹೇಳಿದರು. ಮಹಿಳೆಯರಿಗೆ 2000 ಗೃಹಲಕ್ಷ್ಮಿ ಹಣ ಕೊಟ್ಟು ಸಬಲೀಕರಣ ಮಾಡುತ್ತೇವೆ ಎನ್ನುವ ರಾಜ್ಯ ಸರಕಾರ; ಇನ್ನೊಂದು ಕಡೆ ಅದೇ ಮಹಿಳೆಯರ ಜೀವ ಹರಣ ಮಾಡಲು ಮೈಕ್ರೋ ಫೈನಾನ್ಸ್‌ಗಳಿಗೆ ಧಾರಾಳವಾಗಿ ಅವಕಾಶ ಕೊಟ್ಟಿದೆ ಎಂದು ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಅವರು ಕಿಡಿಕಾರಿದರು.

ಉತ್ತಮ ಆಡಳಿತಕ್ಕೆ ಕರ್ನಾಟಕ ಮಾದರಿ ಆಗಿತ್ತು. ಅದನ್ನು ಸರ್ವನಾಶ ಮಾಡಲು ಇವರು ಹೊರಟಿದ್ದಾರೆ. ಅಧಿಕಾರಕ್ಕಾಗಿ ಕಚ್ಚಾಡುತ್ತಿರುವ ಇವರು ಜನರಿಗೆ ಏನು ಮಾಡಿದ್ದಾರೆ. ಒಂದು ತಿಂಗಳ ಹಿಂದೆಯೇ ಚಾಮರಾಜನಗರದಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ಶುರುವಾಯಿತು. ಜನರು ಊರನ್ನೇ ಬಿಟ್ಟುಹೋದರು. ಇಷ್ಟೆಲ್ಲಾ ಹಾವಳಿಯ ಬಗ್ಗೆ ಮಾಧ್ಯಮಗಳಲ್ಲಿ ವರದಿಗಳು ಬಂದರೂ ಸರ್ಕಾರ ಯಾರ ವಿರುದ್ಧವೂ ಕ್ರಮ ಕೈಗೊಳ್ಳಲಿಲ್ಲ. ಯಾಕೆ ಎಂದು ತೀಕ್ಷ್ಣವಾಗಿ ಪ್ರಶ್ನಿಸಿದರು. ರೈತ ಮಹಿಳೆಯರು ಮತ್ತು ಬಡ ಮಹಿಳೆಯರೇ ಹೆಚ್ಚಾಗಿ ಮೈಕ್ರೋ ಫೈನಾನ್ಸ್‌ಗಳಿಗೆ ಗುರಿಯಾಗುತ್ತಿದ್ದಾರೆ. ಇವರೆಲ್ಲರೂ ತಮ್ಮ ಮನೆ ಊರುಗಳನ್ನು ಬಿಟ್ಟು ಹೋಗುತ್ತಿದ್ದಾರೆ. ಇದಕ್ಕೆ ಯಾರು ಕಾರಣ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಪ್ರಶ್ನಿಸಿದರು. ಮೈಕ್ರೋ ಫೈನಾನ್ಸ್ ಕಂಪನಿಗಳು ರಾಜ್ಯದಲ್ಲಿ ನಾಯಿಕೊಡೆಗಳಂತೆ ತಲೆ ಎತ್ತಿವೆ. ಕಾನೂನುಬಾಹಿರವಾಗಿ ಚಟುವಟಿಕೆಗಳನ್ನು ನಡೆಸುತ್ತಿವೆ.

ಕಾನೂನು ನಿಯಂತ್ರಣ ಇಲ್ಲ, 2018ರಲ್ಲಿ ನಾನು ಕಾಂಗ್ರೆಸ್ ಪಕ್ಷದ ಜತೆ ಸೇರಿ ಸರ್ಕಾರ ಮಾಡಿದ್ದೆ. ಋಣ ಮುಕ್ತ ಕಾಯ್ದೆಯನ್ನು ಜಾರಿಗೆ ತಂದಿದ್ದೆ. ವಿಧಾನಮಂಡಲ ಅಧಿವೇಶನದಲ್ಲಿ ಮಸೂದೆಯೇ ಅಂಗೀಕಾರವಾಗಿದೆ. ರಾಜ್ಯಪಾಲರು ಒಪ್ಪಿಗೆ ಕೊಟ್ಟ ಮೇಲೆ ನಾನೇ ಸ್ವತಃ ದೆಹಲಿಗೆ ಹೋಗಿ ರಾಷ್ಟ್ರಪತಿಗಳ ಅಂಕಿತ ಹಾಕಿಸಿಕೊಂಡು ಬಂದೆ. ನಂತರ ಬಂದ ಸರ್ಕಾರಗಳು ಆ ಕಾಯ್ದೆಯನ್ನು ಏನು ಮಾಡಿದವು ಎಂದು ಬೇಸರ ವ್ಯಕ್ತಪಡಿಸಿದರು.

# ಬಿಜೆಪಿಯಲ್ಲಿ ಯಾರಿಗೂ ಶಾಶ್ವತ ಹುದ್ದೆಯಿಲ್ಲ

**ಬೆಂಗಳೂರು, ಜ, 27:** ಬಿಜೆಪಿಯಲ್ಲಿ ಯಾರಿಗೂ ಶಾಶ್ವತ ಹುದ್ದೆಯಿಲ್ಲ. ಕಾಲ ಕಾಲಕ್ಕೆ ತಕ್ಕಂತೆ ನಾಯಕರು ಬದಲಾಗುತ್ತಾರೆ. ಪಕ್ಷವನ್ನು ಬಲಪಡಿಸುವವರಿಗೆ ವರಿಷ್ಠರು ಮಣೆ ಹಾಕುತ್ತಾರೆ. ಇಂತಹ ಅನೇಕ ಸಂಗತಿಗಳನ್ನು ಬಿಜೆಪಿ ನಾಯಕರು ಬಗೆಹರಿಸಿದ್ದಾರೆ, ಇದನ್ನೂ ಬಗೆಹರಿಸುತ್ತಾರೆ. ನಾವು ಪಕ್ಷದ ಜೊತೆ ಇದ್ದೇವೆ. ಯಾರೇ ಅಧ್ಯಕ್ಷರಾದ್ರೂ ಅವರ ಜೊತೆ ಕೆಲಸ ಮಾಡುತ್ತೇವೆ.

ಸಮಸ್ಯೆಯನ್ನು ಬಗೆಹರಿಸಲು ಪ್ರಯತ್ನಿಸುತ್ತೇವೆ. ಕಾರ್ಯಕರ್ತರ ಭಾವನೆಗಳಿಗೆ ತಕ್ಕಂತೆ ಕೆಲಸ ಮಾಡುತ್ತೇವೆ ಎಂದು ವಿಧಾನ ಪರಿಷತ್ ಸದಸ್ಯರಾದ ಸಿ ಟಿ ರವಿ ಶಾಕಿಂಗ್ ಹೇಳಿಕೆ ನೀಡಿದ್ದಾರೆ. ಈ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಪಕ್ಷದ ಸಂಸದೀಯ ಮಂಡಳಿಯು ರಾಜ್ಯವನ್ನು ಯಾರು ಮುನ್ನಡೆಸಬೇಕು ಎನ್ನುವುದನ್ನು ತೀರ್ಮಾನ ಮಾಡುತ್ತದೆ. ಜಿಲ್ಲೆಯನ್ನು ಯಾರು ಮುನ್ನಡೆಸಬೇಕು ಅಂತ ರಾಜ್ಯ ಕೋರ್ ಕಮಿಟಿ ತೀರ್ಮಾನ ಮಾಡುತ್ತದೆ. ವಿಜಯೇಂದ್ರ ಹಾಗೂ ಯತ್ನಾಳ್ ಇಬ್ಬರೂ ಪಕ್ಷವನ್ನೇ ಬಲಪಡಿಸುವುದು ಅಲ್ವಾ ಪಕ್ಷ ಬಲಪಡಿಸುವ ಕೆಲಸವನ್ನು ಯಾರೇ ಅಧ್ಯಕ್ಷರಾದರೂ ಮಾಡಲೇಬೇಕು

ಯಾರಿಗೆ ಹೈಕಮಾಂಡ್ ಅವಕಾಶ ಕೊಡುತ್ತದೆ ಅಂತ ನೋಡೋಣ. ನಾವಂತೂ ಪಕ್ಷದ ಜತೆಗೆ ಇರುತ್ತೇವೆ ಎಂದು ತಿಳಿಸಿದರು.ಪಕ್ಷ ಯಾರಿಗೆ ಜವಾಬ್ದಾರಿ ಕೊಡುತ್ತದೋ ಅವರ ಜೊತೆ ನಾವು ಕೆಲಸ ಮಾಡುತ್ತೇವೆ. ಇಂತಹ ಪರಿಸ್ಥಿತಿಯನ್ನು ಹಿಂದೆ ನಮ್ಮ ಹಿರಿಯ ನಾಯಕರು ನಿರ್ವಹಿಸಿದ್ದಾರೆ, ಇದನ್ನೂ ನಿರ್ವಹಿಸುವ ಕೆಲಸ ಮಾಡುತ್ತಾರೆ,

ಆ ವಿಶ್ವಾಸ ನಮಗಿದೆ. ನಾವೂ ಕೂಡಾ ನಮ್ಮ ಕೈಲಾದ ಮಟ್ಟಿಗೆ ಸಹಮತ ಮೂಡಿಸುವ ಪ್ರಾಮಾಣಿಕ ಕೆಲಸ ಮಾಡುತ್ತೇವೆ. ನಮ್ಮ ಹೆಚ್ಚಿನ ಕಾರ್ಯಕರ್ತರು ಸಿದ್ಧಾಂತಕ್ಕಾಗಿ ಕೆಲಸ ಮಾಡುತ್ತಾರೆ, ಪಕ್ಷ ಬಲಗೊಳಿಸುವ ಸಂಗತಿಯ ನೇತೃತ್ವ ವಹಿಸಿದರೆ ಕಾರ್ಯಕರ್ತರಿಗೆ ಸಂತೋಷ ಆಗುತ್ತದೆ. ಪಕ್ಷ ಬಲಗೊಳಿಸುವ ಕೆಲಸಕ್ಕೆ ನಾವಿದ್ದೇವೆ, ಕಾರ್ಯಕರ್ತರ ಭಾವನೆಗಳನ್ನು ಅರ್ಥ ಮಾಡಿಕೊಂಡು ನಾವೆಲ್ಲರೂ ಕೆಲಸ ಮಾಡುವ ಅವಶ್ಯಕತೆ ಇದೆ.

## ಇ.ಡಿ ಸೈಟ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳುತ್ತದೆ: ಸಿಟಿ ರವಿ



ಮುಡಾದಲ್ಲಿ ಹಗರಣ ನಡೆದಿರುವುದು ಸ್ಪಷ್ಟ, ಹಗರಣದಲ್ಲಿ ಯಾರ್ಯಾರ ಪಾತ್ರ ಏನು ಎಂಬುದು ಸಮಗ್ರ ತನಿಖೆಯಿಂದ ಹೊರಬರಲಿದೆ ಎಂದು ಬಿಜೆಪಿ ನಾಯಕ, ವಿಧಾನ ಪರಿಷತ್ ಸದಸ್ಯ ಸಿಟಿ ರವಿ ಹೇಳಿದ್ದಾರೆ. ಇಡಿ ಸೈಟ್ಗಳನ್ನು ಮುಟ್ಟುಗೋಲನ್ನು ಹಾಕಿಕೊಳ್ಳುತ್ತದೆ. ಲೋಕಾಯುಕ್ತಕ್ಕೆ ಯಾಕೆ ಇದು ಆಗಲ್ಲ. ಜಿಲ್ಲಾಧಿಕಾರಿಗಳು ಪತ್ರದ ಮೇಲೆ ಪತ್ರ ಬರೆದರು ಕ್ರಮ ಯಾಕೆ ತೆಗೆದುಕೊಳ್ಳಲಿಲ್ಲ. ತಪ್ಪು ಮಾಡಿದವರಿಗೆ ಶಿಕ್ಷೆಯಾಗಲೇಬೇಕು. ಉಪ್ಪು ತಿಂದವರು ನೀರು ಕುಡಿಯಲೇಬೇಕು ಎಂದು ಹೇಳಿದರು.ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ಏನು ವರದಿ ಕೊಟ್ಟಿದೆ ಅಂತ ನನ್ನ ಬಳಿ ಮಾಹಿತಿ ಇಲ್ಲ. ಆದರೆ, ಮುಡಾದಲ್ಲಿ ಅಕ್ರಮ ನಡೆದಿರೋದನ್ನು ಬಹುತೇಕ ಎಲ್ಲರೂ ಒಪ್ಪಿಕೊಂಡಿದ್ದಾರೆ. ಮುಡಾದಿಂದ ಯಾರಿಗೆ ಲಾಭ ಆಯ್ತು ಯಾರು ಅಕ್ರಮದ ಫಲಾನುಭವಿ ಎನ್ನುವುದೂ ಸಾಬೀತಾಗಬೇಕು. ಸಿಎಂ ಪತ್ನಿ ಬದಲಿ ನಿವೇಶನ ಪಡೆದುಕೊಂಡಿರುವುದು ಅಕ್ರಮ ಅಲ್ವಾ ಅಂಗೈ ಹುಣ್ಣಿಗೆ ಕನ್ನಡಿ ಹಿಡಿಯುವ ಅಗತ್ಯ ಇಲ್ಲ. ಅಕ್ರಮ ಮಾಡಿದ ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕು ಎಂದು ಹೇಳಿದರು.ಯಾವುದೋ ಶಕ್ತಿ ಲೋಕಾಯುಕ್ತವನ್ನು ತಡೆಯುತ್ತಿದೆಯಾ ಮುಡಾದಲ್ಲಿ ಹಗರಣ ನಡೆದಿರುವುದು ಸ್ಪಷ್ಟ. ಯಾರ್ಯಾರ ಪಾತ್ರ ಏನೇನು ಅಂತ ಸಾಬೀತಾಗುವುದಷ್ಟೇ ಬಾಕಿ ಇದೆ, ಸಬ್ ರಿಜಿಸ್ಟ್ರಾರ್ ಕಚೇರಿ ಇಡಿ ಪ್ರಾಪರ್ಟಿ ಲಿಸ್ಟ್ ಕಳಿಸಿರುವುದನ್ನು ನಾನು ಸ್ವಾಗತಿಸುತ್ತೇನೆ ಎಂದು ವಿಧಾನ ಪರಿಷತ್ ಸದಸ್ಯ ಸಿ ಟಿ ರವಿ ಹೇಳಿದರು. ಇಡಿಯಿಂದ ಸಿಎಂ ಪತ್ನಿ ಹಾಗೂ ಸಚಿವ ಬೈರತಿ ಸುರೇಶ್ ಗೆ ನೋಟೀಸ್ ವಿಚಾರವಾಗಿ ಮಾತನಾಡಿ, ಕಾನೂನಿನ ದೃಷ್ಟಿಯಲ್ಲಿ ಎಲ್ಲರೂ ಸಮಾನರು, ಆಪಾದನೆ ಬಂದ ಮೇಲೆ ತನಿಖೆಗೆ ಸ್ಪಂದಿಸುವುದು ಅವರ ಕರ್ತವ್ಯ. ಅದನ್ನು ಕೋರ್ಟಿನಲ್ಲಿ ಪ್ರಶ್ನೆ ಮಾಡುವ ಅವಕಾಶವೂ ಅವರಿಗೆ ಇದೆ. ನೋಡೋಣ ಏನಾಗುತ್ತದೆ ಅಂತ, ಆಪಾದನೆಯ ಸತ್ಯಾಸತ್ಯತೆಗಳ ಪರಿಶೀಲನೆ ಆಗಬೇಕಲ್ಲಾ, ಅದಕ್ಕೆ ನೋಟೀಸ್ ಕೊಟ್ಟಿದ್ದಾರೆ. ಕೋರ್ಟಿನಲ್ಲಿ ಏನು ತೀರ್ಮಾನ ಬರುತ್ತದೆ ಅಂತ ನೋಡಬೇಕು ಎಂದು ತಿಳಿಸಿದರು.

# ಅಧಿಕೃತ ಆದೇಶ ಬರುವವರೆಗೂ ನೋಂದಣಿ ಮಾಡಬೇಡಿ: ಇ.ಡಿ

**ಬೆಂಗಳೂರು, ಜ. 27 :** ಜಪ್ತಿ ಮಾಡಿರುವ 142 ಸೈಟ್ ಪಟ್ಟಿಯನ್ನು ಸಬ್ ರಿಜಿಸ್ಟ್ರಾರ್ ಕಚೇರಿಗೆ ಕಳುಹಿಸಿದ ಜಾರಿ ನಿರ್ದೇಶನಾಲಯ, ಅವುಗಳನ್ನು ಮರು ಮಾರಾಟ ಮಾಡಿಕೊಡದಂತೆ ಸೂಚನೆ ನೀಡಿದೆ. ಈ ಸಂಬಂಧ ಮೈಸೂರಿನ 4 ನೋಂದಣಿ ಕಚೇರಿಗೆ ಅಧಿಕೃತ ಮಾಹಿತಿ ಕೊಟ್ಟಿದೆ. ಕೆಲವು ನಿವೇಶನಗಳನ್ನು ವ್ಯಕ್ತಿಗಳು ಈಗಾಗಲೇ ಮಾರಾಟ ಮಾಡಲು ಮುಂದಾಗಿದ್ದರು. ಹೀಗಾಗಿ ಜಾರಿ ನಿರ್ದೇಶನಾಲಯ ಈ ಕ್ರಮ ಕೈಗೊಂಡಿದೆ. ನಮಿಂದ ಅಧಿಕೃತ ಆದೇಶ ಬರುವವರೆಗೂ ನೋಂದಣಿ ಮಾಡಬೇಡಿ, ಬೇರೆಯವರಿಗೆ ಯಾವುದೇ ಆಸ್ತಿ ರಿಜಿಸ್ಟರ್ ಮಾಡಿಕೊಡಬೇಡಿ ಎಂದು ಸೂಚನೆ ನೀಡಿದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿದೆ ಎನ್ನಲಾದ ಹಗರಣಕ್ಕೆ ಸಂಬಂಧಿಸಿದಂತೆ ಇತ್ತೀಚೆಗಷ್ಟೇ 142 ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಂಡಿದ್ದ ಜಾರಿ ನಿರ್ದೇಶನಾಲಯ ಇದೀಗ ಮತ್ತೆ 631 ನಿವೇಶನಗಳನ್ನು ಜಪ್ತಿ ಮಾಡುವ ಸಾಧ್ಯತೆ ಇದೆ. 631 ನಿವೇಶನಗಳ ಬಗ್ಗೆ ಮುಡಾ ಆಯುಕ್ತರು ಜಾರಿ ನಿರ್ದೇಶನಾಲಯಕ್ಕೆ ವಿವರಗಳನ್ನು ಕಳುಹಿಸಿದ್ದಾರೆ.

ತುರ್ತಾಗಿ ವಿವರ ಒದಗಿಸುವಂತೆ ಕೆಲವು ದಿನಗಳ ಹಿಂದೆ ಜಾರಿ ನಿರ್ದೇಶನಾಲಯ ಸೂಚನೆ ನೀಡಿತ್ತು. ಈ 631 ನಿವೇಶನಗಳನ್ನು ಬೇನಾಮಿ ನಿವೇಶನಗಳೇ ಹೆಚ್ಚಿವೆ. ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ಬೇನಾಮಿಗಳೇ ಹೆಚ್ಚಿರುವುದು ಗೊತ್ತಾಗಿದೆ.

ಇವರ ಹೆಸರಿನಲ್ಲಿ ಕೆಲವು ಪ್ರತಿಷ್ಠಿತ ಉದ್ಯಮಿಗಳು ಕೂಡ ಸೈಟ್ ಪಡೆದಿರುವುದು ತಿಳಿದುಬಂದಿದೆ. ಹೀಗಾಗಿ ಈ ವಾರವೇ ಜಾರಿ ನಿರ್ದೇಶನಾಲಯ ಈ ಎಲ್ಲಾ ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಳ್ಳುವ ಸಾಧ್ಯತೆ ಇದೆ. ಮುಡಾದ ಅಂದಾಜು 300 ಕೋಟಿ ರೂಪಾಯಿ ಮೌಲ್ಯದ 142 ಸ್ಥಿರಾಸ್ತಿಯನ್ನು ಜಾರಿ ನಿರ್ದೇಶನಾಲಯ ಎರಡು ವಾರಗಳ ಹಿಂದೆ ಮುಟ್ಟುಗೋಲು ಹಾಕಿಕೊಂಡಿತ್ತು. ನಂತರ ಉಳಿದ ಸೈಟ್ಗಳ ವಿವರ ಶೀಘ್ರ ಕಳುಹಿಸುವಂತೆ ಮುಡಾಗೆ ಸೂಚಿಸಿತ್ತು. ಅದರಂತೆ ಇದೀಗ ಮುಡಾ ಆಯುಕ್ತರು ವಿವರಗಳನ್ನು ಕಳುಹಿಸಿಕೊಟ್ಟಿದ್ದಾರೆ.



ವರದಿಯನ್ನು ಲೋಕಾಯುಕ್ತ ಅಧಿಕಾರಿಗಳು ಕೋರ್ಟ್‌ಗೆ ಸಲ್ಲಿಕೆ ಮಾಡಬೇಕಿದೆ. ಮತ್ತೊಂದೆಡೆ, ಮುಡಾ ಹಗರಣ ಸಂಬಂಧ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ಕೋರಿ ಸಲ್ಲಿಕೆ ಆಗಿರುವ ಅರ್ಜಿಯ ವಿಚಾರಣೆಯೂ ನಡೆಯುತ್ತಿದೆ. ಈ ವಿಚಾರವಾಗಿ ಸೋಮವಾರ ಕರ್ನಾಟಕ ಹೈಕೋರ್ಟ್ ಮಹತ್ವದ ನಿರ್ಧಾರ ಪ್ರಕಟಿಸುವ ಸಾಧ್ಯತೆ ಇದೆ. ಮುಡಾ ಪ್ರಕರಣದಲ್ಲಿ ಅಧಿಕಾರಿಗಳು, ಸಿಬ್ಬಂದಿ ತಪ್ಪೆಸಗಿದ್ದಾರೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾತ್ರ ಇಲ್ಲ ಎಂದು ಲೋಕಾಯುಕ್ತ ವರದಿಯಲ್ಲಿ ಹೇಳಲಾಗಿದೆ. ಇದನ್ನು, ಪ್ರಮುಖ ದೂರುದಾರ ಸ್ನೇಹಮಯಿ ಕೃಷ್ಣ ಪ್ರಶ್ನಿಸಿದ್ದಾರೆ.

ಮುಖ್ಯಮಂತ್ರಿಗಳ ಪ್ರಭಾವ ಇಲ್ಲದೆ ಅಧಿಕಾರಿಗಳು ಆ ರೀತಿಯ ತಪ್ಪೆಸಗಲು ಸಾಧ್ಯವೇ ಇಲ್ಲ ಎಂದು ಅವರು ಹೇಳಿದ್ದರು. ಪ್ರಭಾವಿ ವ್ಯಕ್ತಿಗಳು ಮತ್ತು ರಿಯಲ್ ಎಸ್ಟೇಟ್ ಉದ್ಯಮಿಗಳ ಬೇನಾಮಿಗಳು, ನಕಲಿ ವ್ಯಕ್ತಿಗಳ ಹೆಸರಿನಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಬುಂದು ಬಹಿರಂಗವಾಗಿದೆ. ಆಗಿನ ಮುಡಾ ಅಧ್ಯಕ್ಷರು ಮತ್ತು ಮುಡಾ ಆಯುಕ್ತರಿಗೆ ಸ್ಥಿರ ಆಸ್ತಿ, ಮುಡಾ ನಿವೇಶನಗಳು ನಗದು ಇತ್ಯಾದಿಗಳ ರೂಪದಲ್ಲಿ ಅಕ್ರಮವಾಗಿ ಪಾವತಿಸಿದ ಬಗ್ಗೆ ಆಪಾದಿತ ಪುರಾವೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಹೀಗೆ ಪಡೆದ ಅಕ್ರಮ ಸಂಭಾವನೆಯನ್ನು ಮತ್ತಷ್ಟು ಅಕ್ರಮವಾಗಿ ವರ್ಗಾಯಿಸಲಾಗಿದೆ. ಅದನ್ನು ಕಾನೂನುಬದ್ಧ ಮೂಲಗಳಿಂದ ಪಡೆಯಲಾಗಿದೆ ಎಂದು ತೋರಿಸಲಾಗಿದೆ.

ಮುಡಾದ ಹಿಂದಿನ ಆಯುಕ್ತರಾಗಿದ್ದ ಜಿ.ಟಿ. ದಿನೇಶ್ ಕುಮಾರ್ ಅವರ ಸಂಬಂಧಿಕರ ಹೆಸರಿನಲ್ಲಿ ಆಸ್ತಿ, ಐಷಾರಾಮಿ ವಾಹನಗಳು ಇತ್ಯಾದಿಗಳನ್ನು ಖರೀದಿಸಲು ಸಹಕಾರಿ ಸಂಘದ ಮೂಲಕ ಹಣವನ್ನು ವರ್ಗಾಯಿಸಲಾಗಿದೆ ಎಂದು ಇಡಿ ಹೇಳಿತ್ತು. ಸಿಎಂ ಸಿದ್ದರಾಮಯ್ಯ ಮತ್ತು ಇತರರ ವಿರುದ್ಧ ಲೋಕಾಯುಕ್ತ ಪೊಲೀಸರು 1860 ರ ಐಪಿಸಿಯ ವಿವಿಧ ಸೆಕ್ಷನ್ ಮತ್ತು ಭ್ರಷ್ಟಾಚಾರ ತಡೆ ಕಾಯ್ದೆ, 1988 ರ ಅಡಿಯಲ್ಲಿ ದಾಖಲಿಸಿದ ಎಫ್ಐಆರ್ ಆಧಾರದ ಮೇಲೆ ಇಡಿ ತನಿಖೆ ಆರಂಭಿಸಿದೆ. ಮುಡಾ ಸ್ವಾಧೀನಪಡಿಸಿಕೊಂಡ 3 ಎಕರೆ 16 ಗುಂಟೆ ಭೂಮಿಗೆ ಬದಲಾಗಿ ತಮ ಪತ್ನಿ ಬಿ.ಎಂ. ಪಾರ್ವತಿ ಅವರ ಹೆಸರಿನಲ್ಲಿರುವ 14 ನಿವೇಶನಗಳ ಪರಿಹಾರವನ್ನು ಪಡೆಯಲು ಸಿದ್ದರಾಮಯ್ಯ ತಮ ರಾಜಕೀಯ ಪ್ರಭಾವವನ್ನು ಬಳಸಿದ್ದಾರೆ ಎಂದು ಆರೋಪಿಸಲಾಗಿದೆ.

# ಕೆಆರ್.ಪುರ-ನಾಯಂಡಹಳ್ಳಿ ರಸ್ತೆ ಯೋಜನೆಗೆ ಟೆಂಡರ್: ಸಂಸದ ವಿರೋಧ

**ಬೆಂಗಳೂರು, ಜ. 27 :** ಬೆಂಗಳೂರಿನ ಸಂಚಾರ ದಟ್ಟಣೆಗೆ ಕಡಿವಾಣ ಹಾಕಲು ಸರ್ಕಾರ ಅನೇಕ ಯೋಜನೆ ಕೈಗೊಂಡಿದೆ. ಇದೀಗ ಹೊಸ ಸುರಂಗ ಮಾರ್ಗ ಯೋಜನೆಗೆ ಕೈ ಹಾಕಿದೆ. ಕೆ.ಆರ್. ಪುರಂ-ನಾಯಂಡಹಳ್ಳಿವರೆಗೆ ಬೃಹತ್ ಸುರಂಗ ರಸ್ತೆ ನಿರ್ಮಾಣಕ್ಕೆ ಟೆಂಡರ್ ಆಹ್ವಾನಿಸಿದೆ ಎಂದು ತಿಳಿದು ಬಂದಿದೆ. ಇದಕ್ಕು ಮೊದಲು ಹೆಬ್ಬಾಳ-ಸಿಲ್ಕ್ ಬೋರ್ಡ್ ಜಂಕ್ಷನ್ ವರೆಗೆ ಸುರಂಗ ಕಾರ್ಯಕ್ಕೆ ಕೈ ಹಾಕಿತ್ತು. ಈ ಯೋಜನೆಗೆ ವ್ಯಾಪಕ ವಿರೋಧ ಕೇಳಿ ಬಂದವು.

ಇದೀಗ ಮತ್ತೊಂದು ಸುರಂಗ ಯೋಜನೆಗೆ ಮುಂದಾಗಿದೆ. ಕರ್ನಾಟಕ ರಾಜ್ಯ ಸರ್ಕಾರದ ಕೆ.ಆರ್.ಪುರಂ-ನಾಯಂಡಹಳ್ಳಿವರೆಗೆ ಸುರಂಗ ರಸ್ತೆ ಮಾರ್ಗ ನಿರ್ಮಿಸಲು ಮುಂದಾಗಿದೆ ಎಂದಿರುವ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಅವರು ಖಂಡಿಸಿದ್ದಾರೆ. ಹೆಬ್ಬಾಳ-ಸಿಲ್ಕ್ ಬೋರ್ಡ್ ಸುರಂಗ ರಸ್ತೆಯ ಕಳಪೆ ಡಿಪಿಆರ್



ಮತ್ತು ಕಾರ್ಯಸಾಧ್ಯತಾ ವರದಿಗೆ ಸಾಕಷ್ಟು ಟೀಕೆಗಳು ಕೇಳಿ ಬಂದಿವೆ. ಹೀಗಿದ್ದರೂ ಸರ್ಕಾರ ವಿಚಲಿತವಾಗದೇ ಇದೀಗ ಕೆ.ಆರ್. ಪುರ-ನಾಯಂಡಹಳ್ಳಿಗೆ ಡಿಪಿಆರ್ ತಯಾರಿಸಲು ಸಲಹೆಗಾರರಿಗೆ ಟೆಂಡರ್ ಕರೆದಿದೆ ಎಂದು ತಿಳಿಸಿದರು.

ನಗರದಲ್ಲಿ ಸುರಂಗ ರಸ್ತೆ ಯೋಜನೆಯು ಒಂದು ಕೆಟ್ಟ ನಿರ್ಧಾರ. ಇದು ವಿನ್ಯಾಸದಲ್ಲಿ ಸರಿಯಾಗಿಲ್ಲ. ಸರಿಯಾಗಿ ಯೋಚಿಸದೇ ಈ ನಿರ್ಧಾರಕ್ಕೆ ಬರಲಾಗಿದೆ. ಬೆಂಗಳೂರಿನ ಸಂಚಾರ ಬಿಕ್ಕಟ್ಟನ್ನು ಪರಿಹರಿಸುವ ಉದ್ದೇಶದಿಂದ ಈ ಯೋಜನೆಗೆ ಕೈ ಹಾಕಿದರೂ ಸಹಿತ ಈ ಕಾರ್ಯಸಾಧುವಲ್ಲ ಎಂದು ಅವರು ಆಕ್ಷೇಪಿಸಿದ್ದಾರೆ. ಮೊದಲ ವ್ಯರ್ಥ ವೆಚ್ಚಗಳಿಂದ ಹಿಡಿದು ಮೂಲಭೂತ ದೋಷಗಳು, ಯೋಜನೆಯಲ್ಲಿನ ತಪ್ಪುಗಳು ಹಾಗೂ ಇನ್ನಿತರ ಕಾರಣಗಳಿಂದ ಯೋಜನೆಯನ್ನು ಒಮ್ಮೆಗೇ ರದ್ದುಗೊಳಿಸುವ ಮಾತುಗಳು ಕೇಳಿ ಬಂದಿವೆ. ಯೋಜನೆಗಳಿಗೆ ಸಾಕಷ್ಟು ಹಣ ಖರ್ಚು ಮಾಡುವ ಸರ್ಕಾರ ಇಂತಹ ನಿರ್ಧಾರಗಳಿಗೆ ಹೇಗೆ ಬರುತ್ತದೆ ಎಂದು ಅವರು ಪ್ರಶ್ನಿಸಿದ್ದಾರೆ.

ಕೆಲವು ಯೋಜನೆಗಳಿಗೆ ಹಣ ಖರ್ಚು ಮಾಡಿ ನಂತರ ದಿಢೀರ್ ರದ್ದುಗೊಳಿಸಿದ್ದನ್ನು ನಾವು ನೋಡಿದ್ದೇವೆ. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ಫ್ಲೀಟ್ ಅನ್ನು 15,000 ಬಸ್‌ಗಳಿಗೆ ವಿಸ್ತರಣೆ ಮಾಡುವುದು.

ನಗರದಲ್ಲಿ ಸಾರ್ವಜನಿಕ ಸಾರಿಗೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡುವ ಬೆಂಗಳೂರಿನ ಮಾಸ್ಟರ್ ಪ್ಲಾನ್ 2031ರ ಡಿಪಿಆರ್ ಅನ್ನು ಸರ್ಕಾರ ನಿರ್ಲಕ್ಷಿಸಿತ್ತು. ಇಂತದ್ದೆ ತಪ್ಪುಗಳು, ನಿರ್ಲಕ್ಷ್ಯಗಳಿಂದಲೇ ನಮ್ಮ ಮೆಟ್ರೋ ಹಂತಗಳು 2ಬಿ ಮತ್ತು 3ಎ ಕಾಮಗಾರಿಯಲ್ಲಿ ನಿರ್ಣಾಯಕವಾಗಿರುವ ಸುರಂಗ ರಸ್ತೆ ಜೋಡಿಸುವಲ್ಲಿ ಸರ್ಕಾರ ವಿಫಲವಾಗಿದೆ. ಈಗಾಗಲೇ ಮೆಟ್ರೋ ಸುರಂಗ ಯೋಜನೆಗಳು 61 ತಿಂಗಳ ಗಡುವು ಮೀರಿವೆ. ಕಾಲಮಿತಿಯಲ್ಲಿ ನಿರ್ಮಾಣ ಆಗದ ಹಿನ್ನೆಲೆಯಲ್ಲಿ ಕಾಮಗಾರಿಗೆಂದು ಅಗೆದ ರಸ್ತೆಗಳು ಇಕ್ಕಟ್ಟಾಗಿವೆ. ಸುಗಮ ಸಂಚಾರಕ್ಕೆ ಸಾಕಷ್ಟು ಅಡಚಣೆಗಳು ಆಗುತ್ತಿದೆ ಎಂದು ಸರ್ಕಾರದ ಆಡಳಿತ ವೈಖರಿ ವಿವರಿಸಿದರು.

# ಸಾರ್ವಜನಿಕ ಅನುಕೂಲಕ್ಕೆ ಬಹುಪಯೋಗಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಚಾಲನೆ

**ಬೆಂಗಳೂರು, ಜ. 27 :** ಶಿರೂರ್ ಪಾರ್ಕ್ ರಸ್ತೆಯಲ್ಲಿರುವ ಬಿಬಿಎಂಪಿ ಜಾಗದಲ್ಲಿ ಸಾರ್ವಜನಿಕರ ಉಪಯೋಗಕ್ಕೆ ಬಹುಉಪಯೋಗಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಗುದ್ದಲಿಪೂಜೆ ಕಾರ್ಯಕ್ರಮ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವರಾದ ದಿನೇಶ್ ಗುಂಡೂರಾವ್ ರವರು ಪೂಜೆ ಸಲ್ಲಿಸಿ ಗುದ್ದಲಿಪೂಜೆ ನೇರವೇರಿಸಿದರು.

ಇದೇ ಸಂದರ್ಭದಲ್ಲಿ ಸಚಿವ ದಿನೇಶ್ ಗುಂಡೂರಾವ್ ಗಾಂಧಿನಗರ ವಿಧಾನಸಭಾ ಕ್ಷೇತ್ರದ ಸಾರ್ವಜನಿಕರ ಉಪಯೋಗಕ್ಕೆ ನಾಲ್ಕು ಮಹಡಿ ಕಟ್ಟಡ ನಿರ್ಮಾಣವಾಗಲಿದ್ದು. ಬಿಬಿಎಂಪಿ ಕಂದಾಯ, ಆರೋಗ್ಯ



ಮತ್ತು ಇಂಜನಿಯರ್ ವಿಭಾಗದ ಬೆಸ್ಕಾಂ, ಬೆಂಗಳೂರು ಓನ್, ನಾಡ ಕಚೇರಿ ಒಂದೇ ಸೂರಿನ ಅಡಿಯಲ್ಲಿ ಬರಲಿದೆ. ಅಧಿಕಾರಿಗಳ ಜೊತೆಯಲ್ಲಿ ಸಭೆ ನಡೆಸಲು ಮೀಟಿಂಗ್ ಹಾಲ್ ವಲಯ ಆಯುಕ್ತರು, ಮುಖ್ಯ ಅಭಿಯಂತರರು ಕಚೇರಿಗಳು ಕೆಳಹಂತದ ಅಧಿಕಾರಿಗಳಿಂದ ಮೇಲಧಿಕಾರಿಗಳವರಗೆ ಕಾರ್ಯಾಲಯ ಬರುವುದರಿಂದ ಸಾರ್ವಜನಿಕರು ತಮ್ಮ ಸಮಸ್ಯೆಗಳು ನಿವಾರಣೆ ಹಾಗೂ ಇನ್ನಿತರೆ ಕೆಲಸಗಳಿಗೆ ಒಂದೇ ಜಾಗದಲ್ಲಿ ಕೆಲಸಗಳು ನಡೆಯಲಿದೆ.

ಇದರಿಂದ ಕಚೇರಿಯಿಂದ ಕಛೇರಿಗೆ ಸಾರ್ವಜನಿಕರು ಅಲೆಯುವುದು ತಪ್ಪುತ್ತದೆ ಎಂದು ಹೇಳಿದರು ಗಾಂಧಿನಗರ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಉಮೇಶ್ ಬಾಬು, ಮಾಜಿ ಮಹಾನಗರ ಪಾಲಿಕೆ ಸದಸ್ಯ ನವೀನ್ ಕುಮಾರ್ ರಾಥೋಡ್, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರುಗಳಾದ ಶ್ರೀನಿವಾಸಮೂರ್ತಿ, ಸರವಣನ್, ಬಿಬಿಎಂಪಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಅನಧಿಕೃತ ಜಾಹೀರಾತು ಅಳವಡಿಸಿದರೆ ಎಫ್‌ಐಆರ್; ತುಷಾರ್ ಗಿರಿನಾಥ್ ಸೂಚನೆ

**ಬೆಂಗಳೂರು, ಜ. 27 :** ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತುಗಳನ್ನು ಅಳವಡಿಸಿರುವವರ ಮೇಲೆ ಎಫ್.ಐ.ಆರ್ ದಾಖಲಿಸಲು ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್‌ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಇಂದು ಪಾಲಿಕೆ ಕೇಂದ್ರ ಕಛೇರಿಯಲ್ಲಿ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತುಗಳನ್ನು ತಡೆಯಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಪಾಲಿಕೆಯ ಎಲ್ಲಾ 8 ವಲಯಗಳಲ್ಲಿಯೂ ಅನಧಿಕೃತ ಜಾಹೀರಾತುಗಳನ್ನು ಅಳವಡಿಸಿರುವುದನ್ನು ಗುರುತಿಸಿ ಕೂಡಲೆ ಅದನ್ನು ತೆರವುಗೊಳಿಸಬೇಕು. ಜೊತೆಗೆ ಅನಧಿಕೃತ ಜಾಹೀರಾತು ಅಳವಡಿಸಿರುವವರ ಮೇಲೆ ಎಫ್.ಐ.ಆರ್ ದಾಖಲಿಸಬೇಕೆಂದು ಸೂಚಿಸಲಾಯಿತು.

ಪಾಲಿಕೆ ವ್ಯಾಪ್ತಿಯ 8 ವಲಯಗಳಲ್ಲಿ ಸಮೀಕ್ಷೆಯ ಮೂಲಕ 27655 ಬೀದಿ ಬದಿ ವ್ಯಾಪಾರಿಗಳನ್ನು ಗುರುತಿಸಲಾಗಿದೆ. ಗುರುತಿಸಿರುವ ಬೀದಿ ಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ನೀಡಿ ಅವರಿಗೆ ನಿಗದಿಪಡಿಸಿರುವ ಸ್ಥಳದಲ್ಲೇ ಮಾರಾಟ ಮಾಡಲು ಕ್ರಮವಹಿಸಬೇಕೆಂದು ಸೂಚನೆ ನೀಡಲಾಯಿತು. ನಗರದಲ್ಲಿ ಒಂಟಿ ಮನೆ ಯೋಜನೆಗಳಿಗೆ ಅರ್ಜಿಗಳನ್ನು ಸಲ್ಲಿಸಿರುವ ಪೈಕಿ, ಅರ್ಹ ಫಲಾನುಭವಿಗಳನ್ನು ಕೂಡಲೆ ಗುರುತಿಸಬೇಕು. ಅನಂತರ ಹಂತ-ಹಂತವಾಗಿ ಅನುದಾನ ಬಿಡುಗಡೆಗೊಳಿಸಲು ಅಗತ್ಯ ಕ್ರಮವಹಿಸಬೇಕೆಂದು ಸೂಚನೆ ನೀಡಲಾಯಿತು.



ಈ ವೇಳೆ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್, ಡಾ. ಕೆ ಹರೀಶ್ ಕುಮಾರ್, ಸುರಳ್ಕರ್ ವಿಕಾಸ್ ಕಿಶೋರ್, ಅವಿನಾಶ್ ಮೆನನ್ ರಾಜೇಂದ್ರನ್, ಪ್ರಿತಿ ಗೆಹ್ಲೋಟ್, ವಲಯ ಆಯುಕ್ತ ಸತೀಶ್, ಅರ್ಚನಾ, ಸ್ನೇಹಲ್, ವಿನತ್ ಪ್ರಿಯಾ, ರಮ್ಯಾ, ರಮೇಶ್, ಕರೀಗೌಡ, ಪ್ರಧಾನ ಅಭಿಯಂತರರು, ಮುಖ್ಯ ಅಭಿಯಂತರರು ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಜ್ಯ ಸರ್ಕಾರ ನಮಗೆ ಯಾವುದೇ ಪರಿಹಾರ ಕೊಡುವ ಅಗತ್ಯವಿಲ್ಲ: ಸಂಸದ ಯದುವೀರ್ ಒಡೆಯರ್

**ಬೆಂಗಳೂರು, ಜ. 27 :** ಅರಮನೆ ಮೈದಾನ ಬಳಸಿಕೊಳ್ಳುವ ಸಂಬಂಧ ಸರ್ಕಾರ ಸುಗ್ರೀವಾಜ್ಞೆ ಜಾರಿ ಮಾಡಿರುವ ವಿಚಾರವಾಗಿ ರಾಜ್ಯ ಸರ್ಕಾರ ನಮಗೆ ಯಾವುದೇ ಪರಿಹಾರ ಕೊಡುವ ಅಗತ್ಯವಿಲ್ಲ ಎಂದು ಸುತ್ತೂರಿನಲ್ಲಿ ಬಿಜೆಪಿಯ ಸಂಸದ ಯದುವೀರ್ ಒಡೆಯರ್ ಹೇಳಿಕೆ ನೀಡಿದರು. ಸೋಮವಾರ ಅವರು ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಸುತ್ತೂರಿನಲ್ಲಿ ಯದುವೀರ್ ಒಡೆಯರ್ ಅವರು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪರಿಹಾರ ಕೊಡುವ ಬದಲು ಟಿಡಿಆರ್ ಸರ್ಟಿಫಿಕೇಟ್ ಕೊಟ್ಟರೆ ಸಾಕು. ಸರ್ಕಾರ ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ. ಸುಪ್ರೀಂ ಕೋರ್ಟ್ ಆದೇಶ ಇದ್ದಾಗ ನಮ್ಮ ಮುಂದೆ ಯಾಕೆ ಬರುತ್ತಾರೆ ಸಾರ್ವಜನಿಕ ಹಿತದೃಷ್ಟಿಗಾಗಿ ಅಂದರೆ ನಮ್ಮ ಆಸ್ತಿನೆ ಬೇಕಾ ಎಂದು ಪ್ರಶ್ನಿಸಿದರು. ಈ ಹಿಂದೆ ಸದಾಶಿವನಗರ ಕೂಡ ಬೆಂಗಳೂರು ಅರಮನೆಗೆ ಸೇರಿತ್ತು. ನಾವು ಆಗಲೇ ಸಾಮಾಜಿಕ ನ್ಯಾಯದಲ್ಲಿ ಬಹಳಷ್ಟು ಜಮೀನು ಕೊಟ್ಟಿದ್ದೇವೆ. ಸಾಮಾನ್ಯರಿಗೆ ಏನು ಕಾನೂನು ಇದೆ ನಮಗೂ ಅದೇ ಕಾನೂನು ಅಲ್ವಾ. ಟಿಡಿಆರ್ ಬದಲು ನಗದು ರೂಪದಲ್ಲಿ ಪರಿಹಾರ ಹೇಳಬಹುದಿತ್ತು ಸರ್ಕಾರದ ಖಜಾನೆಗೆ ಧಕ್ಕೆ ಆಗುತ್ತೆ ಅಂತ ಟಿಡಿಆರ್‌ಗೆ ಒಪ್ಪಿದ್ದೇವೆ ಎಂದು ತಿಳಿಸಿದರು.



# ಕೆಪಿಎಸ್‌ಸಿ ಪರೀಕ್ಷೆಗೆ ಹಾಜರಾಗಲು ಹೆಚ್ಚುವರಿ ಬಸ್ ಸೌಲಭ್ಯಕ್ಕೆ ಆಗ್ರಹ

**ಬೆಂಗಳೂರು, ಜ. 27 :** ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಜನವರಿ 31 ಮತ್ತು ಫೆಬ್ರವರಿ 2ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುತ್ತಿದೆ. ಈ ಪರೀಕ್ಷೆಗಳಿಗೆ ಹಾಜರಾಗಲು ಅಭ್ಯರ್ಥಿಗಳು ಪರೀಕ್ಷೆ ಕೇಂದ್ರಕ್ಕೆ ತೆರಳಬೇಕು. ಬೇರೆ ಬೇರೆ ಜಿಲ್ಲೆಗಳಲ್ಲಿ ಪರೀಕ್ಷಾ ಕೇಂದ್ರಗಳು ಇರುವ ಕಾರಣ ಅಭ್ಯರ್ಥಿಗಳ ಅನುಕೂಲಕ್ಕಾಗಿ ಹೆಚ್ಚುವರಿ ಬಸ್ ಸೌಲಭ್ಯ ಕಲ್ಪಿಸಬೇಕು ಎಂದು ಆಗ್ರಹಿಸಲಾಗಿದೆ.

ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಸಮಯದಲ್ಲಿ ಸರ್ಕಾರದ ಸೂಚನೆಯಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಹೆಚ್ಚುವರಿ ಬಸ್ ವ್ಯವಸ್ಥೆ ಮಾಡುತ್ತದೆ. ಈ ಬಾರಿಯೂ ಬಸ್ ವ್ಯವಸ್ಥೆ ಮಾಡಬೇಕು ಎಂದು ಸಾಮಾಜಿಕ ಜಾಲತಾಣದಲ್ಲಿ ಸರ್ಕಾರವನ್ನು ಒತ್ತಾಯಿಸಲಾಗುತ್ತದೆ.

ಜನವರಿ 31ರ ಶುಕ್ರವಾರ ಮತ್ತು ಫೆಬ್ರವರಿ 2ರ ಭಾನುವಾರ ಕೆಪಿಎಸ್ಸಿ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಈ ಪರೀಕ್ಷೆ ಬರೆಯುವ ಅಭ್ಯರ್ಥಿಗಳ ಅನುಕೂಲಕ್ಕಾಗಿ ಹೆಚ್ಚುವರಿ ಬಸ್ ಸೌಲಭ್ಯ ಒದಗಿಸಬೇಕು ಎಂದು ಸಾಮಾಜಿಕ ಜಾಲತಾಣದ ಮೂಲಕ ಮನವಿ ಮಾಡಲಾಗಿದೆ.

**ಯಾವ-ಯಾವ ಪರೀಕ್ಷೆಗಳು ;** ರಮಣ್ದೀಪ್ ಚೌಧರಿ, ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ ಇವರ ಮಾಹಿತಿಯಂತೆ ಆಯೋಗದ ಅಧಿಸೂಚನೆ ದಿನಾಂಕ 13-03-2024 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ 20-09-2024ರನ್ವಯ ಉಳಿಕೆ ಮೂಲ ವೃಂದದಲ್ಲಿ ಅಧಿಸೂಚಿಸಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ-1) ಹುದ್ದೆಗಳಿಗೆ ಇದೇ 31 ರಂದು ಪತ್ರಿಕೆ-2 ನಿರ್ದಿಷ್ಟ ಪತ್ರಿಕೆ ಪರೀಕ್ಷೆಗಳು ನಡೆಯಲಿದೆ. ಫೆ. 2 ರಂದು ಕೈಗಾರಿಕೆ & ವಾಣಿಜ್ಯ ಇಲಾಖೆಯಲ್ಲಿನ ಸಹಾಯಕ ನಿರ್ದೇಶಕರು ಹುದ್ದೆಗಳಿಗೆ ಪತ್ರಿಕೆ-2 ನಿರ್ದಿಷ್ಟ ಪತ್ರಿಕೆಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುತ್ತಿದೆ. ಸದರಿ ಪರೀಕ್ಷೆಗಳ ಪ್ರವೇಶ ಪತ್ರಗಳನ್ನು ದಿನಾಂಕ 24-01-2025ರಿಂದ ಡೌನ್ ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಪ್ರವೇಶ ಪತ್ರಗಳನ್ನು ಆಯೋಗದ ವೆಬ್‌ಸೈಟ್ https://kpsc.kar.nic.in ರ ಮೂಲಕ ಡೌನ್ ಮಾಡಿಕೊಳ್ಳಬಹುದು ಎಂದು ಸೂಚಿಸಲಾಗಿದೆ. ಈ ಪರೀಕ್ಷೆ ಬರೆಯುವ ಅಭ್ಯರ್ಥಿಗಳಿಗೆ ಸಹಾಯಕವಾಗುವಂತೆ ಬಸ್ ಸೌಲಭ್ಯಕ್ಕೆ ಮನವಿ ಸಲ್ಲಿಕೆ ಮಾಡಲಾಗಿದೆ.

# ರಂಭಾಪುರಿಶ್ರೀಗಳ ಫೆಬ್ರುವರಿ ಮಾಹೆಯ ಕಾರ್ಯಕ್ರಮಗಳ ವಿವರ

**ಬಾಳೆಹೊನ್ನೂರು, ಜ. 27 :** ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರ 2025ನೇ ಸಾಲಿನ ಫೆಬ್ರುವರಿ ಮಾಹೆಯ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿರುವುದಾಗಿ ಶ್ರೀ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್.ಬಾಳನಗೌಡ್ರ ತಿಳಿಸಿದ್ದಾರೆ.

ಫೆ 1ರಂದು ವಿಜಯನಗರ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕ ಹಂಪಸಾಗರದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳವರ ಪೀಠಾರೋಹಣದ 34ನೇ ವರ್ಧಂತಿ ಮಹೋತ್ಸವ



ಧರ್ಮ ಸಮಾರಂಭ, 2ರಂದು ಕಲಘಟಗಿ ತಾಲೂಕ ಸುರಶೆಟ್ಟಿಕೊಪ್ಪದಲ್ಲಿ ಶ್ರೀ ಜಗದ್ಗುರು ರೇಣುಕ-ಶ್ರೀ ವೀರಭದ್ರಸ್ವಾಮಿ ಮೂರ್ತಿ ಪ್ರತಿಷ್ಠಾಪನಾ ಸಮಾರಂಭ, 3ರಂದು ವಿಜಯಪುರ ಜಿಲ್ಲೆ ಲೋಣಿ ಗ್ರಾಮದಲ್ಲಿ ಶ್ರೀ ಗುರು ರೇವಣಸಿದ್ಧೇಶ್ವರ ಗೋಪುರ ಕಳಸಾರೋಹಣ ಸಮಾರಂಭ, 5ರಂದು ಮಹಾರಾಷ್ಟ್ರ ರಾಜ್ಯದ ಅಕ್ಕಲಕೋಟ ತಾಲೂಕ ಮೈಸಲಗಿಯಲ್ಲಿ ಧರ್ಮ ಜಾಗೃತಿ ಸಮಾರಂಭ, 6ರಂದು ಅಕ್ಕಲಕೋಟ ತಾಲೂಕ ತಡವಾಳದಲ್ಲಿ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸುವರು. ದಿನಾಂಕ 7ರಂದು ಕಲಬುರಗಿಯಲ್ಲಿ ಶ್ರೀ ಚೌಧಾಪುರಿ ಹಿರೇಮಠದ ನವೀಕೃತ ಕಟ್ಟಡ ಹಾಗೂ ಗದ್ದುಗೆ ಪ್ರತಿಷ್ಠಾಪನಾ ಸಮಾರಂಭ, 8ರಂದು ತಿಪಟೂರು ತಾಲೂಕ ಈಚನೂರಿನಲ್ಲಿ ಶ್ರೀ ವೀರಭದ್ರೇಶ್ವರ ದೇವಸ್ಥಾನ ಉದ್ಘಾಟನಾ ಸಮಾರಂಭ, 10ರಂದು ಬೆಳಿಗ್ಗೆ 10 ಗಂಟೆಗೆ ಭದ್ರಾವತಿ ತಾಲೂಕ ವೈಸನಹಳ್ಳಿಯಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಮೂರ್ತಿ ಪ್ರತಿಷ್ಠಾಪನೆ-ಧರ್ಮ ಸಮಾರಂಭ, ಮಧ್ಯಾಹ್ನ 12.30 ಗಂಟೆಗೆ ಶಿವಮೊಗ್ಗ ಜಿಲ್ಲೆ ಹೊಳೆಹಟ್ಟಿ ಹಳೇ ಗ್ರಾಮದಲ್ಲಿ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸುವರು.

12 ರಂದು ಪೌರ್ಣಿಮೆಯ ನಿಮಿತ್ಯ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ವಾಸ್ತವ್ಯ ಇದ್ದು ಭಕ್ತಾದಿಗಳಿಗೆ ದರ್ಶನಾಶೀರ್ವಾದ ನೀಡುವರು. ದಿನಾಂಕ 15ರಂದು ಹಾವೇರಿ ಜಿಲ್ಲೆ ರಟ್ಟಿಹಳ್ಳಿ ತಾಲೂಕ ತಿಪ್ಪಾಯಿಕೊಪ್ಪದಲ್ಲಿ ಇಷ್ಟಲಿಂಗ ಮಹಾಪೂಜಾ-ಸಮಾರಂಭ, 16ರಂದು ಸಾಗರದಲ್ಲಿ ನೂತನ ಕಟ್ಟಡದ ಉದ್ಘಾಟನಾ ಸಮಾರಂಭ ಹಾಗೂ ಇಷ್ಟಲಿಂಗ ಮಹಾಪೂಜಾ, ಶ್ರೀ ರಂಭಾಪುರಿ ಜಗದ್ಗುರುಗಳವರ ಧಾರ್ಮಿಕ ಕಾರ್ಯಕ್ರಮಗಳ ಲಾಭವನ್ನು ಸಮಸ್ತ ಜನತೆ ಪಡೆದುಕೊಳ್ಳಬೇಕೆಂದು ಅವರು ವಿನಂತಿಸಿದ್ದಾರೆ.

# ಕ್ರೀಡೆ ಶಿಸ್ತು, ಸಮಯಪ್ರಜ್ಞೆ ಕಲಿಸುತ್ತದೆ: ಸಚಿವ ಪ್ರಿಯಾಂಕ್ ಖರ್ಗೆ

**ಕಲಬುರಗಿ, ಜ. 27 :** ಕ್ರೀಡೆ ಕೇವಲ ಮನೋರಂಜನೆಯಲ್ಲ. ಅದು ಜೀವನದಲ್ಲಿ ಶಿಸ್ತು ಮತ್ತು ಸಮಯ ಪ್ರಜ್ಞೆ ಪಾಠ ಬೋಧಿಸುತ್ತದೆ. ನಾಯಕತ್ವದ ಗುಣಲಕ್ಷಣ ಕಲಿಸುತ್ತದೆ. ಆರ್.ಡಿ.ಪಿ.ಆರ್ ಇಲಾಖೆಯ ಎಲ್ಲ ಅಧಿಕಾರಿ-ನೌಕರರು ಒಂದು ಕುಟುಂಬದ ರೀತಿಯಲ್ಲಿ ಸ್ಪಂದನೆ, ಸಮನ್ವಯತೆ, ಸಮಯಪ್ರಜ್ಞೆ, ಪರಿಣಾಮಕಾರಿ ಅನುಷ್ಠಾನ ಹಾಗೂ ಹೊಣೆಗಾರಿಕೆ ಎಂಬ ಪಂಚ ಸೂತ್ರಗಳನ್ನು ಅಳವಡಿಸಿಕೊಂಡು ಗ್ರಾಮಾಭಿವೃದ್ಧಿಗೆ ಮುನ್ನುಡಿ ಬರೆಯಬೇಕು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ನಗರದ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ಮತ್ತು ಆರ್.ಡಿ.ಪಿ.ಆರ್. ಅಧಿಕಾರಿ ಮತ್ತು ನೌಕರರ ಸಂಘಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕ್ರೀಡಾಕೂಟ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ವಿಜೇತರಿಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.



ನಮ್ಮ ಸರಕಾರ ಅಧಿಕಾರಕ್ಕೆ ಬಂದ ಮೇಲೆ ಕೂಸಿನ ಮನೆ, ಸಮುದಾಯ ಶೌಚಾಲಯ, ಅರಿವು ಕೇಂದ್ರಗಳಂತಹ ನೂತನ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ನಮ್ಮ ಸರಕಾರದ ಯಾವುದೇ ಯೋಜನೆಗಳು ಜನರಿಗೆ ತಲುಪಬೇಕೆಂದರೆ ಕ್ರೀಡೆಯಲ್ಲಿ ನೀವು ಒಗ್ಗಟ್ಟಾಗಿ ಭಾಗವಹಿಸಿದಂತೆ ಅದೇ ತೆರವಾಗಿ ನಿಮ್ಮ ಕೆಲಸ ಮಾಡಿದರೆ ಗ್ರಾಮದಲ್ಲಿ ಬದಲಾವಣೆ ಹಾಗೂ ಅಭಿವೃದ್ಧಿ ಕಾಣಲು ಸಾಧ್ಯ. ನೀವು ಜನರಿಗೆ ಸರಿಯಾಗಿ ಸ್ಪಂದಿಸಿ ಅವರಿಗೆ ಕಾಲಮಿತಿಯಲ್ಲಿ ಕೆಲಸ ಮಾಡಿದಲ್ಲಿ ನಿಮ್ಮ ನಾಯಕ ಸಿ.ಇ.ಓ ಭಂವರ್ ಸಿಂಗ್ ಮೀನಾ, ಸಿ.ಇ.ಓ. ಗಳ ನಾಯಕನಾಗಿರುವ ನಾನು ಮತ್ತು ನಮ್ಮೆಲ್ಲರ ಕ್ಯಾಪ್ಟನ್ ಮುಖ್ಯಮಂತ್ರಿ ಅವರು ಖುಷಿಯಾಗಿರುತ್ತೇವೆ ಎಂದರು.

ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಪಂಚಾಯತ್‌ಗಳಿಂದ ತೆರಿಗೆ ಸಂಗ್ರಹ ಮಾಡಲಾಗುತ್ತಿದೆ. ನಿಮ್ಮೆಲ್ಲರ ಪರಿಶ್ರಮದಿಂದಾಗಿ ಇದೂವರೆಗೆ 1,000 ಕೋಟಿ ರೂ. ತೆರಿಗೆ ಸಂಗ್ರಹವಾಗಿದಕ್ಕೆ ಸಿ.ಎಂ. ಸಂತಸ ವ್ಯಕ್ತಪಡಿಸಿದ್ದಾರೆ. ವಿರೋಧ ಪಕ್ಷಗಳು ಸರಕಾರದ ಬಳಿ ಹಣ ಇಲ್ಲ ಎಂದು ಸುಖಾ ಸುಮ್ಮನೆ ಆರೋಪ ಮಾಡುತ್ತಿದ್ದಾರೆ. ಇತ್ತೀಚೆಗೆ 190 ವಿಧಾನಸಭಾ ಕ್ಷೇತ್ರಕ್ಕೆ ಹಳ್ಳಿಗಳ ರಸ್ತೆ, ಸಿ.ಸಿ.ಡ್ರೇನ್ ಕಾಮಗಾರಿಗೆಂದು ಪ್ರತಿ ಕ್ಷೇತ್ರಕ್ಕೆ 10 ಕೋಟಿ ರೂ. ಗಳಂತೆ 1,900 ಕೋಟಿ ರೂ. ಅನುದಾನ ನೀಡಿದ್ದು, 15 ದಿನದಲ್ಲಿ ಕ್ರಿಯಾ ಯೋಜನೆ ಸಿದ್ಧಗೊಳ್ಳಲಿದೆ ಎಂದರು.

ವಿಧಾನ ಪರಿಷತ್ ಶಾಸಕ ತಿಪ್ಪಣ್ಣಪ್ಪ ಕಮಕನೂರ ಮಾತನಾಡಿದ ಅವರು, ಬಡವರು, ದಲಿತರ, ಶೋಷಿತರ ಧ್ವನಿಯಾಗಿ ಪ್ರಿಯಾಂಕ್ ಖರ್ಗೆ ಕಾರ್ಯನಿರ್ವಹಿಸುತ್ತಿದ್ದು, ಚಿತ್ತಾಪುರ ತಾಲೂಕಿನಲ್ಲಿ ಶಾಲೆಯಿಂದ ಡ್ರಾಪ್ ಔಟ್ ಆದ 10 ಸಾವಿರ ಮಕ್ಕಳನ್ನು ಮತ್ತೆ ಶಾಲೆಗೆ ಮರಳಿ ಕರೆತಂದು ಶಿಕ್ಷಣ ನೀಡುವ ಮೂಲಕ ಅವರು ಜೀವನಕ್ಕೆ ಹೊಸ ಭಾಷೆ ಬರೆದಿದ್ದಾರೆ. ಹಿಂದೆ ರಾಮಕೃಷ್ಣ ಹೆಗ್ಡೆ ಅವರ ಕಾಲದಲ್ಲಿ ಅಭಿವೃದ್ಧಿ ಕೆಲಸ ನೋಡಬೇಕಾದರೆ ಮಲ್ಲಿಕಾರ್ಜುನ ಖರ್ಗೆ ಅವರ ಗುರುಮಠಕಲ್ ಕ್ಷೇತ್ರಕ್ಕೆ ನೋಡಿ ಎನ್ನುತ್ತಿದ್ದರು. ಈಗ ಚಿತ್ತಾಪೂರ ಕ್ಷೇತ್ರ ನೋಡುವ ಪರಿಸ್ಥಿತಿ ಇದೆ ಎಂದರು.

ಶಾಸಕ ಅಲ್ಲಮಪ್ರಭು ಪಾಟೀಲ್ ಮಾತನಾಡಿ, ಐ.ಟಿ.-ಬಿ.ಟಿ ಸಚಿವರಾಗಿ ಪ್ರಿಯಾಂಕ್ ಖರ್ಗೆ ಮಹತ್ವದ ಮೈಲಿಗಲ್ಲು ಸಾಧಿಸಿದ್ದಾರೆ. ಆರ್.ಡಿ.ಪಿ.ಆರ್ ಇಲಾಖೆಯಿಂದ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ 80 ಕಿ.ಮೀ ಕಲ್ಯಾಣ ಪಥ ರಸ್ತೆ ನಿರ್ಮಿಸುತ್ತಿದ್ದಾರೆ. ರಾಜಕಾರಣಿಗೆ ಮುಂದಿನ ಚುನಾವಣೆ ಬದಲು ಮುಂದಿನ ಪೀಳಿಗೆಯ ಬಗ್ಗೆ ಚಿಂತನೆ ಇರಬೇಕೆಂಬ ಡಾ.ಬಿ.ಆರ್.ಅಂಬೇಡ್ಕರ್ ಅವರು ಮಾತನ್ನು ಕಾರ್ಯ ರೂಪದಲ್ಲಿ ತರುತ್ತಿರುವ ಪ್ರಿಯಾಂಕ್ ಖರ್ಗೆ ಅವರು ಕ್ರೀಡೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಚಂಪಾ ಕ್ರೀಡಾಂಗಣ ಸಮಗ್ರ ಅಭಿವೃದ್ಧಿಗೆ 30 ಕೋಟಿ ರೂ. ಅನುದಾನ ನೀಡಿದ್ದಾರೆ. ಅಲ್ಲದೆ ಮಹಿಳೆಯರಿಗೆ ಪ್ರತ್ಯೇಕ ಕ್ರೀಡಾ ಸಂಕೀರ್ಣ ಸಹ ನಿರ್ಮಿಸಲಾಗುತ್ತಿದೆ ಎಂದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮಾತನಾಡಿ, ಜಿಲ್ಲಾ ಪಂಚಾಯತ್ ಅಧೀನದಲ್ಲಿ ಬರುವ 29 ಇಲಾಖೆ ಮೂಲಕ ಸರ್ಕಾರದ ಜನಪರ ಯೋಜನೆಗಳನ್ನು ಜನರಿಗೆ ತಲುಪಿಸುತ್ತಿದ್ದು, ಸುಮಾರು ಜಿಲ್ಲೆಯ 30 ಲಕ್ಷ ಜನರಿಗೆ ಸೇವೆ ನೀಡುತ್ತಿದ್ದೇವೆ. ಈ ಒತ್ತಡದ ಬದುಕು ನಿವಾರಿಸುವ ಉದ್ದೇಶದ ಜೊತೆಗೆ ತಂಡ ಕಟ್ಟುವ ಸಾಮರ್ಥ್ಯ, ಸಮನ್ವಯತೆ, ನಾಯಕತ್ವ ಬೆಳೆಸುವ ಉದ್ದೇಶದಿಂದ ಈ ಕ್ರೀಡಾಕೂಟ ಆಯೋಜಿಸಿದೆ ಎಂದರು.

ಆರ್.ಡಿ.ಪಿ.ಅರ್ ಪರಿವಾರದಿಂದ ಅರಿವು ಕೇಂದ್ರಕ್ಕೆ ಸ್ಪರ್ಧಾತ್ಮಕ ಪುಸ್ತಕಗಳನ್ನು ಕೊಡುಗೆಯಾಗಿ ವೇದಿಕೆಯಲ್ಲಿದ್ದ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಗಣ್ಯರಿಗೆ ನೌಕರರು ನೀಡಿದರು. ಕ್ರೀಡಾಕೂಟಕ್ಕೆ ಪ್ರಾಯೋಜಕತ್ವದ ಸಹಕಾರ ನೀಡಿದ ಕಲಬುರಗಿ ನಗರದ ಮಣ್ಣೂರ ಆಸ್ಪತ್ರೆಯ ಡಾ.ಫಾರೂಕ್ ಮಣ್ಣೂರ, ಶ್ರೀ ಸಿಮೆಂಟ್ ಕಂಪನಿಯ ಅಸಿಸ್ಟೆಂಟ್ ಮ್ಯಾನೇಜರ್ ನಾಗರಾಜ ಅವರಿಗೆ ಸನ್ಮಾನಿಸಲಾಯಿತು.

ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಮಹಾನಗರ ಪಾಲಿಕೆ ಮೇಯರ್ ಯಲ್ಲಪ್ಪ ನಾಯ್ಕೋಡಿ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕಾಡಾ ಅಧ್ಯಕ್ಷ ಡಾ.ಎಂ.ಎ.ರಶೀದ, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಡಿ.ಸಿ.ಎಫ್. ಸುಮಿತ್ ಪಾಟೀಲ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತೆ ಸಾಹಿತ್ಯ ಇದ್ದರು. ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗದೇವಪ್ಪ ಅವರು ಸ್ವಾಗತಿಸಿದರು. ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

---

ದರೋಡೆ ಪ್ರಕರಣ ತನಿಖಗೆ ಆಗಮಿಸಿದ್ದ

## ಕಲಬುರಗಿ ಐಜಿಪಿ ದಿಢೀರ್ ಅಸ್ವಸ್ಥ: ಆಸ್ಪತ್ರೆಗೆ ದಾಖಲು



**ಬೀದರ್, ಜ. 27:** ನಗರದ ಎಸ್‌ಬಿಐ ಎಟಿಎಂ ದರೋಡೆ ಮತ್ತು ಶೂಟೌಟ್ ಪ್ರಕರಣದ ವಿಶೇಷ ತನಿಖಾ ತಂಡದ ನೇತೃತ್ವ ವಹಿಸಿರುವ ಕಲಬುರಗಿ ಡಿಐಜಿ ಅಜಯ್ ಹಿಲೋರಿ ದಿಢೀರ್ ಅಸ್ವಸ್ಥರಾಗಿದ್ದು ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.ಹಿಲೋರಿ ನೇತೃತ್ವದಲ್ಲಿ 8 ವಿಶೇಷ ತಂಡ ರಚಿಸಲಾಗಿದೆ. ದುಷ್ಕರ್ಮಿಗಳ ಬಂಧನಕ್ಕಾಗಿ ಒಂದು ವಾರದಿಂದ ವಿವಿಧೆಡೆಗಳಲ್ಲಿ ಹಿಲೋರಿ ಸುತ್ತಾಡುತ್ತಿದ್ದಾರೆ. ಪ್ರಕರಣ ಬೇಧಿಸಲು ಸರ್ಕಾರದ ಒತ್ತಡ ಹೆಚ್ಚಿದೆ.ಕೆಲಸದ ಒತ್ತಡದಿಂದ ತಲೆಸುತ್ತು, ಸುಸ್ತಿನ ಕಾರಣಕ್ಕೆ ಹಿಲೋರಿ ಅವರು ಬುಧವಾರ ರಾತ್ರಿ ನಗರದ ಗುದಗೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಬಂದು ತಪಾಸಣೆಗೆ ಒಳಗಾಗಿದ್ದರು. ಆಸ್ಪತ್ರೆ ಹೃದ್ರೋಗ ತಜ್ಞ ಡಾ.ನಿತಿನ್ ಗುದಗೆ, ಸೀನಿಯರ್ ಫಿಜಿಶಿಯನ್ ಡಾ.ಸಚಿನ್ ಗುದಗೆ ಹಾಗೂ ಹಿರಿಯ ತಜ್ಞವೈದ್ಯ ಡಾ.ಚಂದ್ರಕಾಂತ ಗುದಗೆ ಅವರು ಹೃದಯ ತಪಾಸಣೆ ಮಾಡಿದ್ದಾರೆ. ದಿಢೀರ್ ಅಸ್ವಸ್ಥ ಹಿನ್ನೆಲೆಯಲ್ಲಿ ಹಿಲೋರಿ ಅವರ ಎಂಜಿಯೋಗ್ರಾಫಿ ಸಹ ಮಾಡಿದ್ದು, ಯಾವುದೇ ಸಮಸ್ಯೆ ಇರುವುದು ಕಂಡುಬಂದಿಲ್ಲ. ಕೆಲಸದ ಒತ್ತಡ, ಅತಿಯಾದ ಸುತ್ತಾಟ, ಬಳಲಿಕೆಯಿಂದ ಹೀಗಾಗಿದೆ. ಸದ್ಯ ಆರೋಗ್ಯ ಸುಧಾರಿಸಿದ್ದು, ಸಂಜೆ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಲಿದ್ದಾರೆ.

---

## ಮಾಂಜ್ರಾ ನದಿಯ ಒಡಲು ಬಗೆದು ಅಕ್ರಮ ಮರಳು ದಂಧೆ: ಅಂತರ್ಜಲ ಕುಸಿಯುವ ಆತಂಕ

**ಬೀದರ್, ಜ. 27 :** ರಾಜ್ಯದ ಗಡಿ ಜಿಲ್ಲೆ ಬೀದರ್‌ನಲ್ಲಿ ಎಗ್ಗಿಲ್ಲದೇ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿದೆ. ಅದರಲ್ಲೂ ನದಿ ಪಾತ್ರದಲ್ಲಿ ಈ ದಂಧೆ ಜೋರಾಗಿ ನಡೆಯುತ್ತಿರುವುದರಿಂದ ಜನರಲ್ಲಿ ಅಂತರ್ಜಲ ಕುಸಿಯುವ ಆತಂಕ ಎದುರಾಗಿದೆ. ಜಿಲ್ಲೆಯ ಮಾಂಜ್ರಾ ನದಿಯ ಒಡಲನ್ನು ಬಗೆಯುತ್ತಿರುವ ದಂಧೆಕೋರರು. ಇದರಿಂದಾಗಿ ಅಂತರ್ಜಲ ಕುಸಿಯುವ ಭೀತಿಯಿಂದ ತ್ತರಿಸುವಂತೆ ಮಾಡಿದೆ.

ಹೌದು, ಅಕ್ರಮ ಮರಳು ದಂಧೆಕೋರರು ಮಾಂಜ್ರಾ ನದಿಯ ಒಡಲನ್ನು ಬಗೆಯುತ್ತಿದ್ದಾರೆ. ಭಾಲ್ಕಿ ತಾಲ್ಲೂಕಿನ ವಾಂಜರಖೇಡಾ ಗ್ರಾಮದಲ್ಲಿ ಅಕ್ರಮ ಮರಳು ದಂಧೆ ಜೋರಾಗಿದೆ. ಇದರಿಂದ ಅಂತರ್ಜಲ ಕುಸಿಯುವ ಆತಂಕ ಎದುರಾಗಿದೆ, ಹಾಗಾಗಿ ಗ್ರಾಮಸ್ಥರ ಆಕ್ರೋಶ ಹೊರಹಾಕಿದ್ದಾರೆ.



ಬೇಸಿಗೆಯಲ್ಲಿ ನೀರಿನ ಸಮಸ್ಯೆ : ವಾಂಜರಖೇಡಾ ಗ್ರಾಮದ ಬಳಿಯ ಮಾಂಜ್ರಾ ನದಿಯಲ್ಲಿ 5 ಬೋಟ್‌ಗಳು ಬೀಡುಬಿಟ್ಟಿದ್ದು, ಹಗಲು-ರಾತ್ರಿ ಎನ್ನದೇ ಬೋಟ್‌ಗಳ ಮೂಲಕ ಮರಳು ತೆಗೆಯುತ್ತಿದ್ದಾರೆ. ಬೇಸಿಗೆಯಲ್ಲಿ ಬೆಳೆಗಳಿಗೆ ನೀರುಣಿಸಲು, ಜಾನುವಾರುಗಳಿಗೆ ನೀರು ಕುಡಿಸಲು ಸಮಸ್ಯೆ ಎದುರಾಗಬಹುದು ಎನ್ನುವ ಆತಂಕದಲ್ಲಿ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಕಣ್ಮುಚ್ಚಿ ಕುಳಿತ ಗಣಿ ಇಲಾಖೆ :** ಈ ಬಗ್ಗೆ ಗ್ರಾಮಸ್ಥರು, ಜಿಲ್ಲಾಧಿಕಾರಿಗಳಿಗೆ, ಎಸ್‌ಪಿ, ತಹಸೀಲ್ದಾರ್, ಗಣಿ & ಭೂ ವಿಜ್ಞಾನ ಇಲಾಖೆಗೆ ಮನವಿ ಸಲ್ಲಿಸಿದ್ದಾರೆ, ಆದ್ರೆ ಅಧಿಕಾರಿಗಳು ಡೋಂಟ್‌ಕೇರ್ ಎನ್ನುವಂತಿದ್ದಾರೆ. ಅಕ್ರಮ ಗಣಿಗಾರಿಕೆ ನಡೆಯುತ್ತಿದ್ರೂ ಕುಳಿತ ಗಣಿ & ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಕಣ್ಮುಚ್ಚಿ ಕೂತಿದ್ದಾರೆ. ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಬೇಕು ಎಂದು ಇಡೀ ಗ್ರಾಮಸ್ಥರ ಒತ್ತಾಯಿಸಿದ್ದಾರೆ.

---

## ದೇಶಾದ್ಯಂತ ಮೈಕ್ರೋ ಫೈನಾನ್ಸ್‌ಗಳು ಬಂದ್ ಆಗಲಿ: ಸಂತೋಷ್ ಲಾಡ್



**ಹುಬ್ಬಳ್ಳಿ, ಜ. 27 :** ಮೈಕ್ರೋ ಫೈನಾನ್ಸ್‌ಗಳು ರಾಜ್ಯವಷ್ಟೇ ಅಲ್ಲ, ಇಡೀ ದೇಶದೆಲ್ಲೆಡೆ ಸಮಸ್ಯೆಯಿದೆ. ದೇಶಾದ್ಯಂತ ಮೈಕ್ರೋ ಫೈನಾನ್ಸ್‌ಗಳು ಬಂದ್ ಆಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಲಾಡ್ ಹೇಳಿದರು. ರಾಜ್ಯಾದ್ಯಂತ ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಹುರಾಷ್ಟ್ರೀಯ ಕಂಪನಿಗಳು ಹಾಗೂ ರಾಷ್ಟ್ರೀಯ ಬ್ಯಾಂಕ್‌ಗಳು ಹಣ ಸಂಗ್ರಹಿಸಿ ಸ್ವಸಹಾಯ ಸಂಘಗಳ ಮೂಲಕ ಸಾಲ ನೀಡುತ್ತಾರೆ. ದರಿಂದಾಗಿ ಜನರಿಗೆ ಬಡ್ಡಿ ಹೊರೆ ಜಾಸ್ತಿಯಾಗುತ್ತೆ. ಈ ನಿಟ್ಟಿನಲ್ಲಿ ಮೈಕ್ರೋ ಫೈನಾನ್ಸ್ ಸಾಧಕ-ಬಾಧಕಗಳನ್ನು ನೋಡಬೇಕು. ಸರಕಾರವು ಈ ನಿಟ್ಟಿನಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದರು. ಶ್ರೀರಾಮಲು ಕಾಂಗ್ರೆಸ್ ಬರುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಶ್ರೀರಾಮುಲು ಅವರು ನಮಗೆ ವೈಯಕ್ತಿಕವಾಗಿ ತುಂಬಾ ಹತ್ತಿರದವರು. ಶ್ರೀರಾಮುಲು ಕಾಂಗ್ರೆಸ್‌ಗೆ ಬಂದರೆ ಅವರನ್ನು ವೈಯಕ್ತಿಕವಾಗಿ ಸ್ವಾಗತಿಸುತ್ತೇನೆ. ಅವರು ಕಾಂಗ್ರೆಸ್‌ಗೆ ಬಂದರೆ ಪಕ್ಷಕ್ಕೆ ಒಳ್ಳೆಯದಾಗುತ್ತದೆ ಅನ್ನೋದು ನನ್ನ ವೈಯಕ್ತಿಕ ಅಭಿಪ್ರಾಯ. ಕಾಂಗ್ರೆಸ್ ಬರುವ ವಿಚಾರ ಹೈಕಮಾಂಡ್ ಮಟ್ಟದಲ್ಲಿ ಯಾವ ಚರ್ಚೆಯಾಗಿದೆಯೋ ಗೊತ್ತಿಲ್ಲ. ಆದರೆ ಅವರು ಪಕ್ಷಕ್ಕೆ ಬಂದರೆ ವೈಯಕ್ತಿಕವಾಗಿ ಸ್ವಾಗತಿಸುತ್ತೇನೆಂದು ಅವರು ನುಡಿದರು.

---

ಶ್ರೀ ಸಿಮೆಂಟ್ ಕಾರ್ಖಾನೆ ಅರಣ್ಯಭೂಮಿ ಅಕ್ರಮ ಗಣಿಗಾರಿಕೆ

## ರೈತರಿಗೆ ಪರಿಹಾರ ತಾರತಮ್ಯ: ಹೋರಾಟದ ಎಚ್ಚರಿಕೆ ನೀಡಿದ ತೇಲ್ಕೂರ



**ಕಲಬುರಗಿ, ಜ. 27:** ಜಿಲ್ಲೆಯ ಸೇಡಂ ತಾಲೂಕಿನ ಬೆನಕನಳ್ಳಿ ಕೊಡ್ಲಾ ಬಳಿಯ ಶ್ರೀ ಸಿಮೆಂಟ್ ಕಾರ್ಖಾನೆ ರೈತರಿಗೆ ಪರಿಹಾರ ನೀಡುವಲ್ಲಿನ ತಾರತಮ್ಯ ಹಾಗೂ ಕಾಯ್ದಿಟ್ಟ ಅರಣ್ಯ ಭೂಮಿ ಸ್ವಾಧೀನಪಡಿಸಿಕೊಂಡ ಹಾಗೂ ಹತ್ತು ಸಾವಿರ ರೂ. 30 ವರ್ಷ ಲೀಜ್ ನೀಡಿರುವ ಅಕ್ರಮ ಬಯಲಿಗೆಳೆಯಲು ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸುವಂತೆ ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೇಲ್ಕೂರ ಆಗ್ರಹಿಸಿದರು.

ರೈತರೊಂದಿಗೆ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಲ ರೈತರಿಗೆ ಎಕರೆಗೆ 11.68 ಲಕ್ಷ ರೂ ನೀಡಿದರೆ 400-500 ರೈತರಿಗೆ 3.68. ಲಕ್ಷ ರೂ ಕಡಿಮೆ ನೀಡಿ ಅನ್ಯಾಯ ಎಸಗಿದೆ. ಸೇಡಂ ಸಹಾಯಕ ಆಯುಕ್ತರ ನೇತೃತ್ವದಲ್ಲಿ ಕಳೆದ 2023 ಸೆಪ್ಟೆಂಬರ್ ದಲ್ಲಿ ಸಭೆಯಲ್ಲಿ ರೈತರಿಗೆ ಉಳಿದ ಪರಿಹಾರ ನೀಡುವ ಹಾಗೂ ಕಾರ್ಖಾನೆಯಿಂದ ಸುತ್ತಮುತ್ತ ಹಾಳಾಗಿರುವ ಬೆಳೆಗೆ ಪರಿಹಾರ ನೀಡುವ ಕುರಿತು ನಿರ್ಣಯವಾಗಿದ್ದರೂ ಇಂದಿನ ದಿನದವರೆಗೂ ನೀಡ್ತಾ ಇಲ್ಲ ಎಂದು ವಿವರಣೆ ನೀಡಿದರು.

ಸೇಡಂ ಕ್ಷೇತ್ರದಲ್ಲಿ ಶಾಸಕರಾಗಿರುವ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಕ್ಷೇತ್ರದ ರೈತರಪರ ನಿಲ್ಲೋದು ಬಿಟ್ಟು ಕಾರ್ಖಾನೆ ಪರ ನಿಂತಿದ್ದಾರೆ. ಸೇಡಂ ಸಹಾಯಕ ಆಯುಕ್ತರ ನೇತೃತ್ವದಲ್ಲಿ ನಡೆದ ಸಭೆಯ ನಿರ್ಣಯಗಳ ಜಾರಿ ಮಾಡದೇ ಕಾರ್ಖಾನೆ ಎಲ್ಲ ನಿಯಮಗಳನ್ನು ಗಾಳಿಗೆ ತೂರಿದೆ. ಪರಿಹಾರ ನೀಡುವಲ್ಲಿ ತಾರತಮ್ಯ, ಪರಿಸರ ನಿಯಮಗಳ ಉಲ್ಲಂಘನೆ ಸೇರಿ ಹತ್ತಾರು ನಿಟ್ಟಿನಲ್ಲಿ ಅಕ್ರಮ ಹಾಗೂ ಅನ್ಯಾಯವನ್ನು ಶ್ರೀ ಸಿಮೆಂಟ್ ಮಾಡುತ್ತಿದೆ ಎಂದು ತೇಲ್ಕೂರ ಅಪಾದಿಸಿದರು.

ಶ್ರೀ ಸಿಮೆಂಟ್ ಕಾರ್ಖಾನೆ ರೈತರಿಗೆ ತಾರತಮ್ಯ. ಸರಕಾರ ಆದೇಶ ದಿಕ್ಕರಿಸಿ ಕೊಡಬೇಕಾದ ಪರಿಹಾರ ನೀಡುತ್ತಿಲ್ಲ. ಇದರ ಬಗ್ಗೆ ರೈತರ ಬಗ್ಗೆ ಕಿಂಚಿತ್ತೂ ಕಾಳಜಿ ಸಚಿವರಿಗೆ ಇಲ್ಲ. ಜಮೀನು ಕಳೆದುಕೊಂಡ ರೈತರು ಹಲವು ಬಾರಿ ಹೋರಾಟ ಮಾಡಿದ್ದಾರೆ. ಆದರೂ ಸರ್ಕಾರ ಹಾಗೂ ಸಚಿವರು ಕ್ಯಾರೇ ಎನ್ನುತ್ತಿಲ್ಲ. ಜಿಲ್ಲಾಧಿಕಾರಿಗಳು ಸಹ ಇದರತ್ತ ಲಕ್ಷ್ಯ ವಹಿಸುತ್ತಿಲ್ಲ. ಸೇಡಂ ಸಹಾಯಕ ಆಯುಕ್ತರು ನೇತೃತ್ವದಲ್ಲಿ 20 ಇಲಾಖೆಗಳ ಮುಖ್ಯಸ್ಥರು ಸೇರಿ ಸಭೆ ನಡೆಸಿ ನಡುವಳಿ ಪಾಸ್ ಮಾಡಿದ್ದಾರೆ. ಅದರಲ್ಲಿ ಕೆಲವೇ ರೈತರಿಗೆ ನೀಡಲಾಗಿರುವ 11.68 ಲಕ್ಷ ರೂ ಉಳಿದ ರೈತರಿಗೂ ನೀಡಬೇಕು. ಕಾರ್ಖಾನೆ ಧೂಳಿನಿಂದ ಹಾಳಾಗಿರುವ ಬೆಳೆಗೆ ಪರಿಹಾರ ನೀಡುವ ಕುರಿತಾಗಿ ನಿರ್ಣಯವಾಗಿದೆ. ಆದರೆ ಸಭೆ ನಿರ್ಣಯ ಸಭೆಗೆ ಮಾತ್ರ ಸಿಮೀತವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಸಚಿವರು ಯಾರ ಪರ

ಸೇಡಂ ಕ್ಷೇತ್ರದಲ್ಲಿ ಇಷ್ಟೊಂದು ಶೋಷಣೆ ಅನ್ಯಾಯ ನಡೆಯುತ್ತಿದ್ದರೂ ಸಚಿವರ ನಡವಳಿಕೆ ತುಂಬಾ ಸಂಶಯದಿಂದ ಕೂಡಿದೆ. ಸಚಿವರು ರೈತಪರವವೋ ಇಲ್ಲವೇ ಕಾರ್ಖಾನೆ ಪರ ಎಂಬುದನ್ನು ಘೋಷಿಸಲಿ ಎಂದು ತೇಲ್ಕೂರ ಸವಾಲು ಹಾಕಿದರು.

ರೈತರು ಇದರ ಬಗ್ಗೆ ಧ್ವನಿ ಎತ್ತಿದ್ದರೆ ಅವರ ವಿರುದ್ಧ ಸುಳ್ಳು ಕೇಸ್ ಹಾಕುವ ಕೆಲಸ ಮಾಡುತ್ತಿದ್ದಾರೆ. ರೈತರ ಮೇಲೆ ಹೂಡಿರುವ ಕೇಸ್ ಕೂಡಲೇ ವಾಪಸ್ ತೆಗೆದುಕೊಳ್ಳುವ ಮೂಲಕ ರೈತರಿಗೆ ನ್ಯಾಯ ಕೊಡಿಸಬೇಕು. ಸಹಾಯಕ ಆಯುಕ್ತರ ನಿರ್ದೇಶನ ಕಂಪನಿ ಅವರು ಪಾಲನೆ ಮಾಡುತ್ತಿಲ್ಲ. ಹತ್ತಾರು ಗ್ರಾಮಗಳನ್ನು ದತ್ತು ತೆಗೆದುಕೊಂಡು ಅಭಿವೃದ್ಧಿ ಪಡಿಸುವ ಕೆಲಸ ಹಿಂದಿನ ಸರ್ಕಾರದ ಅವಧಿಯಲ್ಲಿ ಮಾಡಿದರೇ ಅದನ್ನು ಸಹ ಇಗೀನ ಸರ್ಕಾರ ಮುತುವರ್ಜಿ ವಹಿಸುತ್ತಿಲ್ಲ.ಕಂಪನಿಗೆ ಯಾವ ಕಾಣದ ಕೈ ಬೆಂಬಲ ನೀಡುತ್ತಿದೆ ಎಂಬುದನ್ನು ಸಚಿವರು ಸ್ಪಷ್ಟಪಡಿಸಬೇಕು.ವಾಯು ಮಾಲಿನ್ಯದ ನಿಯಮಗಳನ್ನು ಕಂಪನಿ ಗಾಳಿಗೆ ತೂರಿದೆ.ಚಿಂಚೋಳಿಯ ಸಿದ್ದಸಿರಿ ಸಕ್ಕರೆ ಕಾರ್ಖಾನೆ ವಿರುದ್ಧ ದ್ವೇಷದ ರಾಜಕಾರಣ ಮಾಡುತ್ತಿದೆ. ಒಬ್ಬರಿಗೊಂದು ನ್ಯಾಯ ಇನ್ನೋಬ್ಬರಿಗೊಂದು ನ್ಯಾಯ. ಸಾವಿರಾರು ರೈತರಿಗೆ ಜೀವನಾಡಿ ಆಗಿರುವ ಸಕ್ಕರೆ ಕಾರ್ಖಾನೆ ವಿರುದ್ಧ ದ್ವಂದ್ವ ನಿಲುವು ಯಾಕೆ ಎಂದು ಪ್ರಶ್ನಿಸಿದರು.

ರೈತರ ಬೆಳೆ ನೆಟೆ ರೋಗದಿಂದ ಸಂಪೂರ್ಣವಾಗಿ ಹಾಳಾಗಿದ್ದು, ಅದರ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ಆಗಲಿ, ಶರಣಪ್ರಕಾಶ್ ಪಾಟೀಲ್ ಚಕಾರ ಕೂಡ ಎತ್ತುತ್ತಿಲ್ಲ.ಜಿಲಾಡಳಿತ ಹಾಗೂ ಜಿಲ್ಲಾ ಉಸ್ತುವಾರಿ ನಿಷ್ಕ್ರಿಯವಾಗಿದೆ. ಹೀಗಾಗಿ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಸಭೆ ಕರೆದು ತುರ್ತು ನ್ಯಾಯ ಒದಗಿಸಬೇಕು. ಒಂದು ವೇಳೆ ನ್ಯಾಯ ಕೊಡಧೇ ಹೋದಲ್ಲಿ ಫೆ.15ರ ನಂತರ ದೊಡ್ಡ ಪ್ರಮಾಣದಲ್ಲಿ ಹೋರಾಟ ಎದುರಿಸಬೇಕಾಗುತ್ತದೆ.ಹತ್ತಾರು ಕಾನೂನುಗಳು ಲೋಪನೆ ಶ್ರೀ ಸಿಮೆಂಟ್ ಕಾರ್ಖಾನೆ ನಡಿತಾ ಇದೆ.ಕಾನೂನು ಸುವ್ಯವಸ್ಥೆ ಹದಗೆಡುತ್ತಿದೆ. ಕೂಡವೇ ರೈತರ ನೆರವಿಗೆ ಸರಕಾರ ಧಾವಿಸಬೇಕು. ಹೈಕೋರ್ಟ್ ನ್ಯಾಯಮೂರ್ತಿ ಮೂಲಕ ವಾಯು ಮಾಲಿನ್ಯದ ಸರ್ವೇ ಆಗಬೇಕು. ಹಾಗೂ 3,48 ಸಾವಿರ ಕೊಡಬೇಕು. ನ್ಯಾಯಮೂರ್ತಿಗಳ ನೇತೃತ್ವದಲ್ಲಿ ತನಿಖೆ ಆಗಬೇಕು.ಇಲ್ಲವಾದರೇ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು. ರೈತರಾದ ಹಣಮಂತ ಜೊಗೇರ, ಶಾಂತಪ್ಪ ತಂಗಾನೋರ, ಕಾಶಪ್ಪ ಹೊನ್ನಕ್ಕಿ ಕೋಡ್ಲಾ, ಕಾಶೀಂ ಅಲಿ ಕೋಡ್ಲಾ, ದೇವು ಬಾನರ್ ಕೋಡ್ಲಾ, ರಾಮಲಿಂಗ ಕೋಡ್ಲಾ, ಭೀಮು ಪಾಪಳ್ಳಿ ಮೊದಲಾದವರು ಹಾಜರಿದ್ದರು.

---



ಇತ್ತೀಚೆಗೆ ನಡೆದ ಕೋಟೆಕಾರ್ ಬ್ಯಾಂಕ್ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರು ವ್ಯಕ್ತಿಗಳನ್ನು ಬಂಧಿಸಿರುವುದಾಗಿ ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ್ ಅಗರ್ವಾಲ್ ಘೋಷಿಸಿದ್ದಾರೆ. ಬಂಧಿತರು ಕುಖ್ಯಾತ ಅಪರಾಧಿ ಮುರುಗಂಡಿ ತೇವರ್; ಜೋಶುವಾ ರಾಜೇಂದ್ರನ್; ಕಣ್ಣನ್ ಮಣಿ; ಮತ್ತು ಮುರುಗಂಡಿ ತೇವರ್ ಅವರ ತಂದೆ ಷಣ್ಮುಗಸುಂದರಂ.

---

## ಸಂತ ಜೋಸೆಫ್ ಪ್ರಾಥಮಿಕ ಶಾಲೆಯಲ್ಲಿ 76ನೇ ಗಣರಾಜ್ಯೋತ್ಸವದ ಸಂಭ್ರಮಾಚರಣೆ



**ಬಳ್ಳಾರಿ ಜ 27 :** 76ನೇ ಗ ಣ ರಾ ಜ್ಯೋ ತ್ಸ ವ ದ ಸಂಭ್ರಮಾಚರಣೆಯ ಉಸ್ತುವಾರಿ ಸಚಿವರಾದ ರಹೀಮ್ ಖಾನ್, ಪೌರಾಡಳಿತ ಮತ್ತು ವಕ್ಫ್ ಖಾತೆ ಸಚಿವರು ವಿಮ್ಸ್ ಮೈದಾನದಲ್ಲಿ ಧ್ವಜಾರೋಹಣ ಮಾಡಿ ಮಾತನಾಡುತ್ತಾ ವಿಶ್ವದ ಅತಿದೊಡ್ಡ ಸಂವಿಧಾನ ಭಾರತದ ಸಂವಿಧಾನ ಇದು ಜಾರಿಗೆ ಬಂದ ದಿನ ನಮ್ಮೆಲ್ಲರಿಗೂ ಸಂತಸವನ್ನು ತಂದಿದೆ. ಸರ್ವರಿಗೂ ಸಮಾನತೆಯ ಹಕ್ಕನ್ನು ನೀಡಿ ಸರ್ವಾಂಗೀಣ ಅಭಿವೃದ್ಧಿಯ ಪಥದಲ್ಲಿ ನಡೆಯಲು ಸದೃಢ ಭಾರತವನ್ನು ನಿರ್ಮಿಸಲು ಅವಕಾಶವನ್ನು ಕಲ್ಪಿಸಿದೆ ಎಂದರು.

ಮೈದಾನದಲ್ಲಿ ಮೂವತ್ತು ತುಕಡಿಗಳು ಆಕರ್ಷಕ ಪಥಸಂಚಲನ ಮಾಡಿದರು. ವಿವಿಧ ಶಾಲೆಗಳ ವಿದ್ಯಾರ್ಥಿಗಳು ನೃತ್ಯ ಕವಾಯತನ್ನು ಮಾಡಿದರು. ಸಂತ ಜೋಸೆಫರ ಬಾಲಕರ ಕನ್ನಡ ಮತ್ತು ಆಂಗ್ಲ ಮಾಧ್ಯಮದ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳು ಲೇಜಿಯಂ, ಕೊಡವರ ನೃತ್ಯ, ಯಕ್ಷಗಾನ, ಭೂತಕೋಲ, ಹೂಪ್ಸ್, ನಂದಿಕುಣಿತ, ಕಂಸಾಳೆ, ಡೊಳ್ಳು ಕುಣಿತ, ಕಂಗೀಲು, ಬೇಡರ ಕುಣಿತ, ಹುಲಿವೇಷ ಮತ್ತು ಲಂಬಾಣಿ ನೃತ್ಯಗಳನ್ನು ಸುಮಾರು 400 ವಿದ್ಯಾರ್ಥಿಗಳಿಂದ ಅಂದ ಚೆಂದದ ಕಲಾತ್ಮಕ ವೇಷ-ಭೂಷಣಗಳೊಂದಿಗೆ ಎಲ್ಲರ ಕಣ್ಮನ ಸೆಳೆಯುವಂತೆ ಮಂತ್ರಮುಗ್ಧರನ್ನಾಗಿಸಿ ವೈವಿಧ್ಯಮಯವಾದ ಸಾಂಪ್ರದಾಯಕ, ಸಾಂಸ್ಕೃತಿಕ ವೈಭವವನ್ನು ಅನಾವರಣಗೊಳಿಸಿದರು.

ಶಾಲೆಯ ವ್ಯವಸ್ಥಾಪಕರಾದ ಫಾದರ್. ದಾನಪ್ಪ ಮೂಲಿಮನಿ, ಸಹಾಯಕ ಗುರುಗಳಾದ ಫಾದರ್. ಕೆನಡಿರವರ ಪ್ರೋತ್ಸಾಹ, ಮುಖ್ಯಶಿಕ್ಷಕಿಯರು ಹಾಗೂ ಶಿಕ್ಷಕ ವೃಂದದ ಶ್ರಮ ಇದಕ್ಕೆ ಕೈಗನ್ನಡಿಯಂತಿತ್ತು. ನಂತರ ವಿಯಾನ್ನಿ ವಿದ್ಯಾಲಯ ವಿದ್ಯಾರ್ಥಿಗಳು ದೇಶಭಕ್ತಿ ಗೀತೆಗೆ ಹೆಜ್ಜೆ ಹಾಕಿದರು. ಪಥಸಂಚಲನವನ್ನು ಉತ್ತಮವಾಗಿ ಮಾಡಿದ ತಂಡಗಳಿಗೂ ಹಾಗೂ ಸಾಂಸ್ಕೃತಿಕ ನೃತ್ಯ ಕವಾಯತನ್ನು ಮಾಡಿದ ತಂಡಗಳಿಗೂ ಸಚಿವರು ಪ್ರಶಸ್ತಿಗಳನ್ನು ನೀಡಿ ಗೌರವಿಸಿದರು. ವೇದಿಕೆಯಲ್ಲಿ ಮಹಾ ಪೌರರಾದ ಮುಲ್ಲಂಗಿ ನಂದೀಶ್‌ರವರು, ಗಣ್ಯರು ಹಾಗೂ ಜಿಲ್ಲೆಯ ಎಲ್ಲಾ ಅಧಿಕಾರಿಗಳು ಉಪಸ್ಥಿತರಿದ್ದರು.

---

## ಕರ್ನಾಟಕ ವಿಶ್ವವಿದ್ಯಾಲಯದಿಂದ ಪಠ್ಯ ಹಿಂದಕ್ಕೆ

**ಧಾರವಾಡ, ಜ. 27 :** ಭಾರತಾಂಬೆಗೆ ಅವಮಾನ ಮಾಡುವ ಅಂಶಗಳನ್ನು ಒಳಗೊಂಡಿದೆ ಎಂಬ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ತೀವ್ರ ವಿರೋಧಕ್ಕೆ ಒಳಗಾಗಿದ್ದ ಬೆಳಗು ಪಠ್ಯದಲ್ಲಿನ ಪಾಠವನ್ನು ಕರ್ನಾಟಕ ವಿಶ್ವವಿದ್ಯಾಲಯ ಹಿಂಪಡೆದಿದೆ.



ಕರ್ನಾಟಕ ವಿಶ್ವವಿದ್ಯಾಲಯದ 2024-25 ಸಾಲಿನ ಕನ್ನಡ ಸ್ನಾತಕ ಪದವಿ ಬಿ.ಎ ಪ್ರಥಮ ಸೆಮಿಸ್ಟರ್ ಪಠ್ಯಪುಸ್ತಕ ಬೆಳಗು -1 ರಲ್ಲಿ ಪ್ರಕಟವಾಗಿದ್ದ ಆಕ್ಷೇಪನಾರ್ಹ ಅಂಶಗಳಿಗೆ ವಿರೋಧ ವ್ಯಕ್ತವಾದ ಹಿನ್ನಲೆಯಲ್ಲಿ ಪಠ್ಯಪುಸ್ತಕದ ಲೇಖನ ಹಿಂಪಡೆಯಲು ಕವಿವಿ ತುರ್ತಾಗಿ ನಿರ್ಣಯ ಕೈಗೊಂಡಿದೆ. ಬೆಳಗು-1 ರ ನಾಲ್ಕನೇ ಅಧ್ಯಾಯದ ರಾಷ್ಟ್ರೀಯತೆಯ ಆಚರಣೆಯ ಸುತ್ತ ಕುರಿತು ರಾಮಲಿಂಗಪ್ಪ ಟಿ. ಬೇಗೂರ ಅವರು ಬರೆದ ಲೇಖನದಲ್ಲಿ ಕೆಲವು ಆಕ್ಷೇಪನಾರ್ಹ ಅಂಶಗಳನ್ನು ಒಳಗೊಂಡಿವೆ ಎಂಬ ವಿಷಯ ಮಾಧ್ಯಮಗಳಲ್ಲಿ ಹಾಗೂ ಗಣ್ಯರಿಂದ ವ್ಯಕ್ತವಾದ ಹಿನ್ನೆಲೆಯಲ್ಲಿ ಕರ್ನಾಟಕ ವಿಶ್ವವಿದ್ಯಾಲಯ ಆಡಳಿತವು ಈ ಲೇಖನವನ್ನು ನಿಯಮಾನುಸಾರ ವಿವಿಧ ಪ್ರಾಧಿಕಾರಗಳ ಸಭೆ ಜರುಗಿಸಿ, ಈ ಲೇಖನವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದು ಕ್ರಮ ಜರುಗಿಸಿದೆ.

ಘಟಕ-1 ರ ನಾಲ್ಕನೆಯ ಅಧ್ಯಾಯದ ಈ ಲೇಖನವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕೈಬಿಟ್ಟು (ಹೊರತುಪಡಿಸಿ) ಬೆಳಗು-1ಪಠ್ಯ ಪುಸ್ತಕವನ್ನು ಮುಂದುವರೆಸಲು ನಿರ್ಧರಿಸಲಾಯಿತು. ಇದಲ್ಲದೆ ವಿದ್ಯಾರ್ಥಿಗಳ ಪರೀಕ್ಷೆ ಹಾಗೂ ತತ್ಸಮಂಭಿತ ಪೂರಕ ಕಾರ್ಯಗಳನ್ನು ಜಾರಿ ಮಾಡಲಾಗುತ್ತಿದೆ ಎಂದು ಕುಲ ಸಚಿವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಎಬಿವಿಪಿ ಪ್ರತಿಭಟನೆ :** ಇನ್ನು ಶುಕ್ರವಾರ ಬೆಳಗ್ಗೆ ಕವಿವಿ 2024-25 ಸಾಲಿನ ಕನ್ನಡ ಸ್ನಾತಕ ಪದವಿ ಬಿ.ಎ ಪ್ರಥಮ ಸೆಮಿಸ್ಟರ್ ಪಠ್ಯಪುಸ್ತಕ ಬೆಳಗು -1 ರಲ್ಲಿ ರಾಮಲಿಂಗಪ್ಪ ಟಿ.ಬೇಗೂರ ಅವರ ಲೇಖನ ರಾಷ್ಟ್ರ ಮತ್ತು ಸಂವಿಧಾನ ವಿರೋಧಿಯಾಗಿದ್ದು, ಈ ಲೇಖನವನ್ನು ಕೈಬಿಡುವುದರ ಜತೆಗೆ ಪಠ್ಯ ರಚನೆ ಸಮಿತಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ನಗರದ ಕರ್ನಾಟಕ ವಿಶ್ವವಿದ್ಯಾಲಯದ ಆಡಳಿತ ಕಚೇರಿ ಎದುರು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಬೆಳಗು ಪಠ್ಯಪುಸ್ತಕದಲ್ಲಿ ರಾಮಲಿಂಗಪ್ಪ ಟಿ.ಬೇಗೂರ ಅವರ ಲೇಖನ ಪರಿಶೀಲನೆಗೆ ರಚಿಸಿದ್ದ ಸಮಿತಿ ವರದಿ ಸಲ್ಲಿಸಿದೆ. ವರದಿ ಆಧರಿಸಿ ಲೇಖನ ಕೈಬಿಡಲು ನಿರ್ಧರಿಸಲಾಗಿದೆ. ಇದಲ್ಲದೇ ಬಿ.ಎ ಪ್ರಥಮ ಸೆಮಿಸ್ಟರ್‌ನ ಕನ್ನಡ ಭಾಷಾ ಪರೀಕ್ಷೆಯನ್ನು ಮುಂದೂಡಲಾಗಿದೆ ಎಂದು ಕರ್ನಾಟಕ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿ ಪ್ರೊ.ಜಯಶ್ರೀ ಎಸ್. ಸ್ಪಷ್ಟಪಡಿಸಿದ್ದಾರೆ.




ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸೋಷಿಯಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಸದಸ್ಯರು ನಮ್ಮ ಮೆಟ್ರೋ ಏರಿಕೆ ವಿರೋಧಿಸಿ ಪ್ರತಿಭಟನೆ ನಡೆಸಿದರು.

# ವಾರ್ತಾ ಇಲಾಖೆಯ ನೂತನ ಬಸ್‌ಗೆ ಉಸ್ತುವಾರಿ ಸಚಿವರ ಚಾಲನೆ

**ರಾಯಚೂರು, ಜ. 27:** ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ 2024-25ನೇ ಸಾಲಿನಲ್ಲಿ ರಾಯಚೂರಿನ ವಾರ್ತಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರ ಕಚೇರಿಗೆ ಮಂಜೂರಾದ ನೂತನ ಮಿನಿ ಬಸ್‌ಗೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸಿ ಹಸಿರು ನಿಶಾನೆ ತೋರಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ನಡೆದ ಬಸ್ ಚಾಲನಾ ಕಾರ್ಯಕ್ರಮದಲ್ಲಿ ಭಾಗಿಯಾದ ಸಚಿವರು, ಹೂವು, ತಳಿರು ತೋರಣಗಳಿಂದ ಸಿಂಗಾರಗೊಂಡಿದ್ದ ಬಸ್‌ನ ಪ್ರವೇಶ ದ್ವಾರದಲ್ಲಿ ರಿಬ್ಬನ್ ಕತ್ತರಿಸಿ ಪತ್ರಕರ್ತರೊಂದಿಗೆ ಬಸ್ ಏರಿದರು.

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್,



ರಾಯಚೂರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಕೆಕೆಆರ್‌ಡಿಬಿ ಅನುದಾನದಲ್ಲಿ ನೀಡಲಗಿರುವ ಹೊಸ ಮಿನಿ ಬಸ್ ಜಿಲ್ಲಾ ಉಸ್ತುವಾರಿಂ ಸಚಿವ ಡಾ.ಶರಣ ಪ್ರಕಶ ಉದ್ಘಾಟಿಸಿ ಪತ್ರಕರ್ತರೊಂದಿಗೆ ಬಸ್ ಹತ್ತಿದರು.

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಮಾನವಿ ಶಾಸಕ ಹಂಪಯ್ಯ ನಾಯಕ, ವಿಧಾನ ಪರಿಷತ್ ಶಾಸಕ ಎ.ವಸಂತಕುಮಾರ್, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ರಾಹುಲ್ ತುಕಾರಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ ಅವರು ಸಹ ವಾರ್ತಾ ಇಲಾಖೆಯ ಬಸ್ ಏರಿ, ಸಚಿವರು ಹಾಗೂ ಪತ್ರಕರ್ತರೊಂದಿಗೆ ಸಂಚರಿಸಿ ಸಂತಷ ವ್ಯಕ್ತಪಡಿಸಿದರು.

ರಾಯಚೂರು ವಾರ್ತಾ ಇಲಾಖೆಗೆ ಬಸ್ ನೀಡಬೇಕು ಎಂದು ರಾಯಚೂರು ಪತ್ರಕರ್ತರು ಬಹು ವರ್ಷಗಳಿಂದ ಕೇಳುತ್ತಿದ್ದರು. ಜಿಲ್ಲೆಯ ಮಾಧ್ಯಮ ಪ್ರತಿನಿಧಿಗಳ ಬೇಡಿಕೆಯ ಬಗ್ಗೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಹಾಗು ರಾಯಚೂರು ಜಿಲ್ಲೆಯ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರ ವಿಶೇಷ ಪ್ರಯತ್ನ ಮತ್ತು ರಾಯಚೂರು ಜಿಲ್ಲೆಯ ಈಗಿನ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ವಿಶೇಷ ಕಾಳಜಿಯಿಂದಾಗಿ ಇದೀಗ, ವಾರ್ತಾ ಇಲಾಖೆಗೆ ನೂತನವಾಗಿ ಬಸ್ ಬಂದಿರುವುದು ಸಂತಷ ಮತ್ತು ಅಭಿಮಾನದ ಸಂಗತಿಯಾಗಿದೆ ಎಂದು ವಾರ್ತಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರ ಕಚೇರಿಯ ವಾರ್ತಾ ಸಹಾಯಕರಾದ ಗವಿಸಿದ್ದಪ್ಪ ಹೊಸಮನಿ ಅವರು ತಿಳಿಸಿ ಎಲ್ಲರಿಗೂ ಸ್ವಾಗತಿಸಿದರು.

ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಮಹಾನಗರ ಪಾಲಿಕೆ ಉಪ ಆಯುಕ್ತರಾದ ಗುರುಸಿದ್ದಯ್ಯಸ್ವಾಮಿ ಹಿರೇಮಠ, ಪತ್ರಕರ್ತರ ಸಂಘದ ಅಧ್ಯಕ್ಷರಾದ ಗುರುನಾಥ, ಹಿರಿಯ ಪತ್ರಕರ್ತರಾದ ಅರವಿಂದ ಕುಲಕರ್ಣಿ ಸೇರಿದಂತೆ ವಿವಿಧ ಪತ್ರಿಕೆಗಳ ಸಂಪಾದಕರು ಮತ್ತು ವರದಿಗಾರರು ಹಾಗು ಟಿವಿ ವಾಹಿನಿಗಳ ವರದಿಗಾರರು ಮತ್ತು ವಿಡಿಯೋ ಜರ್ನಲಿಸ್ಟ್ ಗಳು ಸಮಾರಂಭದಲ್ಲಿ ಹಾಜರಿದ್ದು ಸಚಿವರು, ಶಾಸಕರು, ಜಿಲ್ಲಾಧಿಕಾರಿಗಳಿಗೆ ಅಭಿನಂದಿಸಿದರು.

ಈ ವೇಳೆ ರಾಯಚೂರ ವಾರ್ತಾ ಇಲಾಖೆಯ ಸಿನಿ ಚಾಲಕರಾದ ಪ್ರಕಾಶ, ಪ್ರಥಮ ದರ್ಜೆ ಸಹಾಯಕರಾದ ಲಿಂಗರಾಜ್, ಹೊರಗುತ್ತಿಗೆ ನೌಕರರಾದ ರಮೇಶ, ವೆಂಕಟೇಶ, ಅಪ್ರೆಂಟಿಸ್ ತರಬೇತುದಾರರಾದ ನವೀನ್ ಹಾಗೂ ಇನ್ನಿತರರು ಇದ್ದರು.

# ಗ್ಯಾರಂಟಿಗಳಿಂದ ಅಭಿವೃದ್ಧಿ ಕೆಲಸಗಳಿಗೆ ಹಣದ ಕೊರತೆ ಇಲ್ಲ: ಸಚಿವ ಖಂಡ್ರೆ

**ಬೀದರ್, ಜ. 27:** ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಹಮ್ಮಿಕೊಳ್ಳಲು ಹಾಗೂ ಮುಂದುವರೆಸಲು ರಾಜ್ಯ ಸರ್ಕಾರದ ಬಳಿ ಹಣದ ಕೊರತೆ ಇಲ್ಲ ಎಂದು ಮಂತ್ರಿ ಈಶ್ವರ್ ಖಂಡ್ರೆ ಇಲ್ಲಿ ಭಾನುವಾರ ಪ್ರತಿಪಾದಿಸಿದರು.



ಜಿಲ್ಲಾಡಳಿತ ಹಮ್ಮಿಕೊಂಡ 76ನೇ ಗಣರಾಜ್ಯೋತ್ಸವದ ಪ್ರಯುಕ್ತ ಧ್ವಜಾರೋಹಣ ನೆರವೇರಿಸಿದ ನಂತರ ಅವರು ಜಿಲ್ಲೆಯ ಜನರಿಗೆ ಗಣರಾಜ್ಯೋತ್ಸವದ ಸಂದೇಶ ನೀಡಿದರು. ರಾಜ್ಯದಲ್ಲಿ ನಮ್ಮ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಿಗೂ ಮತ್ತು ಅಭಿವೃದ್ಧಿ ಕೆಲಸ ಕಾರ್ಯಗಳಿಗೂ ಸಂಬಂಧವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಬೀದರ್ ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಇದುವರೆಗೆ ಒಟ್ಟು 1,700 ಕೋಟಿ ರೂ.ಗಳನ್ನು ವಿನಿಯೋಗಿಸಲಾಗಿದೆ ಎಂದು ಅವರು ಪ್ರತಿಪಾದಿಸಿದರು.

ರಾಜ್ಯದ ಪಂಚ ಗ್ಯಾರಂಟಿ ಯೋಜನೆಗಳು ಇಡೀ ದೇಶಕ್ಕೆ ಮಾದರಿಯಾಗಿವೆ. ಇತರೇ ರಾಜ್ಯಗಳು ಅನುಕರಣೆ ಮಾಡುತ್ತಿವೆ. ಐದು ಗ್ಯಾರಂಟಿಗಳಿಗೆ ಪ್ರತಿವರ್ಷ 54 ಸಾವಿರ ಕೋಟಿ ಖರ್ಚು ಮಾಡಲಾಗುತ್ತಿದೆ. ರಾಜ್ಯದ ಜಿ.ಡಿ.ಪಿ. ಸಹ ಹೆಚ್ಚಾಗಿದೆಯೆಂದು ತಿಳಿಸಿದರು. ಹಸಿವು ಮುಕ್ತ ಕರ್ನಾಟಕ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರವು ಘೋಷಣೆ ಮಾಡಿದ ಅನ್ನಭಾಗ್ಯ ಯೋಜನೆಯಡಿ ರಾಜ್ಯ ಸರ್ಕಾರದಿಂದ 05 ಕೆ.ಜಿ. ಹೆಚ್ಚುವರಿ ಅಕ್ಕಿ ನೀಡುವ ಬದಲಾಗಿ ನೇರ ನಗದು ಹಣ ಪಾವತಿಸಲು 2024ರ ಸೆಪ್ಟಂಬರ್‌ಗೆ ಜಿಲ್ಲೆಗೆ ರೂ.1887.06 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ. ಒಟ್ಟು 307802 ಅರ್ಹ ಪಡಿತರ ಚೀಟಿಗಳ 1155837 ಫಲಾನುಭವಿಗಳ ಮುಖ್ಯಸ್ಥರ ಬ್ಯಾಂಕ್ ಖಾತೆಗಳಿಗೆ ರೂ.18,87,06,630 ಗಳನ್ನು ಪಾವತಿಸಲಾಗಿದೆ. ಜುಲೈ-2023 ರಿಂದ ಸೆಪ್ಟೆಂಬರ್-2024ರ ವರೆಗೆ ಒಟ್ಟು ರೂ.2,75,24,69,320 ಗಳನ್ನು ಕುಟುಂಬಗಳ ಮುಖ್ಯಸ್ಥರ ಬ್ಯಾಂಕ್ ಖಾತೆಗಳಿಗೆ ಡಿ.ಬಿ.ಟಿ ಮೂಲಕ ಜಮೆ ಮಾಡಲಾಗಿದೆ ಎಂದರು.

**ಶಕ್ತಿ ಯೋಜನೆ :** ಶಕ್ತಿ ಯೋಜನೆಯಡಿ ಬೀದರ್ ಜಿಲ್ಲೆಯಲ್ಲಿ ಮಹಿಳಾ ಮತ್ತು ಬಾಲಕಿಯರು ಒಟ್ಟು ಸೇರಿ 6.54 ಕೋಟಿ ಜನರು ಈ ಸೌಲಭ್ಯವನ್ನು ಪಡೆದಿರುತ್ತಾರೆ. ಹಾಗೂ ವಿಭಾಗದ ವಾಹನಗಳಲ್ಲಿ ಪ್ರತಿ ದಿನ ಸರಾಸರಿ 1.15 ಲಕ್ಷ ಮಹಿಳೆಯರು ಪ್ರಯಾಣಿಸುತ್ತಿದ್ದಾರೆ. ಸದರಿ ಮಹಿಳಾ ಮತ್ತು ಬಾಲಕಿಯರು ಒಟ್ಟು ಸಏರಿ ರೂ. 180.57 ಕೋಟಿ ಸಂದಾಯವಾಗಿರುತ್ತದೆ. ಪ್ರತಿ ದಿನ ಪ್ರಯಾಣಿಕರಿಂದ ಸರಾಸರಿ ರೂ. 35.68 ಲಕ್ಷ ಸಾರಿಗೆ ಆದಾಯ ಸಂದಾಯವಾಗುತ್ತಿದೆ ಎಂದರು.

ಯುವ ನಿಧಿ ಯೋಜನೆಯಡಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ 8057 ವಿಧ್ಯಾರ್ಥಿಗಳು ನೊಂದಣಿ ಮಾಡಿಕೊಂಡಿದ್ದು, ಸದರಿ ವಿದ್ಯಾರ್ಥಿಗಳ ಖಾತೆಗೆ ರೂ. 93234000 ನ್ನು ಜಮೆ ಮಾಡಲಾಗಿದೆ. ಗೃಹ ಜ್ಯೋತಿ ಯೋಜನೆಯಡಿಯಲ್ಲಿ ಗರಿಷ್ಠ 200 ಯುನಿಟ್‌ವರೆಗೆ ವಿದ್ಯುತ್ ಉಚಿತವಾಗಿ ಪಡೆಯುತಿದ್ದು, ಒಟ್ಟು 3,56,648 ಗ್ರಾಹಕರು ಇದರ ಲಾಭ ಪಡೆಯುತ್ತಿದ್ದು, ಈ ಯೋಜನೆಯು ಇಲ್ಲಿಯವರಗೆ ಶೇ.97 ಆಗಿದ್ದು, ಇನ್ನೂ ನೋಂದಣಿ ಪ್ರಕ್ರಿಯೆ ಚಾಲ್ತಿಯಲಿರುತ್ತದೆ. 2023 ರ ಆಗಸ್ಟ್‌ನಿಂದ ರಿಂದ 2024ರ ಡಿಸೆಂಬರ್ ಅಂತ್ಯದವರೆಗೆ ಸರ್ಕಾರದಿಂದ 263.23 ಕೋಟಿ ರೂ. ಅನುದಾನ ನೀಡಲಾಗಿದೆ. ಗೃಹ ಲಕ್ಷ್ಮೀ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 3,45,713 ಅರ್ಹ ಷ ' ಲಾ ನ ' ಂ ಭ ' ವಿ ಗ ' ಳ ' ಂ ನೋಂದಣಿಯಾಗಿದ್ದು, ಇಲ್ಲಿಯವರೆಗೆ ಪ್ರತಿ ಯಜಮಾನಿಗೆ ಮಾಹೆಯಾನ ತಲಾ ರೂ. 2000 ರಂತೆ ಒಟ್ಟು ರೂ. 929,88,20,000 ಗಳನ್ನು ಡಿ.ಬಿ.ಟಿ. ಮುಖಾಂತರ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗಿದೆ ಎಂದು ಪ್ರತಿಪಾದಿಸಿದರು.

ಸಂಸದ ಸಾಗರ್ ಖಂಡ್ರೆ, ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ಎಮ್‌ಎಲ್‌ಸಿ ಮಾರುತಿರಾವ ಮೂಳೆ, ನಗರಸಭೆ ಅಧ್ಯಕ್ಷ ಮಹ್ಮದ ಗೌಸ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಪಂ ಸಿಇಓ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಜಿಲ್ಲಾ ಅರಣ್ಯ ಅಧಿಕಾರಿ ವಾನತಿ ಮುರುಗೇಸನ್, ಹೆಚ್ಚುವರಿ ಜಿಲ್ಲಾಧಿಕಾರಿ ಶಿವುಕುಮಾರ ಶೀಲವಂತ, ಸಹಾಯಕ ಆಯುಕ್ತ ಎಂ.ಡಿ.ಶಕೀಲ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಹಲವಾರು ಜನರು ಉಪಸ್ಥಿತರಿದ್ದರು.

# ಜಾತಿ, ಮತ, ಧರ್ಮಗಳ ಭೇದ-ಭಾವವಿಲ್ಲದೆ ಪಂಚ ಗ್ಯಾರಂಟಿಗಳ ಯಶಸ್ವಿ ಜಾರಿ

**ಕಲಬುರಗಿ, ಜ. 27:** ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಆಶಯದಂತೆ ಸಂವಿಧಾನದ ಪೀಠಿಕೆಯಲ್ಲಿ ಉಲ್ಲೇಖಿಸಿರುವ ರೀತಿಯಲ್ಲಿ ಪ್ರಜಾಸತ್ತಾತ್ಮಕವಾಗಿ ನಾಡಿನ ಜನತೆಗೆ ನ್ಯಾಯ, ಸಮಾನತೆ, ಭಾತೃತ್ವ ಹಾಗೂ ಸ್ವಾತಂತ್ರ್ಯವನ್ನು ನಮ್ಮ ಸರ್ಕಾರ ಪಂಚ ಗ್ಯಾರೆಂಟಿಗಳ ಮೂಲಕ ಸಾಕಾರಗೊಳಿಸಿದೆ. ರಾಜ್ಯ ಸರಕಾರ ಇಂದು ಜಾತಿ, ಮತ, ಧರ್ಮಗಳ ಬೇಧ ಭಾವವಿಲ್ಲದೆ ಪಂಚ ಗ್ಯಾರೆಂಟಿಗಳನ್ನು ಯಶಸ್ವಿಯಾಗಿ ಜನರಿಗೆ ಕೊಡುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಇಲ್ಲಿನ ಡಿ. ಎ.ಆರ್.ಪೊಲೀಸ್ ಪರೇಡ್ ಮೈದಾನದಲ್ಲಿ 76ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಿದ ನಂತರ ಅವರು ಭಾಷಣ ಮಾಡಿ, ಮಹಿಳೆಯರಿಗೆ ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ಉಚಿತ ಪ್ರಯಾಣ ಒದಗಿಸುವ "ಶಕ್ತಿ" ಯೋಜನೆಯಡಿ ಜಿಲ್ಲೆಯಲ್ಲಿ ಪ್ರತಿ ದಿನ 1.85 ಲಕ್ಷ ಜನ ಮಹಿಳೆಯರು ಉಚಿತ ಪ್ರಯಾಣದ ಸೌಲಭ್ಯ ಪಡೆಯುತ್ತಿದ್ದಾರೆ. ನಮ್ಮ ಜಿಲ್ಲೆಯಲ್ಲಿ ಡಿಸೆಂಬರ್ 31ರ ವರೆಗೆ 1,057 ಲಕ್ಷ ಮಹಿಳಾ ಪ್ರಯಾಣಿಕರು ಇದರ ಸೌಲಭ್ಯ ಪಡೆದಿದ್ದು, ಇದರಿಂದ ಕೆ.ಕೆ. ಆರ್.ಟಿ.ಸಿ. ನಿಗಮವು ಗಣನೀಯವಾಗಿ ಆರ್ಥಿಕ ಲಾಭ ಕಂಡಿದೆ. "ಅನ್ನ ಭಾಗ್ಯ" ಯೋಜನೆಯಡಿ ಜಿಲ್ಲೆಯ 5,80,395 ಪಡಿತರ ಚೀಟಿಯ 20,47,066 ಅರ್ಹ ಸದಸ್ಯರಿಗೆ ಉಚಿತ 3 ಕೆ.ಜಿ. ಅಕ್ಕಿ ಮತ್ತು 2 ಕೆ.ಜಿ. ಜೋಳ ನೀಡಲಾಗುತ್ತಿದೆ. ಇದಲ್ಲದೆ 5 ಕೆ.ಜಿ ಅಕ್ಕಿ ಬದಲಾಗಿ ಪ್ರತಿ ಸದಸ್ಯರಿಗೆ



ತಲಾ 170 ರೂ. ಗಳಂತೆ ಹಣ ಪಾವತಿಸಲಾಗುತ್ತಿದೆ. ಯೋಜನೆ ಆರಂಭದಿಂದ ಸೆಪ್ಟೆಂಬರ್-2024ರ ಅಂತ್ಯದ ವರೆಗೆ 5,01,767 ಪಡಿತರ ಚೀಟಿಗೆ ಒಟ್ಟು 421.16 ಕೋಟಿ ರೂ. ಡಿ.ಬಿ.ಟಿ. ಮೂಲಕ ಫಲಾನುಭವಿಗಳ ಖಾತೆಗೆ ನೇರವಾಗಿ ಹಣ ಜಮೆ ಮಾಡಲಾಗಿದೆ. 200 ಯೂನಿಟ್ ವರೆಗೆ ಉಚಿತ ವಿದ್ಯುತ್ ಒದಗಿಸುವ "ಗೃಹ ಜ್ಯೋತಿ" ಯೋಜನೆಯಡಿ ಡಿಸೆಂಬರ್-2024ರ ಅಂತ್ಯದ ವರೆಗೆ ಕಲಬುರಗಿ ಜಿಲ್ಲೆಯಲ್ಲಿ 5,58,405 ಗ್ರಾಹಕರು ನೋಂದಣಿ ಮಾಡಿಕೊಳ್ಳುವ ಮೂಲಕ ಉಚಿತ ವಿದ್ಯುತ್ ಲಾಭ ಪಡೆಯುತ್ತಿದ್ದಾರೆ. ಇದಕ್ಕೆ ಪ್ರತಿಯಾಗಿ ಸರ್ಕಾರ ಜೆಸ್ಕಾಂಗೆ 415.72 ಕೋಟಿ ರೂ. ಸಬ್ಸಿಡಿ ಹಣ ಪಾವತಿಸಿದೆ ಎಂದು ಮಾಹಿತಿ ನೀಡಿದರು.

ಅಲ್ಲದೆ, ಮಹಿಳಾ ಸಬಲೀಕರಣ ನಿಟ್ಟಿನಲ್ಲಿ ಕುಟುಂಬದ ಯಜಮಾನಿಗೆ ಮಾಸಿಕ 2,000 ರೂ. ಒದಗಿಸುವ "ಗೃಹ ಲಕ್ಷ್ಮಿ" ಯೋಜನೆಗೆ ಜಿಲ್ಲೆಯಲ್ಲಿ ನೋಂದಣಿ ಮಾಡಿಕೊಂಡವರ ಪೈಕಿ ಅರ್ಹ 5,43,700 ಮಹಿಳೆಯರಿಗೆ ಇದೂವರೆಗೆ 1,499.68 ಕೋಟಿ ರೂ. ಹಣ ಡಿ.ಬಿ.ಟಿ. ಮೂಲಕ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ. ಇನ್ನೊಂದು ಪ್ರಮುಖ ಯೋಜನೆ ಆಗಿರುವ "ಯುವ ನಿಧಿ"ಯಡಿ ಜಿಲ್ಲೆಯಲ್ಲಿ 50,344 ಪದವಿಧರರು, 356 ಡಿಪ್ಲೋಮಾ ಪದವಿಧರರು ನೋಂದಣಿಯಾಗಿದ್ದು, ಇದರಲ್ಲಿ ಅರ್ಹ 14,150 ಜನರಿಗೆ ಮಾಸಿಕ ಕ್ರಮವಾಗಿ 3,000 ರೂ. ಮತ್ತು 1,500 ರೂ. ಗಳಂತೆ ಇದೂವರೆಗೆ 15.15 ಕೋಟಿ ರೂ. ನಿರುದ್ಯೋಗ ಭತ್ಯೆ ನೀಡಲಾಗಿದೆ ಎಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿಗೆ ಮೆಟ್ರಿಕ್ ನಂತರ ಬಾಲಕರ ಮತ್ತು ಬಾಲಕಿಯರ ತಲಾ 3 ವಸತಿ ನಿಲಯ ಮಂಜೂರು ಮಾಡಿದ್ದು, 600 ವಿದ್ಯಾರ್ಥಿಗಳಿಗೆ ಪ್ರವೇಶವಕಾಶ ಲಭಿಸಲಿದೆ. ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿಗೆ 100 ಸಂಖ್ಯಾ ಬಲದ 6 ವಸತಿ ನಿಲಯ ಮತ್ತು 2 ಮೋರಾರ್ಜಿ ದೇಸಾಯಿ ವಸತಿ ಶಾಲೆ ಮಂಜೂರು ಮಾಡಲಾಗಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿಗೆ ತಲಾ 3 ಮೆಟ್ರಿಕ್ ನಂತರ ಬಾಲಕರ ಮತ್ತು ಬಾಲಕಿಯರ ವಸತಿ ನಿಲಯ ಮಂಜೂರು ಮಾಡಿದ್ದು, 600 ವಿದ್ಯಾರ್ಥಿಗಳಿಗೆ ಪ್ರವೇಶವಕಾಶ ಲಭಿಸಲಿದೆ. ಇನ್ನೂ ಆಯುಷ್ಮಾನ್ ಭಾರತ ಜನ ಆರೋಗ್ಯ ಯೋಜನೆ-ಮುಖ್ಯಮಂತ್ರಿ ಆರೋಗ್ಯ ಕರ್ನಾಟಕ ಯೋಜನೆಯಡಿ ಪ್ರಸಕ್ತ 2024-25ನೇ ಸಾಲಿನಲ್ಲಿ ವಿವಿಧ ಗಂಭೀರ ಕಾಯಿಲೆಗಳು ಸೇರಿದಂತೆ ರೋಗಗಳಿಗೆ ತುತ್ತಾದ 1,40,736 ಜನರ ಉಚಿತ ಚಿಕಿತ್ಸಾ ಮತ್ತು ಶಸ್ತ್ರಚಿಕಿತ್ಸೆ ವೆಚ್ಚವಾಗಿ ಸರ್ಕಾರ 93 ಕೋಟಿ ರೂ. ವೈದ್ಯಕೀಯ ವೆಚ್ಚ ಭರಿಸಿದೆ ಎಂದರು.

ಕಾರ್ಯಕ್ರಮದಲ್ಲಿ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ, ಕಲಬುರಗಿ ಉತ್ತರ ಶಾಸಕಿ ಮತ್ತು ಕರ್ನಾಟಕ ರೇಷ್ಮೆ ಅಭಿವೃದ್ಧಿ ನಿಯಮಿತದ ಅಧ್ಯಕ್ಷೆ ಕನೀಜ್ ಫಾತಿಮಾ, ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಬಾಬುರಾವ ಚಿಂಚನಸೂರು, ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವೆಂದ್ರಪ್ಪ ಮರತೂರು, ಮಹಾನಗರ ಪಾಲಿಕೆ ಮೇಯರ್ ಯಲ್ಲಪ್ಪ ನಾಯ್ಕೊಡಿ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕೆ.ಕೆ. ಆರ್.ಡಿ.ಬಿ. ಮಂಡಳಿ ಕಾರ್ಯದರ್ಶಿ ಎಂ.ಸುಂದರೇಶ ಬಾಬು, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ.ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಡಿ.ಸಿ.ಪಿ ಕನಿಕಾ ಸಿಕ್ರಿವಾಲ್, ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ.ಆಕಾಶ ಶಂಕರ, ಕೆ.ಕೆ.ಆರ್.ಟಿ.ಸಿ ಎಂ.ಡಿ ಎಂ.ರಾಚಪ್ಪ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್ ಸೇರಿದಂತೆ ಅಧಿಕಾರಿಗಳು, ಸಾರ್ವಜನಿಕರು, ಶಾಲಾ ಮಕ್ಕಳು ಇದ್ದರು.

# ಸಿಎಂ ಪತ್ನಿ, ಮುಡಾ ಸೈಟ್ ಏಕೆ ಹಿಂದಿರುಗಿಸಿದರು: ಸ್ನೇಹಮಯಿ ಕೃಷ್ಣ ಪ್ರಶ್ನೆ

**ಧಾರವಾಡ, ಜ. 27 :** ಮುಡಾದಲ್ಲಿ ಕೋಟ್ಯಾಂತರ ರೂಪಾಯಿ ಹಗರಣವಾಗಿದೆ. ಸಿಎಂ ಸಿದ್ದರಾಮಯ್ಯ ಅವರು ಹಗರಣ ಮಾಡಿಲ್ಲ ಅಂತಾರೆ, ಆದರೆ ಅವರ ಪತ್ನಿಯವರು ಮುಡಾ ಸೈಟ್‌ಗಳನ್ನು ಯಾಕೆ ಹಿಂದಿರುಗಿಸಿದರು ಅಂತಾ ನಾನು ಈ ಮೊದಲಿನಿಂದಲೂ ಕೇಳುತ್ತಿರುವೆ ಎಂದು ದೂರುದಾರ ಸ್ನೇಹಮಯಿ ಕೃಷ್ಣ ಪ್ರಶ್ನಿಸಿದರು.

ಸಿಎಂ ಮತ್ತವರ ಪತ್ನಿ, ಇನ್ನಿತರರ ವಿರುದ್ಧದ ಮುಡಾ ನಿವೇಶನ ಹಂಚಿಕೆ ಪ್ರಕರಣ ಸಂಬಂಧ ಮುಡಾ ಪ್ರಕರಣವನ್ನು ಸಿಬಿಐ ತನಿಖೆಗೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆಯನ್ನು ಇಂದು ಹೈಕೋರ್ಟ್ ಧಾರವಾಡದ ಪೀಠ ಆಲಿಸಿ, ಆದೇಶವನ್ನು ಕಾಯ್ದಿರಿಸಿತು. ಬಳಿಕ ಮಾಧ್ಯಮಗಳಿಗೆ ಸ್ನೇಹಮಯಿ ಕೃಷ್ಣ ಪ್ರತಿಕ್ರಿಯೆ ನೀಡಿ, ಮುಡಾ ಸಂಬಂಧ ನಾನು ಲೋಕಾಯುಕ್ತಕ್ಕೆ ದೂರು ನೀಡಿದ ಕೇವಲ ಮೂರೇ ದಿನಗಳಲ್ಲಿ 14 ನಿವೇಶನಗಳನ್ನು ವಾಪಸ್ ನೀಡಿದ್ದಾರೆ. ಅಲ್ಲೋನ ತಪ್ಪು ನಡೆದಿದೆ ಅಂತಾ ಅರ್ಥವಲ್ಲವೇ ಎಂದು ಪ್ರಶ್ನಿಸಿದರು. ನಿವೇಶಗಳ ಮೌಲ್ಯ ರೂ.60 ಕೋಟಿಗಿಂತಲೂ ಹೆಚ್ಚು ಬಾಳುತ್ತದೆ. ನಾನ್ಯಾಕೆ ಮುಡಾಗೆ ವಾಪಸ್ ಕೊಡಲಿ ಅಷ್ಟು ಮೊತ್ತದ ಹಣ ಕೊಟ್ಟರೆ ನಿವೇಶನಗಳನ್ನು ವಾಪಸ್ ಕೊಡುವೆ ಎಂದು ಖುದ್ದು ಸಿಎಂ ಹೇಳಿದ್ದರು. ಆದರೆ ಯಾಕೆ ಹಣವನ್ನು ಕೇಳದೇ ನಿವೇಶಗಳನ್ನು ಹಿಂದಿರುಗಿಸಿದರು ಎಂದು ಈಗಲೂ ನನ್ನದು ಅದೇ ಪ್ರಶ್ನೆಯಾಗಿದೆ ಎಂದು ಕುಟುಕಿದರು.

ಲೋಕಾಯುಕ್ತಗೆ, ಇ.ಡಿ.ಗೆ ದೂರು ನೀಡುತ್ತಿದ್ದಂತೆಯೇ ರಾತ್ರೋ ರಾತ್ರಿ ತೀರ್ಮಾನ ತೆಗೆದುಕೊಂಡು ಶ್ರೀಮತಿ ಪಾರ್ವತಿಯವರು ನಿವೇಶನಗಳನ್ನು ವಾಪಸ್ ಮಾಡ್ತಾರೆ ಅಂದರೆ ಏನು ಅರ್ಥ ಒಬ್ಬ ಸಾಮಾನ್ಯ ವ್ಯಕ್ತಿ ದೂರು ದಾಖಿಸಿದರೆ ಸಿಎಂ ಸ್ಥಾನದಲ್ಲಿರುವ ಅವರು ನಿವೇಶನ ವಾಪಸ್ ಕೊಡಿಸುತ್ತಾರೆಂದರೆ ವಿಷಯ ಅರ್ಥ ಮಾಡಿಕೊಳ್ಳುವಂತಹದ್ದು ಎನ್ನುವ ಮೂಲಕ ಇದರಲ್ಲಿ ಹಗರಣ ನಡೆದಿದೆ ಆರೋಪಿಸಿದರು. ಈಗಲೂ ತಮ್ಮದು ಅದೇ ಪ್ರಶ್ನೆ, ತಪ್ಪಿಲ್ಲದಿದ್ರೆ ಸೈಟ್ ಯಾಕೆ ವಾಪಸ್ ಕೊಟ್ರು ಎಂದಿರುವ ಸ್ನೇಹಮಯಿ ಅವರು ಕಾನೂನು ಹೋರಾಟ ಮುಂದುವರಿಯಲಿದೆ ಎಂದು ಪುನರುಚ್ಚರಿಸಿದರು.

# ಗರ್ಭಿಣಿಯರಲ್ಲಿ ರಕ್ತಹೀನತೆ ಇದ್ದಲ್ಲಿ ನಿರ್ಲಕ್ಷ್ಯ ಬೇಡ: ಡಿಎಚ್‌ಓ ಡಾ.ರಮೇಶ್ ಬಾಬು

**ಬಳ್ಳಾರಿ, ಜ. 27 :** ಗರ್ಭಿಣಿಯರಲ್ಲಿ ರಕ್ತಹೀನತೆ ಇದ್ದಲ್ಲಿ ನಿರ್ಲಕ್ಷಿಸಬಾರದು. ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಎಫ್‌ಸಿಎಮ್ ಚುಚ್ಚುಮದ್ದು ಹಾಕಿಸಿ ರಕ್ತಹೀನತೆ ತಡೆಗೆ ಮುಂದಾಗಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.ಸಿರಗುಪ್ಪ ಪಟ್ಟಣದ ಹೊರವಲಯದ ವಲಸೆ ಜನವಿರುವ ಸಿದ್ದಪ್ಪ ನಗರಕ್ಕೆ ಗರ್ಭಿಣಿ ಮಹಿಳೆಯರ ಮನೆ ಭೇಟಿ ಮಾಡಿ ಸ್ಥಳೀಯ ಜನತೆಯೊಂದಿಗೆ ಅವರು ಮಾತನಾಡಿದರು.



ಮನೆಯಲ್ಲಿ ಗರ್ಭಿಣಿಯಿದ್ದರೆ ಅವರು ಮನೆಯ ಮಗಳಾಗಿರಲಿ ಅಥವಾ ಸೊಸೆಯಾಗಿರಲಿ ಯಾವುದೇ ಕಾರಣಕ್ಕೂ ರಕ್ತಹೀನತೆಯಾಗದಂತೆ ಕಾಳಜಿ ವಹಿಸಬೇಕು. ಈ ದಿಶೆಯಲ್ಲಿ ದುಬಾರಿಯಾದ ಎಫ್.ಸಿ.ಎಮ್ ಚುಚ್ಚುಮದ್ದನ್ನು ಎಲ್ಲ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ನೀಡಲಾಗುತ್ತದೆ ಎಂದು ಅವರು ತಿಳಿಸಿದರು.

ನಿಮ್ಮ ವೃತ್ತಿಯೊಂದಿಗೆ ಮನೆಯಲ್ಲಿನ ಗರ್ಭಿಣಿಯ ಆರೈಕೆಗೆ ಆದ್ಯತೆ ನೀಡಬೇಕು. ಆರೋಗ್ಯ ಇಲಾಖೆಯಿಂದ ನೀಡುವ ಕಬ್ಬಿಣಾಂಶ ಮಾತ್ರೆಗಳನ್ನು ಊಟವಾದ ಒಂದು ಗಂಟೆಯ ನಂತರ ತಪ್ಪದೇ ನುಂಗಿಸಬೇಕು. ಕಬ್ಬಿಣಾಂಶ ಮಾತ್ರೆ ನುಂಗಿದರೆ, ಭ್ರೂಣ ದಪ್ಪವಾಗುತ್ತದೆ, ಕಪ್ಪು ಬಣ್ಣದ ಮಗು ಹುಟ್ಟುತ್ತದೆ ಎಂಬ ತಪ್ಪು ನಂಬಿಕೆಗಳನ್ನು, ಗಾಳಿಸುದ್ದಿಗಳನ್ನು ನಂಬಬಾರದು. ವೈದ್ಯರ ಸಲಹೆಯಂತೆ ಉಚಿತವಾಗಿ ನೀಡುವ ಕಬ್ಬಿಣಾಂಶ ಮಾತ್ರೆಗಳನ್ನು ಪ್ರತಿದಿನ ಒಂದರಂತೆ ಕನಿಷ್ಠ 180 ಸೇವಿಸಬೇಕು ಎಂದು ಅವರು ವಿನಂತಿಸಿದರು.

ಗಂಡಾಂತರ ಗರ್ಭಿಣಿಯರು ಎಂದು ಗುರ್ತಿಸಿದ ನಂತರ ಅಂದರೆ ಚೊಚ್ಚಲು ಗರ್ಭಿಣಿ, ಎತ್ತರ ಕಡಿಮೆ, ಅಧಿಕ ರಕ್ತದೊತ್ತಡ, ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿ ಜವಳಿ ಗರ್ಭಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗಿರುವುದು, ಮೊದಲ ಹೆರಿಗೆ ಸಿಸೇರಿಯನ್, ಮುಂತಾದ ಕಾರಣಗಳಿದ್ದರೆ ನಿರ್ಲಕ್ಷಿಸಬಾರದು. ಅಲ್ಲದೆ ತೀವ್ರ ರಕ್ತಹೀನತೆಯಂತಹ ಸನ್ನಿವೇಶದಲ್ಲಿ ಸ್ಥಳೀಯವಾಗಿ ನೀಡುವ ಚಿಕಿತ್ಸೆಯಾದ ಸುಧಾರಣೆಯಾಗದಿದ್ದಲ್ಲಿ ತಜ್ಞರ ಬಳಿ ತಪ್ಪದೇ ಕಳುಹಿಸಬೇಕು. ಅಗತ್ಯವಿದ್ದಲ್ಲಿ ಸ್ಕ್ಯಾನ್ ಮಾಡಿಸಬೇಕು ಎಂದು ಹೇಳಿದರು.

**ಪೌಷ್ಟಿಕ ಆಹಾರ ತಪ್ಪದೆ ನೀಡಿ :** ಗರ್ಭಿಣಿ ಮಹಿಳೆಯರಿಗೆ ಮೊಳಕೆ ಕಾಳು, ಹಸಿರು ತಪ್ಪಲು ಪಲ್ಯ ಮೊಟ್ಟೆ, ಮೀನು, ಸಾಂಸ್ಕೃತಿಕವಾಗಿ ಒಪ್ಪಿದರೆ ಮಾಂಸಹಾರಿ ಊಟ, ಋತುಮಾನದ ಹಣ್ಣುಗಳನ್ನು ತಪ್ಪದೇ ಕೊಡಬೇಕು. ಇದಕ್ಕೆ ಬೆಂಬಲವಾಗಿ ಈಗಾಗಲೇ ಪ್ರತಿ 9 ಹಾಗೂ 24 ತಾರೀಖುಗಳಂದು ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ತಪಾಸಣೆಯೊಂದಿಗೆ ಪೌಷ್ಠಿಕತೆ ಇರುವ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

**ರಕ್ತ ಶೇಖರಣಾ ಘಟಕ ಆರಂಭ :** ಗರ್ಭಿಣಿ ಸೇರಿದಂತೆ ಇತರರಿಗೆ ರಕ್ತದ ಅವಶ್ಯಕತೆ ಇದ್ದರೆ ಒದಗಿಸಲು ಮೋಕಾ, ಕುರುಗೋಡು, ಕಂಪ್ಲಿ, ತೋರಣಗಲ್ಲು ಆರೋಗ್ಯ ಕೇಂದ್ರಗಳಲ್ಲಿ ರಕ್ತ ಶೇಖರಣಾ ಘಟಕ ಆರಂಭಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಲು ತಿಳಿಸಿದರು.

**ಹೆರಿಗೆ ದಿನಾಂಕ 3 ದಿನ ಮೊದಲು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ :** ಹೆರಿಗೆಗೆ ನಿರೀಕ್ಷಿತ ದಿನಾಂಕದ 3 ದಿನ ಮೊದಲು ಗರ್ಭಿಣಿಯರು ಅದರಲ್ಲೂ ಗಂಡಾಂತರಕಾರಿ ಲಕ್ಷಣಗಳುಳ್ಳವರು ತಮ್ಮ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿ ಸರಳ ಹೆರಿಗೆಯ ಅವಕಾಶಗಳಿಗೆ ಬೆಂಬಲಿಸಬೇಕು ಎಂದು ಕೋರಿದರು.

**ಮಕ್ಕಳ ಜನನದ ಮಧ್ಯ ಅಂತರಕ್ಕಾಗಿ ತಾತ್ಕಾಲಿಕ ವಿಧಾನ ಬಳಸಿ :** ಮೊದಲ ಹೆರಿಗೆ ಶಸ್ತ್ರಚಿಕಿತ್ಸೆ ಮೂಲಕವಾದಲ್ಲಿ ಪುನಃ ಗರ್ಭಿಣಿಯಾಗುವ ಅವಧಿಯನ್ನು ಕನಿಷ್ಠ 3 ವರ್ಷಕ್ಕೆ ಕಡ್ಡಾಯವಾಗಿ ಮುಂದೂಡಬೇಕು. ಇದಕ್ಕಾಗಿ ಅಂತರ ಚುಚ್ಚುಮದ್ದು, ಕಾಪರ್-ಟಿ, ನೀರೊಧ್ ಬಳಸಲು ವಿನಂತಿಸಿದರು.ಈ ಸಂದರ್ಭದಲ್ಲಿ ಸಿರುಗುಪ್ಪ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಸವರಾಜ್ ದಮ್ಮೂರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಅಂಗನವಾಡಿ ಸಹಾಯಕಿಯರು, ಸ್ಥಳೀಯರಾದ ಅಶೋಕ, ಕಾಸಿಮ್, ಹುಸೇನ್, ಶಿವಶಂಕರ ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಕಲ್ಯಾಣಕ್ಕಾಗಿ ನಿವೃತ್ತ ಹಿರಿಯ ಕನ್ನಡ ಶಿಕ್ಷಕಿ ಎಮ್.ಪಿ.ಜಯಶೀಲಾ 1 ಲಕ್ಷ ರೂ ದೇಣಿಗೆ

**ಬಳ್ಳಾರಿ, ಜ. 27 :** ಶ್ರೀ ವಾಸವಿ ಎಜ್ಯುಕೇಷನ್ ಟ್ರಸ್ಟ್‌ನ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಕಲ್ಯಾಣಕ್ಕಾಗಿ ನಿವೃತ್ತ ಹಿರಿಯ ಕನ್ನಡ ಶಿಕ್ಷಕಿಯಾದ ಎಮ್. ಪಿ. ಜಯಶೀಲಾರವರು 1 ಲಕ್ಷ ರೂಪಾಯಿ ದೇಣಿಗೆಯನ್ನು ನೀಡಿದ್ದಾರೆ. ಇವರು ಶ್ರೀ ವಾಸವಿ ವಿದ್ಯಾಲಯದಲ್ಲಿ ಸುಮಾರು 3 ದಶಕಗಳ ಕಾಲ ಕನ್ನಡ ಶಿಕ್ಷಕಿಯಾಗಿ ಶ್ರದ್ಧೆಯಿಂದ ಸೇವೆ ಸಲ್ಲಿಸಿ, ಹಲವು ಪೀಳಿಗೆಯ ವಿದ್ಯಾರ್ಥಿಗಳಿಗೆ ಕನ್ನಡ ಭಾಷೆಯ ಮಹತ್ವವನ್ನು ಮನಗಾಣಿಸುವಲ್ಲಿ ತಮ್ಮ ಅಮೂಲ್ಯ ಕೊಡುಗೆಯನ್ನು ನೀಡಿದ್ದಾರೆ.

ಶಿಕ್ಷಣ ಸಂಸ್ಥೆಯ ಅಭಿವೃದ್ಧಿ ಮತ್ತು ವಿದ್ಯಾರ್ಥಿಗಳ ಕಲ್ಯಾಣಕ್ಕಾಗಿ ತುಂಬು ಹೃದಯದಿಂದ ನೀಡಿದ ಈ ದೇಣಿಗೆ ಮೊತ್ತ ವಿದ್ಯಾರ್ಥಿಗಳಿಗೆ ಸಹಾಯವಾದದ್ದು, ಟ್ರಸ್ಟ್ ಇದಕ್ಕೆ ಹೆಮ್ಮೆ ಪಡುತ್ತದೆ ಎಂದು ಶ್ರೀ



ವಾಸವಿ ಎಜ್ಯುಕೇಷನ್ ಟ್ರಸ್ಟ್ ನ ಕಾರ್ಯದರ್ಶಿಗಳಾದ ಪಿ. ಎನ್. ಸುರೇಶ್ ರವರು ಸಂತೋಷ ವ್ಯಕ್ತಪಡಿಸಿದರು.

ಇವರ ಅನುಭವ, ಶ್ರದ್ಧೆ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ನೀಡಿದ ಅಮೂಲ್ಯ ಸೇವೆ ಅನೇಕ ವಿದ್ಯಾರ್ಥಿಗಳ ಜೀವನವನ್ನು ರೂಪಿಸಿದೆ. ಈ ಉದಾರ ದಾನಕ್ಕೆ ಟ್ರಸ್ಟ್ ನ ಸದಸ್ಯರು ಸಂತೋಷ ವ್ಯಕ್ತಪಡಿಸಿದ್ದು, ಇದರ ಮೂಲಕ ವಿದ್ಯಾರ್ಥಿಗಳ ಕಲ್ಯಾಣಕ್ಕೆ ಇನ್ನಷ್ಟು ಕೊಡುಗೆ ನೀಡಲು ಪ್ರೇರಣೆಯಾಗಲಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ. ಈ ಸಂಧರ್ಬದಲ್ಲಿ ಹ್ಯಾಲಿಸ್ ಬ್ಲೂ ಶಿವಮೂರ್ತಿ, ಜಯಪ್ರಕಾಶ್‌ಗುಪ್ತ, ಶಾಲೆಯ ಸಿಬ್ಬಂದಿ ಮತ್ತಿತರರು ಉಪಸ್ಥಿತರಿದ್ದರು.


# ಜಾತಿಗಣತಿ ವರದಿಯನ್ನು ಬಿಡುಗೊಳಿಸಲು ಒತ್ತಾಯಿಸಿ ಧರಣಿ

**ಬಳ್ಳಾರಿ, ಜ. 27 :** ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ವರದಿಯನ್ನು ಬಿಡುಗಡೆಮಾಡದೆ ವಿಳಂಬ ಧೋರಣೆಯನ್ನು ಅನುಸರಿಸುತ್ತಿರುವಿರಿ. ಈ ವಿಳಂಬ ಧೋರಣೆಯನ್ನು ಕರ್ನಾಟಕ ಏಕಲವ್ಯ ಪಡೆ, ಜಿಲ್ಲಾಘಟಕ ತೀರ್ವವಾಗಿ ಖಂಡಿಸುತ್ತದೆ ಮತ್ತು ಕೂಡಲೆ ಬಿಡುಗಡೆ ಮಾಡುವಂತೆ ಒತ್ತಾಯಿಸುತ್ತಿದೆ. ಜಾತಿಜನಗಣತಿಯ ದತ್ತಾಂಶವನ್ನು ಬಿಡುಗಡೆಮಾಡಲು ಹಿಂಜರಿಯುತ್ತಿರುವುದು ಕಾನೂನು ಬದ್ಧವಾಗಿ ಅಸಮರ್ಥನೀಯ ಮತ್ತು ಆಡಳಿತಾತ್ಮಕವಾಗಿ ಅವಿವೇಕದ ಸಂಗತಿಯಾಗಿದೆ. ಜಾತಿಗನಜಗಣತಿ ದ ' ತ್ತಾ ಂ ಶ ' ವ ' ನ ' ್ನ ಬಿಡುಗಡೆವಾಡುವುದರಿಂದ ಕರ್ನಾಟಕದಲ್ಲಿ ಭೂಕಂಪ ಸಂಭವಿಸುದಿಲ್ಲವೆಂದು ಕರ್ನಾಟಕ ಏಕಲವ್ಯ ಪಡೆ, ಜಿಲ್ಲಾ ಘಟಕ ಭರವಸೆ ಕೊಡುತ್ತದೆ.

ಜಾತಿಜನಗಣತಿ ವರದಿಗೆ ಹತ್ತು ವರ್ಷಗಳಾಗಿವೆ. ಕರ್ನಾಟಕದ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಪ್ರಬಲವಾಗಿರುವ ಎರಡು ಜನಾಂಗಗಳ ದತ್ತಾಂಶ ಬಿಡುಗಡೆಯನ್ನು ವಿರೋಧಿಸುತ್ತಿವೆ. ಇದು ಪಟ್ಟಭದ್ರ ಹಿತಾಸಕ್ತಿಯ ಮನಸ್ಥಿತಿ ಅಷ್ಟೇ ಇದನ್ನು ತಾವು ಗಂಭೀರವಾಗಿ ಪರಿಗಣಿಸುವ ಅಗತ್ಯವಿಲ್ಲ.

ತಾವು ಜಾತಿಜನಗಣತಿ ದತ್ತಾಂಶವನ್ನು ಬಿಡುಗಡೆ ಮಾಡುತ್ತೀರಿ ಎಂಬ ಬಹುದೊಡ್ಡ ನಿರೀಕ್ಷೆಯಲ್ಲಿವೆ. ಈ ದೇಶದಲ್ಲಿ ಜಾತಿ ತಾರತಮ್ಯ ಇನ್ನೂ ಚಾಲ್ತಿಯಲ್ಲಿದೆ. ಸಮಾಜಿಕ ಅಸಮಾನತೆ ಎಂಬುದು ದೊಡ್ಡ ಪ್ರಮಾಣದಲ್ಲಿದೆ. ಸರ್ಕಾರದ ಬಳಿ ಜಾತಿ ಜನಾಂಗಗಳ ನಿಖರವಾದ ಮಾಹಿತಿ ಇಲ್ಲದೆ ರಾಜ್ಯಾಧಿಕಾರ ಮತ್ತು ಸಂಪತ್ತನ್ನು ಜಾತಿ ಜನಸಂಖ್ಯೆಗೆ ಅನುಗುಣವಾಗಿ ಹಂಚಿಕೆ ಮಾಡಲು ಆಗುವುದಿಲ್ಲ ಎಂಬುದು ಸ್ಪಷ್ಟ ಸಾಮಾಜದ ಕಟ್ಟ ಕಡೆಯ ವ್ಯಕ್ತಿಯ ಬೊಗಸೆ ಖಾಲಿಯಾಗಿದೆ. ತಾವು ಜಾತಿಜನಗಣತಿ ದತ್ತಾಂಶವನ್ನು ಬಿಡುಗಡೆ ಮಾಡದಿದ್ದರೆ ದಲಿತ, ದಮನಿತ, ಶೋಷಿತ ಸಮುದಾಯಗಳಿಗೆ ಮಾಡಿದ ಅನ್ಯಾಯವಾಗಿ ಇತಿಹಾಸದಲ್ಲಿ ದಾಖಲಾಗಲಿದೆ.ಜಾತಿಜನಗಣತಿ ದತ್ತಾಂಶಗಳನ್ನು ಬಿಡುಗಡೆ ಮಾಡುವುದರ ಮೂಲಕ ತಾವು ಒಬ್ಬ ದಿಟ್ಟ ಮತ್ತು ಎದೆಗಾರಿಕೆ ಇರುವ ಮುಖ್ಯಮಂತ್ರಿ ಎಂದು ಇ ತಿ ಹಾ ಸ ' ಪ ' ಂ ಟ ಗ ' ಳ ' ಲ್ಲಿ ದಾಖಲಾಗಬೇಕೆಂದು ನಾವು ಬಯಸುತ್ತೇವೆ. ಇದೊಂದು ಐತಿಹಾಸಿಕ ನಿರ್ಣಯವಾಗಲಿದೆ. ತಾವು ಕೂಡಲೆ ಜಾತಿ ಜನಗಣತಿಯ ಬಿಡುಗಡೆ ಮಾಡಬೇಕೆಂದು ಕರ್ನಾಟಕ ಏಕಲವ್ಯಪಡೆ ಜಿಲ್ಲಾ ಘಟಕ ಒತ್ತಾಯಿಸುತ್ತಿದೆ. ನಾವು ಸೋಮವಾರದಂದು ಒಂದು ದಿನದ ಸಾಂಕತಿಕ ಧರಣಿಯನ್ನು ನಿರ್ವಹಿಸಿ ಜಿಲ್ಲಾಧಿಕಾರಿ, ಬಳ್ಳಾರಿ ಇವರ ಮುಖಾಂತರ ಈ ಮನವಿ ಸಲ್ಲಿಸುತ್ತಿದ್ದೇವೆ.

ಜಿಲ್ಲಾಧ್ಯಕ್ಷ ಬಾದಾಮಿ ಶಿವಲಿಂಗ ನಾಯಕ, ಕೊರ್ಲಗುಂದಿ ದೊಡ್ಡ ಕೇಶವರೆಡ್ಡಿ, ವಿ.ಎಸ್ ಶಿವಶಂಕರ್, ಎಲ್ ಮಾರೆಣ್ಣ, ಉಪಾಧ್ಯಕ್ಷ ಬಿ. ಶಿಕಾಮಣಿ ನಾಯಕ, ವಕೀಲ ಬಿ ಜಯರಾಮ್, ಬಿ ರುದ್ರಪ್ಪ, ಬಿ. ಗಿರಿಯಪ್ಪ, ಕೆ,ಮಾರೆಣ್ಣ, ಬಿ. ಈಶ್ವರಪ್ಪ, ಜೋಳದರಾಶಿ ತಿಮ್ಮಪ್ಪ, ನಾರಾಯಣ ಸ್ವಾಮಿ, ಸದಾಶಿವಪ್ಪ ದುರ್ವಾಸ, ದೊಡ್ಡ ಕೇಶವ ರೆಡ್ಡಿ, ಕೆ.ಕೆ.ಹಾಳ್ ಸತ್ಯನಾರಾಯಣ, ಜನಾರ್ದನ ನಾಯಕ, ಕೊಳಗಲ್ಲು ಶಿವಾನಂದ, ರಾಮಯ್ಯ, ಸೋಮ ಸಮುದ್ರ ಲೋಕೇಶ್, ಬಾದಾಮಿ ಸೂರ್ಯ ನಾರಾಯಣ, ಕಾಡಪ್ಪನವರ ನಾಗರಾಜ್, ಗುಜ್ಜಲ ಗಾದಿಲಿಂಗಪ್ಪ, ಮುರಣಿ ತಿಪ್ಪೇಸ್ವಾಮಿ, ಐಹೊಳೆ ನಾಗರಾಜ್, ಮೋಕಾ ನೂರ್, ಸೇರಿದಂತೆ ಮತ್ತಿತರರು ಇದ್ದರು.


ಮಾಜಿ ಮುಖ್ಯಮಂತ್ರಿಗಳು ಹಾಗೂ
ಹಾವೇರಿ-ಗದಗ ಲೋಕಸಭಾ
ಕ್ಷೇತ್ರದ ಜನಪ್ರಿಯ ಸಂಸದರಾದ
ಸನ್ಮಾನ್ಯಶ್ರೀ
ಬಸವರಾಜ
ಬೊಮ್ಮಾಯಿ
ಅವರಿಗೆ
ಜನ್ಮದಿನದ
ಶುಭಾಶಯಗಳು
(28-01-2025)
ಶುಭಕೋರುವವರು
ಅಭಿಮಾನಿಗಳು ಹಾಗೂ ಹಿತೈಷಿಗಳು
ಹಾವೇರಿ-ಗದಗ ಲೋಕಸಭಾ ಕ್ಷೇತ್ರ
ಕರ್ನಾಟಕ
ಪ್ರಕಟಣೆ:
ಭರತ್ ಬೊಮ್ಮಾಯಿ
ಶಿಗ್ಗಾಂವಿ-ಸವಣೂರು ವಿಧಾನಸಭಾ ಕ್ಷೇತ್ರ